ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 56 ಸಂಚಿಕೆ- 56 | PAGE-8 ಪುಟ-8 | ಶನಿವಾರ 05.04.2025 | RS.2/- ಬೆಲೆ 2/-

## ಶಿವರಾಜ್ ಪಾಟೀಲ್, ಕುಂ.ವೀ, ವೆಂಕಟೇಶ ಕುಮಾರಗೆ

# ನಾಡೋಜ ಗೌರವ ಪದವಿ

ಮಲ್ಲಮ ನುಡಿ ವಾರ್ತೆ ಹೊಸಪೇಟೆ: ಏ4: ಹಂಪಿ ಕನ್ನಡ ವಿಶ್ವವಿದ್ಯಾಲಯ ನೀಡುವ "ನಾಡೋಜ"ಗೌರವಪದವಿಯನ್ನು ನಾಡಿನ ಹೆಸರಾಂತ ನಿವೃತ್ತ ನ್ಯಾಯಮೂರ್ತಿ ಶಿವರಾಜ್ ಪಾಟೀಲ್, ಖ್ಯಾತ ಲೇಖಕ ಕುಂ.ವೀರಭದ್ರಪ್ಪ ಮತ್ತು ಖ್ಯಾತ ಹಿಂದೂಸ್ತಾನಿ ಗಾಯಕ ಪಂಡಿತ ವೆಂಕಟೇಶ ಕುಮಾರರವರಿಗೆ ಇಂದು ಸಂಜೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರಧಾನ ಮಾಡಿದರು.



ವಿಶ್ವವಿದ್ಯಾಲಯದ ಬಯಲು ರಂಗ ಮಂದಿರ ನವರಂಗ ಮಂಟಪದಲ್ಲಿ ನಡೆದ ಸಾಂಪ್ರದಾಯಿಕ ಘಟಿಕೋತ್ಸವ ಮೆರವಣಿಗೆ ಸಮವಸ್ತದೊಂದಿಗೆ ಸಾಗಿಬಂತು.

ನಂತರ ರಾಷ್ಟ್ರಗೀತೆ, ನಾಡಗೀತೆ ಹಾಗೂವಿಶ್ವವಿದ್ಯಾಲಯಧ್ಯೆಯವಾಕ್ಯದ ಗೀತೆಯೊಂದಿಗೆ ಆರಂಭವಾದ ಕಾರ್ಯಕ್ರಮದಲ್ಲಿ ಕುಲಪತಿ ಡಾ.ಡಿ.ವಿ.ಪರಮಶಿವಮೂರ್ತಿ ಸ್ವಾಗತಿಸಿದರು.

ಸಮಕುಲಪತಿ ಹಾಗೂ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ ಡಿ.ಲಿಟ್ ಹಾಗೂ ಪಿ ಎಚ್ ಡಿ ಪದವಿ ಪ್ರಧಾನ ಮಾಡಿದರು.

ಘಟಿಕೋತ್ಸವ ಭಾಷಣವನ್ನು ತುಮಕೂರು ವಿಶ್ವವಿದ್ಯಾಲಯದ ವಿಶ್ರಾಂತಕುಲಪತಿಪ್ರೋರಾಜಾಸಾಬ್ ಎ.ಎಚ್ ನೆರವೇರಿಸಿದರು.

198 ವಿದ್ಯಾರ್ಥಿಗಳು ಪಿ ಎಚ್ ಡಿ ಪದವಿ, 7 ವಿದ್ಯಾರ್ಥಿಗಳು ಡಿ.ಲಿಟ್ ಸರಿದಂತೆ 205 ವಿದ್ಯಾರ್ಥಿಗಳು ಪದವಿಯನ್ನು ಪಡೆದರು.

ಸಿಂಡಿಕೇಟ್ ಸದಸ್ಯರು ಸೇರಿದಂತೆ ಹಣಕಾಸು ಅಧಿಕಾರಿ ಡಾ.ಶ್ರೀಧರ, ಡಾ.ಅಮರೇಶ ಯತಗಲ್,ಡಾ.ಎಫ್.ಟಿ.ಹಳ್ಳಿಕೇರಿ, ಡಾ.ಚಲುವರಾಜು,ಡಾ.ಶಿವಾನಂದ ಎಸ್.ವಿರಕ್ತಮಠ, ಶೈಲಜಾ ಹಿರೇಮಠ,ನಾಡೋಜ ಮಹೇಶ ಜೋಶಿ,ಡಾ.ಅಶೋಕ ರಂಚೇರೆ, ಡಾ.ವಿರೂಪಾಕ್ಷ ಪೂಜಾರಹಳ್ಳಿ, ಡಾ.ಎಸ್.ಆರ್. ಚೆನ್ನವೀರಪ್ಪ, ಡಾ.ಈ.ಯರ್ರಿಸ್ವಾಮಿ,ಡಾ.ಎಸ್.ವೈ. ಸೋಮಶೇಖರ್,ಡಾ.ವೆಂಕಟೇಶ, ಬಿ.ಗುರುಬಸವಪ್ಪ, ಎಸ್.ಕೆ. ವಿಜೇಯಂದ್ರ,ಕೆ.ಶ್ರೀನಿವಾಸಲು, ಡಾ.ಡಿ.ಮೀನಾಕ್ಷಿ ಇದ್ದರು.

ಕುಲಸಚಿವ ಡಾ.ವಿಜಯ ಪೂಣಚ್ಚವಂದನಾಪಣೆಯೊಂದಿಗೆ ಘಟಿಕೋತ್ಸವ ಸಂಪನ್ನವಾಯ್ತು.

## ಸಂಪುಟ ಪುನಾರಚನೆಯಲ್ಲಿ 'ಕಾಮರಾಜ್ ಪ್ಲಾನ್'

# ಅಳವಡಿಕೆಗೆ ನಿಷ್ಠಾವಂತರ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಏ.4: ರಾಜ್ಯದಲ್ಲಿ ಶೀಘ್ರದಲ್ಲೇ ಸಚಿವ ಸಂಪುಟ ಪುನಾರಚನೆ ನಡೆಯಲಿದೆ ಎಂಬ ಊಹಾಪೋಹಗಳುತೀವ್ರಗೊಳ್ಳುತ್ತಿದ್ದಂತೆ ರಾಜಕೀಯ ಬಿರುಗಾಳಿ ಎದ್ದಿದೆ.

ಆಡಳಿತಾರೂಢಕಾಂಗ್ರೆಸ್‌ನೊಳಗಿನ ಅಸಮಾಧಾನದ ನಡುವೆ, ಪಕ್ಷದ ನಿಷ್ಠಾವಂತರು ಸಚಿವ ಸಂಪುಟ ಪುನಾರಚನೆವೇಳೆಪ್ರಸಿದ್ಧ'ಕಾಮರಾಜ್ ಯೋಜನೆ'ಯನ್ನುಜಾರಿಗೆತರಬೇಕೆಂದು ಒತ್ತಾಯಿಸುತ್ತಿದ್ದಾರೆ.

ಪ್ರಸ್ತುತ ಸಚಿವರಲ್ಲಿ ಸುಮಾರು ಶೇ. 70–80 ರಷ್ಟು ಜನರು ಸಿದ್ದರಾಮಯ್ಯ ಅವರ 2013–18 ಸರ್ಕಾರ ಹಾಗೂ ಎಚ್‌ಡಿ ಕುಮಾರಸ್ವಾಮಿ ಅವರೊಂದಿಗಿನ 14 ತಿಂಗಳಮೈತ್ರಿಕೂಟದಲ್ಲಿಣಟಿಜಜಿಟಿಜಜ ಸಚಿವರಾಗಿದ್ದರು. ಹೀಗಾಗಿ ಈ ಬಾರಿ ಸಂಪುಟ ಪುನಾರಚನೆ ವೇಳೆ ಹೊಸಬರಿಗೆ ಆದ್ಯತೆ ನೀಡುವಂತೆ ಬೇಡಿಕೆ ಹೆಚ್ಚುತ್ತಿದೆ.

ಹಿಂದಿನ ಕಾಂಗ್ರೆಸ್ ಸರ್ಕಾರದಲ್ಲಿ ಸಚಿವರಾಗಿದ್ದವರನ್ನುಉಳಿಸಿಕೊಳ್ಳುವುದರಿಂದ ನಿಶ್ಚಲತೆ, ಸಾರ್ವಜನಿಕ ಭ್ರಮನಿರಸನ ಮತ್ತು ಆಡಳಿತದಲ್ಲಿ ಅದಕ್ಷತೆಗೆ ಕಾರಣವಾಗಿದೆ ಎಂದು ಪಕ್ಷದ ಒಳಗಿನವರ ಆರೋಪವಾಗಿದೆ. ಕಾಂಗ್ರೆಸ್‌ಗೆ ಸಂಪುಟ ಪುನಾರಚನೆಗೆ ಸರಿಯಾದ ತಂತ್ರದ ಅಗತ್ಯವಿದೆ. ಅನೇಕ ವರ್ಷಗಳಿಂದ ಸಚಿವ ಸಂಪುಟದಲ್ಲಿ ಹಿರಿಯ ತಲೆಗಳು ಪ್ರಾಬಲ್ಯ ಸಾಧಿಸಿವೆ, ಹೀಗಾಗಿ ಕ್ರಿಯಾತ್ಮಕ ಆಡಳಿತಕ್ಕೆ ಅವಕಾಶ ಕಡಿಮೆಯಾಗಿದೆ ಎಂದು ಹೇಳಲಾಗಿದೆ.


ಇದು ಬದಲಾವಣೆಯ ಸಮಯವಾಗಿದ್ದು, ತಳಮಟ್ಟದ ಕಾರ್ಯಕರ್ತರ ಅಭಿಪ್ರಾಯಗಳನ್ನು ಸಂಗ್ರಹಿಸಿ, ಅವರ ಆಯ್ಕೆಗೆ ಮನ್ನಣೆ ನೀಡಬೇಕೆಂದು ಎಂದು ಪಕ್ಷದ ಹಿರಿಯ ಮುಖಂಡರೊಬ್ಬರು ತಿಳಿಸಿದ್ದಾರೆ.

1960 ರ ದಶಕದಲ್ಲಿ ಹಿರಿಯ ಕಾಂಗ್ರೆಸ್ ನಾಯಕ ಕೆ. ಕಾಮರಾಜ್ ಅವರು ಮೊದಲು ಜಾರಿಗೆ ತಂದ ಕಾಮರಾಜ್ ಯೋಜನೆ ಪ್ರಕಾರ ಅನುಭವಿ ಸಚಿವರು ರಾಜೀನಾಮೆ ನೀಡಿ ಪಕ್ಷ ಸಂಘಟನೆ ಕೆಲಸ ನಿರ್ವಹಿಸಬೇಕು ಪ್ರತಿಪಾದಿಸುತ್ತದೆ, ಇದು ಹೊಸ ನಾಯಕತ್ವಕ್ಕೆ ದಾರಿ ಮಾಡಿಕೊಡುತ್ತದೆ ಎಂದಿದ್ದಾರೆ.

ದೀರ್ಘಕಾಲ ಸೇವೆ ಸಲ್ಲಿಸಿದ ಸಚಿವರನ್ನುಕೈಬಿಟ್ಟುಮೂರು ಅಥವಾ ನಾಲ್ಕು ಬಾರಿ ಆಯ್ಕೆಯಾದ 25 ಹಿರಿಯ ಶಾಸಕರನ್ನು ಸಂಪುಟಕ್ಕೆ ಸೇರಿಸಿಕೊಳ್ಳಬೇಕೆಂದುಒತ್ತಾಯಿಸಿದ್ದಾರೆ. ಮುಂಬರುವ ಜಿಲ್ಲಾ ಪಂಚಾಯತ್ ಚುನಾವಣೆಗೆಸಿದ್ಧತೆನಡೆಸುತ್ತಿರುವಾಗ ಪಕ್ಷಕ್ಕೆ ಇರುವ ಯಾವುದೇ ನಕಾರಾತ್ಮಕ

(2ನೇ ಪುಟ ನೋಡಿ)

## 8 ರಾಜ್ಯಗಳಿಗೆ ಬಿಸಿಗಾಳಿ ಎಚ್ಚರಿಕೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಏ.4:ವಾಯುವ್ಯಭಾರತವು ಮುಂದಿನ ಆರು ದಿನಗಳಲ್ಲಿ ಹೀಟ್ ವೇವ್(ಬಿಸಿಗಾಳಿ) ಪರಿಸ್ಥಿತಿಯನ್ನು ಅನುಭವಿಸುವ ಸಾಧ್ಯತೆ ಇದೆ ಮತ್ತು ದೆಹಲಿಯಲ್ಲಿ ತಾಪಮಾನವು 42 ಡಿಗ್ರಿ ಸೆಲ್ಸಿಯಸ್‌ಗೆ ತಲುಪುವ ನಿರಿಕ್ಷೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ(ಐಎಂಡಿ) ಶುಕ್ರವಾರ ಎಚ್ಚರಿಕೆ ನೀಡಿದೆ.ದಕ್ಷಿಣ ಹರಿಯಾಣ,ದೆಹಲಿ,ಪಶ್ಚಿಮ ಉತ್ತರ ಪ್ರದೇಶ, ಹಿಮಾಚಲ ಪ್ರದೇಶ, ಪಂಜಾಬ್,ಗುಜರಾತ್,ರಾಜಸ್ಥಾನ ಮತ್ತು ಪಶ್ಚಿಮ ಮಧ್ಯಪ್ರದೇಶಗಳಿಗೆ ಬಿಸಿಗಾಳಿಯ ಎಚ್ಚರಿಕೆ ನೀಡಲಾಗಿದೆ.

ಮಧ್ಯ ಮತ್ತು ವಾಯುವ್ಯ ಭಾರತದ ಹಲವು ಭಾಗಗಳಲ್ಲಿ ಗರಿಷ್ಠ ತಾಪಮಾನವು 2 ರಿಂದ 4 ಡಿಗ್ರಿ ಸೆಲ್ಸಿಯಸ್ ಏರಿಕೆಯಾಗುವ ನಿರೀಕ್ಷೆಯಿದೆ ಎಂದು ಐಎಂಡಿ ತಿಳಿಸಿದೆ.ಇನ್ನು ದೆಹಲಿಯಲ್ಲಿ ಏಪ್ರಿಲ್ 6 ಅಥವಾ 7 ರ ವೇಳೆಗೆ ಕೆಲವು ಸ್ಥಳಗಳಲ್ಲಿ ಹಗಲಿನ ತಾಪಮಾನವು ಸುಮಾರು 42 ಡಿಗ್ರಿ ಸೆಲ್ಸಿಯಸ್‌ಗೆ ತಲುಪಬಹುದು ಐಎಂಡಿ ಹೇಳಿದೆ.

ಈ ವಾರದ ಆರಂಭದಲ್ಲಿ, ಏಪ್ರಿಲ್ ನಿಂದ ಜೂನ್ ವರೆಗೆ ಭಾರತದಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ತಾಪಮಾನ ಕಂಡುಬರುವ ನಿರೀಕ್ಷೆಯಿದೆ.

## ಸಂಸತ್‌ನಲ್ಲಿ ವಕ್ಫ್ ಮಸೂದೆ

## ಅಂಗೀಕಾರ: ಐತಿಹಾಸಿಕ ಮೋದಿ ಬಣ್ಣನೆ

ಮಲ್ಲಮ್ಮನುಡಿವಾರ್ತೆನವದೆಹಲಿ:ಏ.4: ವಕ್ಫ್ ತಿದ್ದುಪಡಿ ಮಸೂದೆಯು ಸಂಸತ್‌ನ ಉಭಯ ಸದನಗಳಲ್ಲಿ ಅಂಗೀಕಾರಗೊಂಡಿದ್ದು ಐತಿಹಾಸಿಕ ಕ್ಷಣ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದ್ದಾರೆ.

ಈ ಕುರಿತು ಎಕ್ಸ್‌ನ ಪೋಸ್ಟ್‌ನಲ್ಲಿ ಪ್ರತಿಕ್ರಿಯಿಸಿದ ಅವರು, ಮಸೂದೆ ಅಂಗೀಕಾರಗೊಂಡಿರುವುದುಸಾಮಾಜಿಕ-ಆರ್ಥಿಕ ನ್ಯಾಯ, ಪಾರದರ್ಶಕತೆ ಮತ್ತು ಎಲ್ಲರನ್ನೂ ಒಳಗೊಂಡ ಬೆಳವಣಿಗೆಗಾಗಿ ನಮ್ಮ ಸಾಮೂಹಿಕ ಅನ್ವೇಷಣೆಯಲ್ಲಿ ಒಂದು ಮಹತ್ವದ



ಕ್ಷಣವಾಗಿದೆ. ಇದು ದೀರ್ಘಕಾಲದಿಂದ ಅವಕಾಶ ವಂಚಿತರಾಗಿರುವ ಜನರಿಗೆ ಸಹಕಾರಿಯಾಗಿದೆ ಎಂದು ಮೋದಿ ತಿಳಿಸಿದ್ದಾರೆ. ದಶಕಗಳಿಂದ ವಕ್ಫ್ ವ್ಯವಸ್ಥೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯ ಕೊರತೆ ಇತ್ತು. ಇದರಿಂದ ಮುಸ್ಲಿಂ ಮಹಿಳೆಯರು,ಬಡ ಮುಸ್ಲಿಮರು, ಪಸ್ಮಾಂಡ ಮುಸ್ಲಿಮರ ಹಿತಾಸಕ್ತಿಗಳಿಗೆ ಧಕ್ಕೆಯಾಗಿತ್ತು. ಸಂಸತ್ತು ಅಂಗೀಕರಿಸಿದ ಮಸೂದೆ ಪಾರದರ್ಶಕತೆಯನ್ನು ಹೆಚ್ಚಿಸುತ್ತವೆ ಮತ್ತು ಜನರ ಹಕ್ಕುಗಳನ್ನು ರಕ್ಷಿಸುತ್ತವೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ನಾವು ಆಧುನಿಕ ಮತ್ತು ಸಾಮಾಜಿಕ ನ್ಯಾಯಕ್ಕೆ ಬದ್ಧವಾಗಿರುವ ಯುಗವನ್ನು ಪ್ರವೇಶಿಸುತ್ತೇವೆ.ಪ್ರತಿಯೊಬ್ಬನಾಗರಿಕನ ಘನತೆಗೆ ಆದ್ಯತೆ ನೀಡಲು ನಾವು ಬದ್ಧರಾಗಿದ್ದೇವೆ. ಬಲಿಷ್ಠ,ಅಂತರ್ಗತ, ಸಹಾನುಭೂತಿ ಭಾರತ ನಿರ್ಮಾಣಕ್ಕೆ ಮಸೂದೆ ಪೂರಕವಾಗಿದೆ ಎಂದು ಮೋದಿ ತಿಳಿಸಿದ್ದಾರೆ.

## ಆಲಮಟ್ಟಿ ಅಣೆಕಟ್ಟು ಎತ್ತರ ಹೆಚ್ಚಳಕ್ಕೆ ಗೆಜೆಟ್

## ಅಧಿಸೂಚನೆ ಹೊರಡಿಸಲು ಕೇಂದ್ರಕ್ಕೆ ಡಿಕೆಶಿ ಮನವಿ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಏ.4: ಮಹಾರಾಷ್ಟ್ರ, ಕರ್ನಾಟಕ, ತೆಲಂಗಾಣ ಮತ್ತು ಆಂಧ್ರಪ್ರದೇಶವನ್ನು ಒಳಗೊಂಡ ದಶಕಗಳಷ್ಟು ಹಳೆಯದಾದ ಕೃಷ್ಣಾ ನೀರು ಹಂಚಿಕೆ ವಿವಾದದ ಕುರಿತು ಒಮ್ಮತ ಮೂಡಿಸಲು ಕೇಂದ್ರ ಸರ್ಕಾರ ಶೀಘ್ರದಲ್ಲೇ ಸಭೆ ಕರೆಯಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶುಕ್ರವಾರ ಹೇಳಿದ್ದಾರೆ.

"ಕೃಷ್ಣಾನದಿ ನೀರು ಹಂಚಿಕೆ ವಿವಾದ ಬಗೆಹರಿಸಲು ಸಂಬಂಧಪಟ್ಟ ರಾಜ್ಯ ಸರ್ಕಾರಗಳೊಂದಿಗೆ ಶೀಘ್ರದಲ್ಲೇ ಸಭೆ ಕರೆಯಲು ಕೇಂದ್ರ ಒಪ್ಪಿಕೊಂಡಿದೆ" ಎಂದು ಶಿವಕುಮಾರ್ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ನಿಯೋಗ ಗುರುವಾರ ಮೇಕೆದಾಟು ಮತ್ತು ಭದ್ರಾ ಮೇಲ್ದಂಡೆ



ಯೋಜನೆಗಳಿಗೆ ಅನುಮೋದನೆ ಪಡೆಯಲು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಅವರನ್ನು ಭೇಟಿ ಮಾಡಿತು.

ಇಂದು ಕರ್ನಾಟಕ ಭವನದಲ್ಲಿ ಸುದ್ದಿಗೋಷ್ಠಿಉದ್ದೇಶಿಸಿ ಮಾತನಾಡಿದ ಡಿಸಿಎಂ, ಆಲಮಟ್ಟಿ ಅಣೆಕಟ್ಟು ಎತ್ತರ ಹೆಚ್ಚಿಸುವ ಬಗ್ಗೆ ಗೆಜೆಟ್ ಅಧಿಸೂಚನೆ ಹೊರಡಿಸಬೇಕು ಎಂದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೇವೆ. ಕೇಂದ್ರ ಜಲಶಕ್ತಿ ಸಚಿವರು ಕೃಷ್ಣಾ ನದಿ ಜಲಾನಯನ ಪ್ರದೇಶದ ರಾಜ್ಯಗಳ ಪ್ರತಿನಿಧಿಗಳನ್ನು ಕರೆಸಿ ಅಣೆಕಟ್ಟು ಎತ್ತರ ಹೆಚ್ಚಳದ ಬಗ್ಗೆ ಮುಂದಿನ 15 ದಿನಗಳಲ್ಲಿ ಸಭೆ ನಡೆಸಿ ಚರ್ಚಿಸುವುದಾಗಿ ಭರವಸೆ ನೀಡಿದ್ದಾರೆ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿದ್ದಾರೆ.

ಕೇಂದ್ರ ಜಲಶಕ್ತಿ ಸಚಿವರಾದ ಸಿ.ಆರ್ ಪಾಟೀಲ್ ಅವರನ್ನು, ರಾಜ್ಯ ಖಾತೆ ಸಚಿವರಾದ ಸೋಮಣ್ಣ ಅವರ ಜೊತೆ ಭೇಟಿ ಮಾಡಲಾಗಿತ್ತು. ಮಹಾರಾಷ್ಟ್ರ, ಆಂಧ್ರ, ತೆಲಂಗಾಣ ಮತ್ತು ನಮಗೆ ಎಷ್ಟು ನೀರು ಸಿಗಬೇಕು ಹಾಗೂ ಅಣೆಕಟ್ಟು ಎಷ್ಟು ಎತ್ತರ ಮಾಡಬೇಕು ಎಂದು ಹಿಂದೆಯೇ ತೀರ್ಮಾನವಾಗಿದೆ. 524 ಅಡಿ ಎತ್ತರಕ್ಕೆ ಎಷ್ಟು ಭೂಮಿ ಬೇಕಾಬಹುದು ಎಂದು ಅಂದಾಜಿಸಿ ಭೂಸ್ವಾಧೀನಕ್ಕೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ಈ ಕೆಲಸವನ್ನು ಬೇಗ ಮುಗಿಸುವ

(2ನೇ ಪುಟ ನೋಡಿ)


## ದೇವರ ದಾಸಿಮಯ್ಯ ಜಾತಿರಹಿತ ಸಮಾಜಕ್ಕೆ ಮುನ್ನುಡಿ ಬರೆದವರು:ಹೆಚ್ಚುವರಿ ಡಿಸಿ ಕೋಟೆಪ್ಪಗೋಳ್



ಮಲ್ಲಮ್ಮನುಡಿವಾರ್ತೆಯಾದಗಿರಿ:ಏ:4: ಹನ್ನೊಂದನೇ ಶತಮಾನದ ಆದ್ಯ ವಚನಕಾರ ದೇವರ ದಾಸಿಮಯ್ಯ 179 ವಚನಗಳನ್ನು ಬರೆಯುವ ಮೂಲಕ ವೈಚಾರಿಕತೆ ಮತ್ತು ಜಾತಿರಹಿತ ಸಮಾಜಕ್ಕೆ ಮುನ್ನುಡಿ ಬರೆದ ಮಹಾನ್ ವ್ಯಕ್ತಿಗಳೆಂದು ಹೆಚ್ಚುವರಿ ಜಿಲ್ಲಾಧಿಕಾರಿ ಶರಣಬಸಪ್ಪ

(2ನೇ ಪುಟ ನೋಡಿ)

## ಯಾದಗಿರಿ : ಸಿಡಿಪಿಓ ಲೋಕಾಯುಕ್ತ ಬಲೆಗೆ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಏ.4:ಅಂಗನವಾಡಿ ಸಹಾಯಕಿಯ ಗೈರು ಹಾಜರಿ ಸಕ್ರಮಗೊಳಿಸಿ ವೇತನ ಬಿಡುಗಡೆ ಮಾಡಲು ಒಂದು ಲಕ್ಷ ರೂಪಾಯಿಗೆ ಬೇಡಿಕೆಇಟ್ಟಿದ್ದ ಸಿಡಿಪಿಓ ವನಜಾಕ್ಷಿಯನ್ನು ಯಾದಗಿರಿ ಬಸ್ ನಿಲ್ದಾಣದ ಬಳಿ 80 ಸಾವಿರ ರೂಪಾಯಿ ಲಂಚ ಪಡೆಯುತ್ತಿರುವಾಗ ರೆಡ್ ಹ್ಯಾಂಡ್ ಆಗಿ ಯಾದಗಿರಿ ಲೋಕಾಯುಕ್ತ ಡಿಎಸ್‌ಪಿ ಜೆ.ಹೆಚ್. ಇನಾಂದಾರ್ ನೇತೃತ್ವದಲ್ಲಿ ನಡೆದ ದಾಳಿಯಲ್ಲಿ ಸಿಕ್ಕಿಬಿದ್ದಿದ್ದಾರೆ.

ಪಿಐ ಸಿದ್ದರಾಯ, ಸಂಗಮೇಶ ಹಾಗೂ ಇತರ ಲೋಕಾಯುಕ್ತ ಸಿಬ್ಬಂದಿಗಳು ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದರು.

## ನೇಪಾಳದಲ್ಲಿ 5.0 ತೀವ್ರತೆಯ ಭೂಕಂಪನ :

# ಉತ್ತರ ಭಾರತದಲ್ಲೂ ಕಂಪನ



ಮಲ್ಲಮ್ಮನುಡಿವಾರ್ತೆಕಠ್ಮಂಡು:ಏ.4: ಮ್ಯಾನ್ಮಾರ್, ಥಾಯ್ಲೆಂಡ್ ಹಾಗೂ ಜಪಾನ್ ಬಳಿಕ ಈಗ ಭಾರತದ ನೆರೆಯ ರಾಷ್ಟ್ರ ನೇಪಾಳದಲ್ಲಿ 5.0 ತೀವ್ರತೆಯ ಭೂಕಂಪನ ಸಂಭವಿಸಿದೆ.

ರಾಷ್ಟ್ರೀಯ ಭೂಕಂಪನ ಕೇಂದ್ರದ ಪ್ರಕಾರ, ಶುಕ್ರವಾರ ಸಂಜೆ ನೇಪಾಳದಲ್ಲಿ 5.0 ತೀವ್ರತೆಯ ಭೂಕಂಪ ಸಂಭವಿಸಿದೆ. ಸ್ಥಳೀಯ ಕಾಲಮಾನ ರಾತ್ರಿ 7.52ಕ್ಕೆ(ಸ್ಥಳೀಯ ಕಾಲಮಾನ) ಭೂಮಿಯಿಂದ 20 ಕಿಮೀ ಆಳದಲ್ಲಿ ಕೇಂದ್ರ ಬಿಂದು ಪತ್ತೆಯಾಗಿದೆ. ಇದರ ಪರಿಣಾಮ ಉತ್ತರ ಭಾರತದಲ್ಲೂ ಲಘು ಭೂಕಂಪನದ ಅನುಭವವಾಗಿದೆ ಎಂದು ವರದಿಯಾಗಿದೆ.

ಇತ್ತೀಚೆಗಷ್ಟೇ ಮ್ಯಾನ್ಮಾರ್‌ನಲ್ಲಿ 7.7 ತೀವ್ರತೆಯೇ ಭಾರೀ ಭೂಕಂಪ ಸಂಭವಿಸಿತ್ತು. ಇದರಿಂದ ನೂರಾರು ಗಗನಚುಂಬಿ ಕಟ್ಟಡಗಳು ನೆಲಸಮಗೊಂಡಿದ್ದಲ್ಲದೇ ಸಾವಿರಾರು ಸಂಖ್ಯೆಯ ಜನ ಸಾವನ್ನಪ್ಪಿದ್ದಾರೆ. ಈವರೆಗೆ ಸುಮಾರು 441 ಮಂದಿ ಕಾಣೆಯಾಗಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

## ಪ್ರಯತ್ನ ಪರಿಶ್ರಮದಿಂದ ಪ್ರಗತಿ ಸಾಧ್ಯ : ರಂಭಾಪುರಿ ಜಗದ್ಗುರುಗಳು

ಕಲಬುರಗಿ:ಏ.4:ಬಾಳಿನ ಭಾಗ್ಯೋದಯಕ್ಕೆ ಆದರ್ಶ ಮೌಲ್ಯಗಳ ಪರಿಪಾಲನೆ ಬೇಕು. ಗಳಿಸಿದ ಸಂಪತ್ತು ಸತ್ಕಾರ್ಯಗಳಿಗೆ ಸಲ್ಲಬೇಕು. ನಿರಂತರ ಪ್ರಯತ್ನ ಮತ್ತು ಪರಿಶ್ರಮದಿಂದ ಅದ್ಭುತ ಪ್ರಗತಿ ಕಾರ್ಯ ಮಾಡಲು ಸಾಧ್ಯವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಅವರು ಶುಕ್ರವಾರ ತಾಲೂಕಿನ ಬಬಲಾದ(ಎಸ್) ಗ್ರಾಮದ ಶ್ರೀಮದ್ ರಂಭಾಪುರಿ ಖಾಸಾ ಶಾಖಾ ಶ್ರೀ ಮಲ್ಲಿಕಾರ್ಜುನ ಬೃಹನ್ಮಠದ 61ನೇ ಜಾತ್ರಾಮಹೋತ್ಸವ ಹಾಗೂ ಸಿದ್ಧಶ್ರೀ ಸಭಾ ಭವನ ಲೋಕಾರ್ಪಣೆ ಅಂಗವಾಗಿ ಜರುಗಿದ ಧರ್ಮ ಸಂಸ್ಕೃತಿ ಸಂವರ್ಧನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಧರ್ಮ ದೇಶ ಮನುಷ್ಯನ ಎರಡು ಕಣ್ಣು. ನೀತಿ ನಿಯಮ ಇಲ್ಲದೇ ಸಮಾಜ ನಾಡು ಬೆಳೆಯಲಾರದು. ಧರ್ಮ ಮತ್ತು ಧರ್ಮಾಚರಣೆಯಿಂದ ಮಾನವನ ಬದುಕು ಉಜ್ವಲಗೊಳ್ಳುತ್ತದೆ. ಹಣ ಅಧಿಕಾರದ ಬಗ್ಗೆ ಸದಾ ಚಿಂತಿಸುವ ಮನುಷ್ಯ ದೇಶ ಸಂಸ್ಕೃತಿ ಮತ್ತು ಧರ್ಮದ ಬಗ್ಗೆ ಚಿಂತಿಸಲಾರ. ಶಾಂತಿ ನೆಮ್ಮದಿಯ ಬದುಕಿಗೆ ಧರ್ಮ ಬೇಕು. ಸಂತೃಪ್ತಿ ಸಮೃದ್ಧಿಗಾಗಿ ಧರ್ಮಾಚರಣೆ ಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರ ಜ್ಞಾನ ಕ್ರಿಯಾತ್ಮಕವಾದ ಧರ್ಮ ಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಸಲು ಸಾಧ್ಯವಾಗುತ್ತದೆ. ಜಾತ್ರಾ ಮಹೋತ್ಸವದಿಂದ ಪರಸ್ಪರ ಸಾಮರಸ್ಯ ಸೌಹಾರ್ದತೆ ಬೆಳೆದು ಬರಲು ಸಹಕಾರಿಯಾಗುತ್ತದೆ. ಮನುಷ್ಯ ಜೀವನದಲ್ಲಿ ಸಾಧನೆ ಮಾತನಾಡಬೇಕು. ಆದರೆ ಮಾತನಾಡುವುದೇ ಸಾಧನೆಯಾಗಬಾರದು. ಶಿವಮೂರ್ತಿ ಶಿವಾಚಾರ್ಯ ಸ್ವಾಮಿಗಳಿಗೆ ಶ್ರೀ ಮಠದ ಅಧಿಕಾರ ಸೂತ್ರ ಅನುಗ್ರಹಿಸಿದ ನಂತರ ಬಹಳಷ್ಟು ಅಭಿವೃದ್ಧಿ ಕಾರ್ಯ ಮಾಡಿದ್ದಾರೆ. ಅವರ ಕ್ರಿಯಾಶೀಲ

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ಪ್ರಗತಿ ಸಾಧ್ಯ : ರಂಭಾಪುರಿ ಜಗದ್ಗುರುಗಳು

ಬದುಕಿಗೆ ಭವ್ಯ ಸುಂದರವಾಗಿ ತಲೆ ಎತ್ತಿ ನಿಂತ ಸಿದ್ಧಶ್ರೀ ಸಭಾ ಭವನ ಸಾಕ್ಷಿಯಾಗಿದೆ. ಭವಿಷ್ಯತ್ತಿನ ದಿನಗಳಲ್ಲಿ ಇನ್ನಷ್ಟು ಸತ್ಕಾರ್ಯಗಳು ನಡೆಯುವಲ್ಲಿ ಯಾವುದೇ ಸಂದೇಹ ಇಲ್ಲವೆಂದು ಹರುಷ ವ್ಯಕ್ತಪಡಿಸಿ ಶ್ರೀಗಳವರಿಗೆ ರೇಶ್ಮೆ ಮಡಿ ಫಲ ಪುಷ್ಪದೊಂದಿಗೆ "ವೀರಶೈವ ಧರ್ಮ ರತ್ನ" ಎಂಬ ಪ್ರಶಸ್ತಿಯಿತ್ತು ಶುಭ ಹಾರೈಸಿದರು.

ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಸಭಾ ಭವನ ಉದ್ಘಾಟಿಸಿ ಮಾತನಾಡಿ ಶ್ರೀ ಮಠದ ಚಾರಿತ್ರಿಕ ಇತಿಹಾಸದಲ್ಲಿ ಈ ದಿನ ಅವಿಸ್ಮರಣೀಯ ದಿನ. ಶ್ರೀಗಳವರ ಬಹು ದಿನಗಳ ಕನಸು ನನಸಾದ ಸುದಿನ. ಶ್ರೀಗಳವರ ನಿರಂತರ ಪ್ರಯತ್ನ ಮತ್ತು ಸಾಧನೆಯಿಂದ ಅದ್ಭುತ ಕಾರ್ಯ ಕೈಗೊಳ್ಳಲು ಸಾಧ್ಯವಾಗಿದೆ. ಶ್ರೀ ರಂಭಾಪುರಿ ಜಗದ್ಗುರುಗಳವರ ಆಶೀರ್ವಾದದ ಬಲ ಶ್ರೀಗಳವರ ಮೇಲಿದೆ ಎಂದು ಸಂತೋಷ ವ್ಯಕ್ತಪಡಿಸಿದರು. ಧರ್ಮ ಸಮಾರಂಭ ಉದ್ಘಾಟಿಸಿದ ಕಲಬುರ್ಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಮಾತನಾಡಿ ಬೆಟ್ಟ ಎಂದಿಗೂ ಬಾಗುವುದಿಲ್ಲ. ಆದರೆ ಕಷ್ಟಪಟ್ಟು ಏರಿದ ಮೇಲೆ ಅದು ನಮ್ಮ ಪಾದದ ಕೆಳಗೆ ಇರುತ್ತದೆ. ಹಿಂದು ಗುರು ಮುಂದೆ ಗುರಿ ಇದ್ದಾಗ ಜೀವನದಲ್ಲಿ ಶ್ರೇಯಸ್ಸು ಕಾಣಲು ಸಾಧ್ಯ. ಶಿವಮೂರ್ತಿ ಶ್ರೀಗಳು ರಚನಾತ್ಮಕ ಕಾರ್ಯಗಳ ಮೂಲಕ ಭಕ್ತ ಸಂತೃಪ್ತಿಗೆ ಪಾತ್ರರಾಗಿದ್ದಾರೆಂದು ಶ್ಲಾಘಿಸಿದರು. ನೇತೃತ್ವ ವಹಿಸಿದ ಮಠಾಧ್ಯಕ್ಷರಾದ ಶಿವಮೂರ್ತಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಪ್ರತಿಯೊಬ್ಬರು ತಮ್ಮ ಏಳ್ಗೆಯನ್ನಷ್ಟೇ ಬಯಸಿ ಬಾಳುತ್ತಾರೆ. ಆದರೆ ದೇಶದ ಅಭಿವೃದ್ಧಿ, ಬಡ ಜನರ ಕಲ್ಯಾಣ, ದೇಶ ಕಾಯುವ ಸೈನಿಕರ ಚಿಂತನ, ಅನ್ನ ನೀಡುವ ರೈತನ ಬಗ್ಗೆ ಯಾರೂ ಚಿಂತಿಸುವುದಿಲ್ಲ. ನಿತ್ಯದಲ್ಲಿ ಅರ್ಧ ಗಂಟೆ ಯೋಚಿಸಿ ಕಾರ್ಯೋನ್ಮುಖರಾದರೆ ಅದ್ಭುತ ಪ್ರಗತಿ ಸಾಧಿಸಲು ಸಾಧ್ಯವಾಗುತ್ತದೆ. ಮಠಗಳು ಸಹ ಸಕಲ ಭಕ್ತರ ಅನುಕೂಲಕ್ಕಾಗಿ ಹಲವಾರು ಅಭಿವೃದ್ಧಿ ಕೈಗೊಂಡಿದ್ದು ತೃಪ್ತಿ ತಂದಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದದ ಶಕ್ತಿ ನಮಗೆ ಆನೆ ಬಲ ತಂದು ಕೊಟ್ಟಿದೆ ಎಂದು ಭಾವನಾತ್ಮಕವಾಗಿ ನುಡಿದರು.

ಈ ಪವಿತ್ರ ಸಮಾರಂಭದಲ್ಲಿ ಕಲಬುರ್ಗಿ ಡಾ॥ರಾಜಶೇಖರ ಶ್ರೀಗಳು, ಅಂಕಲಗಿ ಅಭಿನವ ಗುರುಬಸವ ಶ್ರೀಗಳು, ಹೆಡಗಿಮುದ್ರಾ ಶಾಂತಮಲ್ಲಿಕಾರ್ಜುನ ಶ್ರೀಗಳು, ಶ್ರೀನಿವಾಸ ಸರಡಗಿ ರೇವಣಸಿದ್ಧ ಶ್ರೀಗಳು,ತೊನಸನಹಳ್ಳಿ ರೇವಣಸಿದ್ಧ ಚರಂತೇಶ್ವರ ಶ್ರೀಗಳು, ರಾಜೇಶ್ವರ ಘನಲಿಂಗ ರುದ್ರಮುನಿ ಶ್ರೀಗಳು, ನವಲಕಲ್ ಅಭಿನವ ಸೋಮನಾಥ ಶ್ರೀಗಳು, ಪಾಲ್ಗೊಂಡು ಸಮ್ಮುಖ ವಹಿಸಿ ಶುಭ ಕೋರಿದರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಆರ್.ಪಾಟೀಲ(ಆಳಂದ), ಎಂ.ವೈ.ಪಾಟೀಲ(ಅಫಜಲಪುರ), ಶರನಗೌಡ ಕಂದಕೂರು (ಗುರುಮಠಕಲ್), ಕೆ.ಕೆ.ಸಿ.ಸಿ.ಅಧ್ಯಕ್ಷ ಶರಣು ಪಪ್ಪಾ, ಮಾಜಿ ಸಚಿವ ನರಸಿಂಹನಾಯಕಕ(ರಾಜೂಗೌಡ), ಚಂದು ಪಾಟೀಲ, ನೀಲಕಂಠರಾವ ಮೂಲಗೆ, ಬಿ.ಎಂ.ಹಳಿಕೋಟೆ, ರಾಜಾ ಹನುಮಪ್ಪನಾಯಕ ತಾತಾ, ಹೆಚ್.ಸಿ.ಪಾಟೀಲ, ಲಿಂಗರಜ ಅಪ್ಪ, ಸಂತೋಷ ಬಿಲಗುಂದಿ, ಶಿವಶರಣಪ್ಪ ಸೀರಿ, ಸಂತೋಷ ಪಾಟೀಲ, ಡಾ.ವಿಕ್ರಂ ಪಾಟೀಲ ವಿಶೇಷ ಆಹ್ವಾನಿತರಾಗಿ ಬೆಂಗಳೂರು ಕೆ.ಪಿ.ಎಸ್.ಸಿ.ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ, ಬಿಬಿಎಂಪಿ ಇಇ ಚನ್ನಬಸಪ್ಪ ಮೆಕಾಲೆ ಭಾಗವಹಿಸಿ ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಆಶೀರ್ವಾದ ಪಡೆದರು.

ಡಿ.ಸಿ.ಸಿ.ಬ್ಯಾಂಕಿನ ಉಪಾಧ್ಯಕ್ಷ ಸುರೇಶ ಸಜ್ಜನ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಬಲಾದ ಗ್ರಾಮದ ಮಂಜುನಾಥ ಕಾಳೆ ಸ್ವಾಗತಿಸಿದರು. ಜಾಲಿಬೆಂಚಿ ಅಮರಯ್ಯಸ್ವಾಮಿ ನಿರೂಪಣೆ ಮಾಡಿದರು. ಸಮಾರಂಭದ ನಂತರ ಅನ್ನ ದಾಸೋಹ ಜರುಗಿತು.

## ಅಧಿಸೂಚನೆ ಹೊರಡಿಸಲು ಕೇಂದ್ರಕ್ಕೆ ಡಿಕೆಶಿ ಮನವಿ

ಬದ್ಧತೆ ನಮ್ಮ ಸರ್ಕಾರಕ್ಕಿದೆ. ಇದನ್ನು ರಾಷ್ಟ್ರೀಯ ಯೋಜನೆ ಎಂದು ಘೋಷಿಸುವ ಬಗ್ಗೆಯೂ ಮನವಿ ಮಾಡಿದ್ದೇವೆ ಎಂದರು.

ಇನ್ನು ಮೇಕೆದಾಟು ಯೋಜನೆಯ ಕುರಿತು ಮಾತನಾಡಿದ ಡಿಕೆ ಶಿವಕುಮಾರ್, ವಿವರವಾದ ಯೋಜನಾ ವರದಿ(ಡಿಪಿಆರ್)ಗೆ ಕೇಂದ್ರ ಜಲ ಆಯೋಗದ ಅನುಮತಿಗಾಗಿ ಕಾಯುತ್ತಿದ್ದೇವೆ ಎಂದರು.

ಮೇಕೆದಾಟು ಯೋಜನೆಗೆ ವಿರೋಧಿಸುತ್ತಿರುವ ತಮಿಳುನಾಡಿನ ಆಡಳಿತರೂಢ ಹಾಗೂ ಕಾಂಗ್ರೆಸ್ ಮಿತ್ರ ಪಕ್ಷ ಡಿಎಂಕೆ ಬಗ್ಗೆ ಕೇಳಿದಾಗ, "ಅದು ರಾಜಕೀಯ ಮೈತ್ರಿ, ಇದರಲ್ಲಿ ಯಾವುದೇ ಮೈತ್ರಿ ಇಲ್ಲ" ಎಂದರು.

ಬೆಂಗಳೂರಿನ ಹೆಚ್ಚುತ್ತಿರುವ ನೀರಿನ ಬೇಡಿಕೆಯನ್ನು ಪೂರೈಸುವ ಜೊತೆಗೆ ತಮಿಳುನಾಡಿಗೆ ನಿಯಂತ್ರಿತ ನೀರಿನ ಬಿಡುಗಡೆಗೆ ಅನುಕೂಲವಾಗುವಂತೆ ಮತ್ತು 400 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸುವ ಮೇಕೆದಾಟು ಯೋಜನೆಯ ಮಹತ್ವವನ್ನು ಅವರು ಒತ್ತಿ ಹೇಳಿದರು.

ಮೇಕೆದಾಟು ವಿಚಾರದಲ್ಲಿ 15 ದಿನಗಳಲ್ಲಿ ಸುಪ್ರೀಂ ಕೋರ್ಟ್ ಕರ್ನಾಟಕದ ವಾದ ಆಲಿಸುವುದಾಗಿ ಹೇಳಿತ್ತು. ಆದರೆ ದಿನಾಂಕ ನಿಗದಿ ಮಾಡಿಲ್ಲ. ತಮಿಳುನಾಡಿನವರು ರಾಜಕೀಯವಾಗಿ ಸಹಕಾರ ನೀಡುವುದಿಲ್ಲ ಎನ್ನುವುದು ನಮಗೆ ಅರಿವಿದೆ. ಅವರು ಸಣ್ಣಪುಟ್ಟ ಅಣೆಕಟ್ಟುಗಳನ್ನು ಅವರ ವಲಯದಲ್ಲಿ ಕಟ್ಟಿಕೊಳ್ಳುತ್ತಿದ್ದಾರೆ. ಇದರ ಬಗ್ಗೆ ನಾವು ತೊಂದರೆ ಕೊಡಲು ಹೋಗುವುದಿಲ್ಲ. ಈ ವಿಚಾರವನ್ನೂ ಸಚಿವರ ಗಮನಕ್ಕೆ ತರಲಾಗಿದೆ ಎಂದರು.

ಪಿಎಂಕೆಎಸ್‌ವೈ–ಎಐಬಿಪಿ ಯೋಜನೆಯಡಿಯಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರ 5,300 ಕೋಟಿ ರೂಪಾಯಿ ನೀಡುವುದಾಗಿ ಹೇಳಿತ್ತು. ಆದರೆ ಇದುವರೆ ಆ ಹಣ ಬಿಡುಗಡೆ ಮಾಡಿಲ್ಲ. ಕೇಂದ್ರ ಈ ಹಣವನ್ನು ಶೀಘ್ರ ಬಿಡುಗಡೆ ಮಾಡುವಂತೆ ಉಪಮುಖ್ಯಮಂತ್ರಿಗಳು ಕೇಂದ್ರವನ್ನು ಒತ್ತಾಯಿಸಿದರು.

ಕಳಸಾ ಬಂಡೂರಿ ಕಾಮಗಾರಿಗೆ ಪರಿಸರ ಇಲಾಖೆಯ ಅನುಮತಿ ಸಿಗದಿರುವ ಬಗ್ಗೆ ಗಮನಕ್ಕೆ ತರಲಾಗಿದೆ. ಈಗಾಗಲೇ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆ. ಈ ಹಿಂದೆ ಪ್ರಹ್ಲಾದ್ ಜೋಶಿ ಹಾಗೂ ಕೇಂದ್ರ ಅರಣ್ಯ ಸಚಿವರನ್ನೂ ಸಹ ಭೇಟಿ ಮಾಡಲಾಗಿತ್ತು. ಎತ್ತಿನಹೊಳೆ ಕಾಮಗಾರಿ ಕುಡಿಯುವ ನೀರಿನ ಯೋಜನೆಯಾದ ಕಾರಣ ಒಂದಷ್ಟು ಅನುದಾನ ನೀಡಬೇಕು ಎಂದು ಮನವಿ ಮಾಡಲಾಗಿದೆ. ಜೊತೆಗೆ ಅರಣ್ಯ ಭೂಮಿ ಬಳಕೆ, ಬದಲಿ ಭೂಮಿ ನೀಡುವ ಬಗ್ಗೆ ಪ್ರಸ್ತಾವನೆ ಸಲ್ಲಿಸಿದ್ದೇವೆ. ಇದರ ಡಿಪಿಆರ್ ಅನ್ನು ನೋಡುವುದಾಗಿ ಭರವಸೆ ನೀಡಿದ್ದಾರೆ ಎಂದರು.

## ಬರೆದವರು:ಹೆಚ್ಚುವರಿ ಡಿಸಿ ಕೋಟೆಪ್ಪಗೋಳ್

ಕೋಟೆಪ್ಪಗೋಳ್ ಹೇಳಿದರು.ನಗರದ ಸರ್ಕಾರಿ ಪದವಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ, ಜಯಂತ್ಯೋತ್ಸವ ಸಮಿತಿ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ನಡೆದ ದೇವರ ದಾಸಿಮಯ್ಯ ಜಯಂತಿ ಕಾರ್ಯಕ್ರಮದಲ್ಲಿ ದಾಸಿಮಯ್ಯ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.ಈಗಿನ ಹುಣಸಗಿ ತಾಲೂಕಿನ ಮುದನೂರಿನವರು ಎಂಬ ಅಪ್ಪಟ್ಟ ಹೆಮ್ಮೆ ನಮಗೆ, ಬಸವಪೂರ್ವ ಯುಗದ ವಚನಕಾರ ದಾಸಿಮಯ್ಯ ಅವರಿಂದಾಗಿಯೇ ಇಂದು ಈ ಊರು ಹೆಚ್ಚು ಪ್ರಸಿದ್ಧಿ ಪಡೆದಿದೆ. ನಮ್ಮ ಗಿರಿಜಿಲ್ಲೆಗೆ ಸಿಕ್ಕ ಮುಕುಟ ಎಂದು ಬಣ್ಣಿಸಿದರು.

ಧರ್ಮ–ನೀತಿ, ಆಚಾರ–ವಿಚಾರ, ನಡೆ– ನುಡಿ, ಸಾಮರಸ್ಯದಿಂದ ಕೂಡಿದ ಸಮಾಜ ನಿರ್ಮಾಣಕ್ಕೆ ಮೊದಲ ಆದ್ಯತೆ ನೀಡಿದ್ದ ದಾಸಿಮಯ್ಯ, ಸಮಾಜದ ಕಟ್ಟಕಡೆಯ ವ್ಯಕ್ತಿಯೂ ಕೂಡಾ ಧರ್ಮ, ಆಧ್ಯಾತ್ಮ, ಶಿಕ್ಷಣ, ಆರ್ಥಿಕ, ಮತ್ತು ಸಾಮಾಜಿಕ ಹಕ್ಕುಗಳಿಂದ ವಂಚಿತರಾಗಬಾರದೆಂಬ ನಿಲುವು ಅಂದೇ ಹೊಂದಿದ್ದ ಗಟ್ಟಿ ವಚನಕಾರರಾಗಿದ್ದರೆಂದು ಕೋಟೆಪ್ಪಗೋಳ್ ಬಣ್ಣಿಸಿದರು.

ಶ್ರೀಶೈಲದ ಮಲ್ಲಯ್ಯನಿಗೆ ತನ್ನ ಪತ್ನಿ ದುಗ್ಗಳೆಯೊಂದಿಗೆ ಕಾಯಕದಿಂದ ನೇಯ್ದು ಸಿದ್ದಪಡಿಸಿದ ರುಮಾಲು ನೀಡಿದಾಗ ತೃಪ್ತನಾದ ಮಲ್ಲಯ್ಯ,ದಾಸಿಮಯ್ಯ ದಂಪತಿಗೆ ತವನಿಧಿ ನೀಡಿದರೆಂಬ ಪ್ರತೀತಿ ಇದೆ ಎಂದರು.

ಸುಮಾರು 20 ಸಾವಿರ ಜೈನರಿಗೆ ಮತ್ತು 12 ಸಾವಿರ ಗೌಡ ಸಮುದಾಯದಜನರಿಗೆ ಲಿಂಗದೀಕ್ಷೆ ನೀಡಿದ ದೇವರ ದಾಸಿಮಯ್ಯ, ಸುಮಾರು 700 ಜೈನ್ ದೇವಾಲಯಗಳನ್ನು ಶಿವಾಲಯಗಳನ್ನಾಗಿ ಮಾಡಿದ್ದಾರೆಂಬ ಐತಿಹಾಸಿಕ ವಿಷಯ ಇತಿಹಾಸದಿಂದ ತಿಳಿಯುತ್ತದೆ ಎಂದು ಅವರು ದಾಸಿಮಯ್ಯನವರ ಬಗ್ಗೆ ವಿವರವಾಗಿ ಹೇಳಿದರು.

ಜ್ಯೋತಿಲತಾ ತಡಿಬಿಡಿಮಠ ಅವರು ಉಪನ್ಯಾಸ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರದೇವಿ ಮಠಪತಿ, ಜಿಲ್ಲಾ ನೌಕರರ ಒಕ್ಕೂಟದ ಅಧ್ಯಕ್ಷ ವೀರಸಂಗಪ್ಪ ಹಾವೇರಿ, ಜಿಲ್ಲಾ ಗೌರವ ಅಧ್ಯಕ್ಷ ಬಸವರಾಜ ಎಮ್ ಹುನಗುಂದ, ಕುಮಾರ ಸ್ವಾಮಿ, ಸುಧಾರಾಣಿ ಸೇರಿದಂತೆ ಇತರರಿದ್ದರು.

## ಅಳವಡಿಕೆಗೆ ನಿಷ್ಠಾವಂತರ ಒತ್ತಾಯ

ಇಮೇಜ್ ತೊಡೆದು ಹಾಕಲು ಇದು ಸಹಾಯ ಮಾಡುತ್ತದೆ.

ಕಾಂಗ್ರೆಸ್ ಶಾಸಕಾಂಗ ಪಕ್ಷದೊಳಗೆ ಮತ್ತಷ್ಟು ಭಿನ್ನಾಭಿಪ್ರಾಯವನ್ನು ತಡೆಗಟ್ಟಲು ಇಂತಹ ಕ್ರಮವು ಏಕೈಕ ಮಾರ್ಗವಾಗಿದೆ ಎಂದು ಪಕ್ಷದ ಒಳಗಿನವರು ನಂಬುತ್ತಾರೆ. "ಸಂಪುಟವನ್ನು ಪುನರ್ರಚಿಸುವ

ಮೂಲಕ ಮತ್ತು ಹೊಸ ನಾಯಕರನ್ನು ಕರೆತರುವುದರಿಂದ,

ನಾವು ಆಡಳಿತವನ್ನು ಪುನರುಜ್ಜೀವನಗೊಳಿಸಬಹುದು ಮತ್ತು ರಾಜ್ಯದಲ್ಲಿ ಪಕ್ಷದ ಭವಿಷ್ಯವನ್ನು ಭದ್ರಪಡಿಸಬಹುದು" ಎಂದು ಕಾಂಗ್ರೆಸ್ ನಾಯಕರೊಬ್ಬರು ಹೇಳಿದ್ದಾರೆ.

ಮುಂಬರುವ ನಾಯಕರಿಗೆ ಮಾರ್ಗದರ್ಶನ ನೀಡಲು ಮತ್ತು ಆಡಳಿತದಲ್ಲಿ ನಿರಂತರತೆಯನ್ನು ಖಚಿತಪಡಿಸಿಕೊಳ್ಳಲು ಕೆಲವು ಹಿರಿಯ ಸಚಿವರನ್ನು ಇನ್ನೊಂದು ವರ್ಷದವರೆಗೆ ಉಳಿಸಿಕೊಳ್ಳಬೇಕು ಎಂಬುದು ಕೆಲವರ

ವಾದವಾಗಿದೆ ಎಂದು ಮೂಲಗಳು ತಿಳಿಸಿವೆ. ಈ ಕ್ರಮದಿಂದ ಸರ್ಕಾರದ ಮೇಲೆ ವಿಶ್ವಾಸಾರ್ಹತೆ ಹೆಚ್ಚಿಸುತ್ತದೆ ಎಂದು ರಾಜಕೀಯ ವಿಶ್ಲೇಷಕರು ಹೇಳುತ್ತಾರೆ. ಕಾಂಗ್ರೆಸ್ ಆಂತರಿಕ ಕಲಹದಿಂದ ಬಳಲುತ್ತಿರುವಾಗ, ಎಲ್ಲರ ಕಣ್ಣುಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಪಕ್ಷದ ಹೈಕಮಾಂಡ್ ಮೇಲೆ ನೆಟ್ಟಿದೆ.

## ಮನ್ನಳ್ಳಿಯಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ ನಾಳೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್: ಏ.4:ತಾಲ್ಲೂಕಿನ ಮನ್ನಳ್ಳಿ ಗ್ರಾಮದ ಬಸವ ಪ್ರಾಥಮಿಕಹಾಗೂಪ್ರೌಢಶಾಲೆಯಲ್ಲಿ ರೋಟರಿ ಕ್ಲಬ್ ಬೀದರ್ ಹಾಗೂ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ವತಿಯಿಂದ ಏಪ್ರಿಲ್ 6 ರಂದು ಬೆಳಿಗ್ಗೆ 8 ರಿಂದ ಮಧ್ಯಾಹ್ನ 1.30 ರ ವರೆಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ಡಾ. ಸುಭಾಷ್ ಕರ್ಪೂರ, ಡಾ. ರಾಜಶೇಖರ ಪಾಟೀಲ, ಡಾ. ರಾಜಶೇಖರ ಸೇಡಂಕರ್, ಡಾ. ವಿ.ವಿ. ನಾಗರಾಜ, ಡಾ. ಸಿದ್ಧಲಿಂಗೇಶ್ವರ ಎ. ಮಠಪತಿ, ಡಾ. ನಿತಿನ್ ಗುದಗೆ, ಡಾ ಅಕ್ಷಯ ಜಗತಾಪ್, ಡಾ. ಮಹೇಶ ಚನಶೆಟ್ಟಿ, ಡಾ. ಶಿವಕುಮಾರ ಪಾಟೀಲ, ಡಾ. ಪ್ರಶಾಂತ ಪಾಟೀಲ, ಡಾ. ಸುಪ್ರಿಯಾ ಕೋಡಗೆ ಪಾಟೀಲ, ಡಾ. ಪರಮೇಶ್ವರ ಬಿರಾದಾರ, ಡಾ. ವಿನಾಯಕ ಜ್ಯಾಂತೆ, ಡಾ. ಶಿವಾಂಗಿ ಪಾಟೀಲ, ಡಾ. ಬಸವಪ್ರಸಾದ್ ಪಾಟೀಲ, ಎಸ್.ಬಿ. ಪಾಟೀಲ ದಂತ ಆಸ್ಪತ್ರೆ ಹಾಗೂ ಮೇಗೂರ್ ಐ ಕೇರ್ ಆಸ್ಪತ್ರೆಯ ವೈದ್ಯರು ಪಾಲ್ಗೊಳ್ಳಲಿದ್ದಾರೆ ಎಂದು ರೋಟರಿ ಕ್ಲಬ್ ಬೀದರ್ ಅಧ್ಯಕ್ಷ ಸೋಮಶೇಖರ ಪಾಟೀಲ ಹಾಗೂ ಕಸಾಪ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ತಿಳಿಸಿದ್ದಾರೆ.

# ಇಂದು ಮತ್ತು ನಾಳೆ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳು

ಬೀದರ:ಏ.4: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಬೀದರ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಬೀದರ ಇವರ ಸಂಯುಕ್ತಾಶ್ರಯದಲ್ಲಿ 2025ನೇ ಏಪ್ರಿಲ್. 5 ಮತ್ತು 6 ರಂದು ನೆಹರು ಕ್ರೀಡಾಂಗಣ ಬೀದರದಲ್ಲಿ ಜಿಲ್ಲಾಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ಆಯೋಜಿಸಲಾಗಿರುತ್ತದೆ.

ಏಪ್ರಿಲ್.5 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ನೆಹರು ಕ್ರೀಡಾಂಗಣ ಬೀದರದಲ್ಲಿ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಉದ್ಘಾಟಿಸಲಿದ್ದಾರೆ.

ಅಧ್ಯಕ್ಷತೆಯನ್ನು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ವಹಿಸಲಿದ್ದಾರೆ. ಹಾಗೂ ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ಔರಾದ (ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ್, ಬಸವಕಲ್ಯಾಣ ಶಾಸಕರಾದ ಶರಣು ಸಲಗರ, ಬೀದರ ದಕ್ಷಿಣ ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕರಾದ ಡಾ.ಸಿದ್ಧಲಿಂಗಪ್ಪ ಎನ್.ಪಾಟೀಲ್ ಹಾಗೂ ವಿಧಾನ ಪರಿಷತ್ ಶಾಸಕರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ್, ಡಾ.ಎಂ.ಜಿ.ಮೂಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಬೀದರ ನಗರಸಭೆ ಅಧ್ಯಕ್ಷರಾದ ಮಹ್ಮದ ಗೌಸ್, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ಅವರುಗಳು ಭಾಗವಹಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಬೀದರ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ ಗುಂಟಿ ಅವರು ಭಾಗವಹಿಸಲಿದ್ದಾರೆ.

ಸಾಯಂಕಾಲ 6 ಗಂಟೆಗೆ ಡಾ.ಚನ್ನಬಸವ ಪಟ್ಟದ್ದೇವರು ರಂಗ ಮಂದಿರ ಬೀದರದಲ್ಲಿ ಕಲಬುರಗಿ ಹಾಸ್ಯಕಲಾವಿದರಾದ ಗುಂಡಣ್ಣ ಡಿಗ್ಗಿ ಹರಸೂರ ಹಾಗೂ ಹಾಸ್ಯ ಕಲಾವಿದರು ಹಾಗೂ ಗಾಯಕರು ಬೀದರನ ವೈಜನಾಥ ಸಜ್ಜನಶೆಟ್ಟಿ ಅವರಿಂದ ಸಾಂಸ್ಕೃತಿಕ ಮತ್ತು ಹಾಸ್ಯ ಸಂಜೆ ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಬೀದರ ಸಹಾಯಕ ಆಯುಕ್ತರಾದ ಮಹ್ಮದ್ ಶಕೀಲ್ ಅವರು ಮಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೀದರ ಜಿಲ್ಲಾ ಖಜಾನೆ ಇಲಾಖೆಯ ಉಪ ನಿರ್ದೇಶಕರಾದ ರವಿ ಹಕಾರಿ, ಬೀದರ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸಲೀಂ ಪಾಶಾ, ಬೀದರ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಶಿಂಧೆ ಹಾಗೂ ಅಧ್ಯಕ್ಷತೆಯನ್ನು ಬೀದರ ಕ.ರಾ.ಸ.ನೌ.ಸಂಘದ ಜಿಲ್ಲಾಧ್ಯಕ್ಷರಾದ ಸೋಮಶೇಖರ ಬಿರಾದಾರ ಚಿದ್ರಿ ಅವರು ವಹಿಸಲಿದ್ದಾರೆ. ಏಪ್ರಿಲ್.6 ರಂದು ಸಾಯಂಕಾಲ 4 ಗಂಟೆಗೆ ನೆಹರು ಕ್ರೀಡಾಂಗಣ ಬೀದರದಲ್ಲಿ ಸಮಾರೋಪ ಸಮಾರಂಭ ನಡೆಯಲಿದೆ.

ಮುಖ್ಯ ಅತಿಥಿಗಳಾಗಿ ಬೀದರ ಅಪರ ಜಿಲ್ಲಾಧಿಕಾರಿಗಳಾದ ಶಿವಕುಮಾರ ಶೀಲವಂತ, ಬೀದರ ಜಿಲ್ಲಾ ಪಂಚಾಯತ ಮುಖ್ಯ ಲೆಕ್ಕಾಧಿಕಾರಿಗಳಾದ ಶ್ರೀಕಾಂತ, ಬೀದರ ಜಿಲ್ಲಾ ಆರೋಗ್ಯ ಅಧಿಕಾರಿಗಳಾದ ಜ್ಞಾನೇಶ್ವರ ನಿರಗುಡೆ, ಶಾಹೀನ್ ಶಿಕ್ಷಣ ಸಮೂಹದ ಅಧ್ಯಕ್ಷರಾದ ಡಾ.ಅಬ್ದುಲ್ ಖದೀರ ಹಾಗೂ ಅಧ್ಯಕ್ಷತೆಯನ್ನು ಬೀದರ ಕ.ರಾ.ಸ.ನೌ.ಸಂಘದ ಜಿಲ್ಲಾಧ್ಯಕ್ಷರಾದ ಸೋಮಶೇಖರ ಬಿರಾದಾರ ಚಿದ್ರಿ ವಹಿಸಲಿದ್ದಾರೆ. ಉಪಸ್ಥಿತಿಯನ್ನು ಬೀದರ ಕ.ರಾ.ಸ.ನೌ.ಸಂಘದ ಕಾರ್ಯದರ್ಶಿಗಳಾದ ಪ್ರಭುಲಿಂಗ ತುಗಾಂವೆ, ಬೀದರ ಕ.ರಾ.ಸ.ನೌ.ಸಂಘದ ರಾಜ್ಯ ಪರಿಷತ್ತ ಸದಸ್ಯರಾದ ರಾಜಕುಮಾರ ಮಾಳಗೆ, ಬೀದರ ಕ.ರಾ.ಸ.ನೌ.ಸಂಘದ ಕೋಶಾಧ್ಯಕ್ಷರಾದ ದೇವಪ್ಪ ಚಾಂಬೋಳೆ ಅವರುಗಳು ವಹಿಸಲಿದ್ದಾರೆ.

## ಏ.7 ರಂದು ಫೋನ್-ಇನ್ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಏ.4: ಸಾರ್ವಜನಿಕ ಪ್ರಯಾಣಿಕರಿಗೆ ಮತ್ತು ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಸಾರಿಗೆ ಸೌಲಭ್ಯದಲ್ಲಾಗುತ್ತಿರುವ ಸಮಸ್ಯೆಗಳನ್ನು ಆಲಿಸುವ ಹಾಗೂ ಸಮರ್ಪಕ ಸಾರಿಗೆ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ 2025ನೇ ಏಪ್ರಿಲ್.7 ರಂದು ಮಧ್ಯಾಹ್ನ 3.30 ರಿಂದ 5.30 ರವರೆಗೆ ಫೋನ್–ಇನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಬೀದರ ವಿಭಾಗದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರಣ ಸಾರ್ವಜನಿಕ ಪ್ರಯಾಣಿಕರು ಮತ್ತು ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಸಾರಿಗೆ ಸೌಲಭ್ಯದ ಕೊರತೆ ಕಂಡುಬಂದಲ್ಲಿ ದೂರವಾಣಿ ಸಂಖ್ಯೆ: 7760992200, 7760992202 ಗೆ ಕರೆ ಮಾಡಿ ಮನವಿ, ಸಮಸ್ಯೆ ಹಾಗೂ ಸಲಹೆಗಳನ್ನು ನೀಡಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಇಂದು ಡಾ.ಬಾಬು ಜಗಜೀವನ ರಾಮ್ ಅವರ 118ನೇ ಜಯಂತಿ ಉತ್ಸವ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಏ.4: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ನಗರಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಏಪ್ರಿಲ್.5 ರಂದು ಮಧ್ಯಾಹ್ನ 12 ಗಂಟೆಗೆ ಡಾ.ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಅವರ 118ನೇ ಜಯಂತಿ ಉತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

## ಗುಲಬರ್ಗಾ ವಿ.ವಿ.ಯಲ್ಲಿ ಡಾ.ಬಾಬು ಜಗಜೀವನರಾಮ್ ಅವರ 118ನೇ ಜಯಂತ್ಯೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.4(ಕರ್ನಾಟಕ ವಾರ್ತೆ) ಗುಲಬರ್ಗಾ ವಿಶ್ವವಿದ್ಯಾಲಯ ಮತ್ತು ಡಾ.ಬಾಬು ಜಗಜೀವನರಾಮ್ ಅಧ್ಯಯನ ಸಂಶೋಧನಾ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಇದೇ ಏಪ್ರಿಲ್ 5 ರಂದು ಬೆಳಿಗ್ಗೆ 10.30 ಗಂಟೆಗೆ ಗುಲಬರ್ಗಾ ವಿ.ವಿ.ಯ ಮಹಾತ್ಮ ಗಾಂಧಿ ಸಭಾಂಗಣದಲ್ಲಿ ಡಾ.ಬಾಬು ಜಗಜೀವನರಾಮ್ ಅವರ 118ನೇ ಜಯಂತ್ಯೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಗುಲಬರ್ಗಾ ವಿ.ವಿ. ಪ್ರಭಾರಿ ಕುಲಪತಿ ಪ್ರೊ.ಗುರುಶ್ರೀರಾಮಲು ಅಧ್ಯಕ್ಷತೆಯಲ್ಲಿ ನಡೆಯುವ ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಕವಿ, ಸಂಶೋಧಕ ಹಾಗೂ ಸಾಮಾಜಿಕ ಕಾರ್ಯಕರ್ತ ಡಾ.ವಡ್ಡಗೆರೆ ನಾಗರಾಜಯ್ಯ ಆಗಮಿಸುವರು.

ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯೆ ಡಾ. ಶ್ರೀದೇವಿ ಎಸ್. ಕಟ್ಟಿಮನಿ, ವಿದ್ಯಾವಿಷಯಕ್ ಪರಿಷತ್ ಸದಸ್ಯ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಡೀನ್ ಪ್ರೊ. ಸಿ. ಸುಲೋಚನಾ ಅವರು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದು, ಮೌಲ್ಯಮಾಪನ ಕುಲಸಚಿವ ಡಾ.ಎನ್.ಜಿ.ಕಣ್ಣೂರ ಮತ್ತು ಹಣಕಾಸು ಅಧಿಕಾರಿ ಜಯಾಂಬಿಕಾ ಅವರು ಉಪಸ್ಥಿತರಿರುವರು.

## ಪ್ರಕೃತಿ ದೇವರು, ಪ್ರಕೃತಿ ಉಳಿದರೆ ನಾವು ಉಳಿಯಲು ಸಾಧ್ಯ : ಡಾ ಮೇಜರ ಶಂಕರೇಪ್ಪಾ ಹತ್ತಿ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಏ.4: ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಪದವಿ ಮಹಾವಿದ್ಯಾಲಯದಲ್ಲಿ ವಿಪತ್ತು ನಿರ್ವಹಣೆಯ ಒಂದು ದಿವಸದ ಕಾರ್ಯಗಾರವನ್ನು ನಿವೃತ್ತ ಪ್ರಾಂಶುಪಾಲರು ಹಾಗೂ ಎನ್.ಸಿ.ಸಿ. ಅಧಿಕಾರಿಯಾದ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಕಲಬುರಗಿಯ ಡಾ. ಮೇಜರ ಶಂಕರೇಪ್ಪಾ ಹತ್ತಿ ಹಾಗೂ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ತಮ್ಮ ಅಮೃತ ಹಸ್ತದಿಂದ ಸಸಿಗೆ ನೀರೆರೆಯುವುದರ ಮುಖಾಂತರ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಈ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಆಗಮಿಸಿದ ನಿವೃತ್ತ ಪ್ರಾಂಶುಪಾಲರು ಹಾಗೂ ಎನ್.ಸಿ.ಸಿ. ಅಧಿಕಾರಿಯಾದ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಕಲಬುರಗಿಯ ಡಾ. ಮೇಜರ ಶಂಕರೇಪ್ಪಾ ಹತ್ತಿಯವರು ಮಾತನಾಡುತ್ತಾ ಇಂದು ಜಗತ್ತಿನ ನಾನಾ ಭಾಗಗಳಲ್ಲಿ ಪ್ರಕೃತಿ ವಿಕೋಪಗಳಾದ ಭೂಕಂಪ, ಸುನಾಮಿ, ಜ್ವಾಲಾಮುಖಿ, ನೆರೆಹಾವಳಿ ಇಂತಹ ಪರಿಸ್ಥಿತಿಯಲ್ಲಿ ಮಾನವರು ತಮ್ಮನ್ನು ರಕ್ಷಣೆ ಮಾಡಿಕೊಳ್ಳಲು ಮುಂದುವರೆಯಬೇಕು ಹೊರತು ಭಯಪಟ್ಟು ಪ್ರಾಣ ಕಳೆದುಕೊಳ್ಳುವುದು ಸೂಕ್ತವಲ್ಲ, ಉದಾಹರಣೆಗೆ ಮಹಾರಾಷ್ಟ್ರದ ಕಿಲಾರಿ, ಗುಜರಾತಿನ ಭುಜ್ ಈ ಎರಡು ಉದಾಹರಣೆಗಳು ಭಾರತೀಯರಿಗೆ ಬಹಳಷ್ಟು ಪಾಠವನ್ನು ಕಲಿಸಿವೆ. ಈ ಘಟನೆಗಳಲ್ಲಿ ಹಲವರು ಜನ ಮುಂಜಾಗೃತಾ ಕ್ರಮವನ್ನು ನಿರ್ವಹಿಸಿದರೆ, ಬಹಳಷ್ಟು ಜನರ ಪ್ರಾಣ ಉಳಿಯುತಿತ್ತು ಆದರೆ ಜನರ ಕಡಿಮೆ ತಿಳುವಳಿಕೆಯಿಂದ ಜನರ ಮಾನಸಿಕ ಖಿನ್ನತೆ ಉಂಟಾಗಿ ಪ್ರಾಣ ಕಳೆದುಕೊಳ್ಳುವ ಸಂಭವ ಹೆಚ್ಚಾಯಿತು. ಆದುದ–ರಿಂದ ಪ್ರತಿಯೊಬ್ಬ ಪ್ರಜೆಯು ಪ್ರಾಕೃತಿಕ ದುರ್ಘಟನೆಯಿಂದ ರಕ್ಷಿಸಿಕೊಳ್ಳುವ ಕ್ರಮಗಳನ್ನು ತಿಳಿದುಕೊಳ್ಳಬೇಕೆಂದು ನುಡಿದರು.

ಕಾರ್ಯಕ್ರಮದಲ್ಲಿ ಗೌರವ ಉಪಸ್ಥಿತಿ ಹೊಂದಿದ ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆಯವರು ಮಾತನಾಡುತ್ತಾ ಪ್ರಕೃತಿ ನಾಶದಿಂದ ಜನರ ದುರ್ಗತಿ ಕಟ್ಟಿಟ್ಟ ಬುತ್ತಿ, ಅದುದರಿಂದ ಪ್ರಕೃತಿ ಉಳಿಸುವುದರ ನಾವು ಉಳಿಯತ್ತೇವೆ ಮುಂದಿನ ಪೀಳಿಗೆಯು ಉಳಿಯುತ್ತದೆ ಪ್ರಕೃತಿಯಿಂದ ಸರ್ವೆಜನ ಸುಖಿನೋ ಭವಂತು ಎಂದು ಮಾರ್ಮಿಕವಾಗಿ ನುಡಿದರು.

ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಹಿಸಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ಮಾತನಾಡುತ್ತಾ ಸಸ್ಯಂ, ರಮ್ಯಂ, ಸುಂದರಂ ಎನ್ನುವಂತೆ, ಕಾಡಿದ್ದರೆ ನಾಡು ನಾಡಿನ ಜನರಿಂದ ರಾಷ್ಟ್ರದ ಅಭಿವೃದ್ಧಿ ಇಂತಹ ಪ್ರಕೃತಿ ವಿಕೋಪಗಳ ಮುಂಜಾಗೃತ ಕ್ರಮಗಳು ತಾವುಗಳಾದ ವಿದ್ಯಾರ್ಥಿಗಳು ತಮ್ಮ ತಮ್ಮ ಗ್ರಾಮಗಳಲ್ಲಿ ಎಚ್ಚರಿಕೆ ಕ್ರಮ ಕುರಿತು ಜನರಿಗೆ ತಿಳಿಹೇಳಬೇಕು ಹಾಗೂ ಗ್ರಾಮದ ಪ್ರಕೃತಿಯನ್ನು ಹಸಿರಿನಿಂದ ಕಂಗೊಳಿಸುವಂತೆ ಸ್ವಚ್ಛ ಸುಂದರ ಗ್ರಾಮ ಹಾಗೂ ಪ್ರಕೃತಿಯ ದೇವರು ನಮ್ಮ ಕರ್ನಾಟಕ ರಾಜ್ಯದ ಪಶ್ಚಿಮ ಘಟ್ಟಗಳು, ಸಹ್ಯಾದ್ರಿ ಪರ್ವತ ಪ್ರದೇಶ ಜಲಪಾತಗಳು ಹಾಗೂ ಸರೋವರಗಳು ಪ್ರಕೃತಿ ಕೊಟ್ಟ ವರದಾನ ಇವೆಲ್ಲವನ್ನು ಕಾಪಾಡುವುದು ನಮ್ಮ ಆದ್ಯ ಕರ್ತವ್ಯ ಆಗ ಮಾತ್ರ ಉಳಿವು ಸಾಧ್ಯ ಎಂದರು. ವಿದ್ಯಾರ್ಥಿಗಳು ಶ್ರಮವಹಿಸಿ ಯಾವುದೇ ಪ್ರಕೃತಿಯ ದುಷ್ಪರಿಣಾಮ ಮೀರದಂತೆ, ಕಾಪಾಡಿಕೊಂಡು ಹೋಗುವುದು ಪ್ರತಿಯೊಬ್ಬ ವಿದ್ಯಾರ್ಥಿ ಹಾಗೂ ನಾಗರೀಕರ ಕರ್ತವ್ಯ ಎಂದು ನುಡಿದರು.

ಕಾರ್ಯಕ್ರಮದ ವೇದಿಕೆಯ ಮೇಲೆ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಮಲ್ಲಿಕಾರ್ಜುನ ಕೋಟೆ, ಸಸ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಸೂರ್ಯವಂಶಿ ಪೂಜಾ ಉಪಸ್ಥಿತರಿದ್ದರು. ಕಾರ್ಯಕ್ರಮ ಮೊದಲಿಗೆ ಪ್ರಾರ್ಥನೆ ಗೀತೆಯನ್ನು ಕು. ಶ್ರದ್ಧಾ ಕೋಟೆ ಹಾಡಿದರೆ, ಪ್ರಾಣಿಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಪೂಜಾ ಮಂಗಲಗಿ ಸ್ವಾಗತಿಸಿದರೆ, ಕು. ಸ್ನೇಹಾ ವಿದ್ಯಾಸಾಗರ ನಿರೂಪಿಸಿದರೆ, ಶ್ರೀಮತಿ ಪೃಥ್ವಿ ಸಾಲಿಮಠ ವಂದಿಸಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಪ್ರಾಧ್ಯಾಪಕರು, ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ನಾಳೆ ನಗರದ ಜಗತ್ ವೃತ್ತದಲ್ಲಿ ಸಂಜೆ ಎಲ್ಲರ ಅಂಬೇಡ್ಕರ್ ನಾಟಕ : ಡಾ ಅಂಬಾರಾಯ ಅಷ್ಠಗಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ : ನಗರದ ಜಗತ್ ವೃತ್ತದಲ್ಲಿ ಡಾ ಬಿ ಆರ್ ಅಂಬೇಡ್ಕರ್ ರವರ 134 ನೇ ಜಯಂತೋತ್ಸವ ಪ್ರಯುಕ್ತ, ಡಾ ಬಿ ಆರ್ ಅಂಬೇಡ್ಕರ್ ಜಿಲ್ಲಾ ಜಯಂತೋತ್ಸವ ಸಮಿತಿ ವತಿಯಿಂದ ನಮ್ಮ ಅಂಬೇಡ್ಕರ್ ಎಂಬ ಡಾ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಜೀವನ ಕುರಿತಾದ ಪ್ರಪ್ರಥಮ ಕನ್ನಡ ನಾಟಕವನ್ನು ಜಿಲ್ಲಾ ಜಯಂತೋತ್ಸವ ಸಮಿತಿಯ ಗೌರವಾಧ್ಯಕ್ಷ ಡಾ ವಿಠ್ಠಲ ದೊಡ್ಡಮನಿ ಹಾಗೂ ಸಮಿತಿ ಅಧ್ಯಕ್ಷ ವಾಸು ವಂಟಿ ಅವರ ನೇತೃತ್ವದಲ್ಲಿ ಆಯೋಜನೆ ಮಾಡಲಾಗಿದೆ ಎಂದು ಜಿಲ್ಲಾ ಜಯಂತೋತ್ಸವ ಸಮಿತಿಯ ಮಾಜಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷರು ಆದ ಡಾ ಅಂಬಾರಾಯ ಅಷ್ಠಗಿಯವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.



ನಿವೃತ್ತ ಐಎಎಸ್ ಅಧಿಕಾರಿಗಳು ಸಂಚಾಲಿತ ಅಭ್ಯುದಯ ಅಕಾಡೆಮಿ ಹೈದರಾಬಾದ್ ಅವರ ಸಹಯೋಗದಲ್ಲಿ ಸುಮಾರು 35 ಕಲಾವಿದರು ನಟಿಸಲಿದ್ದಾರೆ.

ಈ ನಾಟಕವು 2 ಗಂಟೆಗಳ ಅವಧಿಯದಾಗಿದ್ದೂ, ಆಂಧ್ರ ಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳಲ್ಲಿ ಸುಮಾರು 700 ಕ್ಕೂ ಹೆಚ್ಚಿನ ಪ್ರದರ್ಶನ ಕಂಡಿದೆ ಎಂದು ಡಾ ಅಂಬಾರಾಯ ಅಷ್ಠಗಿ ತಿಳಿಸಿದ್ದಾರೆ.

ಕಲ್ಯಾಣ ಕರ್ನಾಟಕದ ಸರ್ವ ನಾಗರಿಕರು ಈ ನಾಟಕ ವಿಕ್ಷಿಸಲು ಮನವಿ ಮಾಡಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ, ಜಿಲ್ಲಾ ಜಯಂತೋತ್ಸವ ಸಮಿತಿಯ ಅಧ್ಯಕ್ಷ ವಾಸು ವಂಟಿ, ಎಸ್ ಎಸ್ ತಾವಡೆ, ದಿಗಂಬರ ಬೆಳಮಗಿ, ರಾಜು ಸಂಕಾ ಸುರೇಶ್ ಹಾದಿಮನಿ, ರಾಹುಲ್ ಉಪಾರೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು

# ಜನ್ಮ ದಿನದ ನಿಮಿತ್ಯ ಲಾಡಗೇರಿ ಶ್ರೀಗಳಿಂದ ಆಶೀರ್ವಾದ ಪಡೆದ ಪಾಟೀಲ್




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಬೀದರ ಜಿಲ್ಲಾ ಭಾರತೀಯ ಜನತಾ ಪಕ್ಷದ ಉಪಾಧ್ಯಕ್ಷರು, ಬಿಎಸ್ಎಸ್‌ಕೆ ನಿರ್ದೇಶಕರು, ಧರ್ಮ ಅಭಿಮಾನಿಗಳಾದ ಮಲ್ಲಿಕಾರ್ಜುನ ಪಾಟೀಲ್ ಬೆಳಕೇರಾ ಅವರ ಜನ್ಮ ದಿನದ ನಿಮಿತ್ತ ಶ್ರೀ ಲಾಡಗೇರಿ ಹಿರೇಮಠದ ಷ. ಬ್ರ. ಗಂಗಾಧರ ಶಿವಾಚಾರ್ಯ ಸ್ವಾಮೀಜಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಭಾರತ ಸರ್ಕಾರದ ರಾಜ್ಯ ಅಭಿವೃದ್ಧಿ ಸಮನ್ವಯ ಮತ್ತು ಮೇಲುಸ್ತುವಾರಿ ಸಮಿತಿ ಸದಸ್ಯ ಶಿವಯ್ಯ ಸ್ವಾಮಿ, ಮುಖಂಡರಾದ ವರದಯ್ಯ ಸ್ವಾಮಿ, ಶಿವಕುಮಾರ ಪಾಟೀಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಶ್ರೀ ರಾಮಲಿಂಗೇಶ್ವರರ ಜಾತ್ರಾ ಮಹೋತ್ಸವ ಕಾರ್ಯಕ್ರಮ ಆರಂಭ

# ವೈಭದಿಂದ ಜರುಗುತ್ತಿರುವ ರಾಮಬಾಣ ಮೆರವಣಿಗೆ ,ಏಪ್ರಿಲ್ 7 ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ತಾಲೂಕಿನ ರಾಂಪುರ ಗ್ರಾಮದ ಪ್ರಸಿದ್ಧ ದೇವಸ್ಥಾನವಾದ ಶ್ರೀ ರಾಮಲಿಂಗೇಶ್ವರರ ಜಾತ್ರಾ ಮಹೋತ್ಸವ ಅಂಗವಾಗಿ ಮಾರ್ಚ್ 26ರಿಂದ ಜೀವನ ದರ್ಶನ ಪ್ರವಚನಕ್ಕೆ ಖೇಳಗಿ ಶಿವಲಿಂಗೇಶ್ವರ ಸ್ವಾಮಿಗಳು ಚಾಲನೆ ನೀಡಿದ್ದಾರೆ. ವೇದ ಮೂರ್ತಿ ಸಿದ್ಧಲಿಂಗಯ್ಯಾ ಸ್ವಾಮಿ ಶಾಸ್ತ್ರಿಗಳಿಂದ ಜರುಗುತಿದೆ. ಈ ಪ್ರವಚ ಏಪ್ರಿಲ್ 5ರವರೆಗೆ ವೈಭವದಿಂದ ಜರುಗುತ್ತದೆ. ಜಾತ್ರಾಮಹೋತ್ಸವ ಅಂಗವಾಗಿ ರಾಮಬಾಣ ಮೆರವಣಿಗೆ ವೈಭವದಿಂದ ಜರುಗುತ್ತದೆ. ಏಪ್ರಿಲ್ 6ರಂದು ಬೆಳಗ್ಗೆ 6:00 ಘಂಟೆಗೆ ಕುಂಭ ಮೆರವಣಿಗೆ ಹಾಗೂ ರುದ್ರಭಿಷೇಕ ಪೂಜೆ ನಂತರ ಉಚಿತ ಆರೋಗ್ಯ ತಪಾಸಣೆ ಶಿಬಿರ ತಾಗಣ್ಯ ವೈದ್ಯರಿಂದ ತಪಾಸಣೆ ಶಿಬಿರ ಜರುಗಲಿದೆ. ರಾತ್ರಿ 8:30 ಗಂ–ಟೆಗೆ ಧರ್ಮಸಭೆ ಜರುಗುವುದು, ರಾಮಲಿಂಗೇಶ್ವರ ತೋಟಲು ಕಾರ್ಯಕ್ರಮ ಮುತ್ತೈದೆಯರಿಂದ ಜರುಗುವುದು, ಖ್ಯಾತ ಕಲಾವಿದ ಸಂಗೀತ ದರ್ಬಾರ್ ಜರುಗುವುದು, ಏಪ್ರಿಲ್ 7ರಂದು ಬೆಳಿಗ್ಗೆ ರಾಮಲಿಂಗೇಶ್ವರರಿಗೆ ರುದ್ರಾಭಿಷೇಕ ಪೂಜೆ ಜರುಗುವುದು ರಾತ್ರಿ 7: ಘಂಟೆಗೆ ಪಲ್ಲಕ್ಕಿ ಮೆರವಣಿಗೆ ಜರುಗುವುದು. ಬೆಳಗಿನ ಜಾವ 5.30ಕ್ಕೆ ರಥೋತ್ಸವ ಜರುಗುವುದು. ಏಪ್ರಿಲ್ 8ರಂದು ಬೆಳಿಗ್ಗೆ 6 ಗಂಟೆಗೆ ಸುಪ್ರಸಿದ್ಧ ಪೈಲ್ವಾನರಿಂದ ಜಂಗಿ ಕುಸ್ತಿ ಜರುಗುವುದು. ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಶ್ರೀ ರಾಮಲಿಂಗೇಶ್ವರ ದೇವಸ್ಥಾನ ಟ್ರಸ್ಟ್ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸಮಸ್ತ ಗ್ರಾಮಸ್ಥರು ಪತ್ರಿಕಾ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.



ಬಸವಕಲ್ಯಾಣ :– ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀ ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಶಾಲೆಯಲ್ಲಿ 5 ರಿಂದ 10ನೇ ತರಗತಿವರೆಗೆ ಕಲಿತ ವಿದ್ಯಾರ್ಥಿಗಳು, ಶಾಲೆಯ ಕೊನೆಯ ದಿನ ಸಂಸ್ಥೆಯ ಅಧ್ಯಕ್ಷರಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ದರ್ಶನ ಆಶೀರ್ವಾದ ಪಡೆದರು. ವಿದ್ಯಾರ್ಥಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಅಮೆರಿಕಾದ ಔಷಧ ಸುಂಕ ವಿನಾಯಿತಿ ಸ್ವಾಗತಿಸಿದ ಕಿರಣ್ ಮಜುಂದಾರ್–ಶಾ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಭಾರತದ ಔಷಧ ಉದ್ಯಮಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ, ಅಮೆರಿಕ ಸರ್ಕಾರವು ಔಷಧ ಉತ್ಪನ್ನಗಳನ್ನು ಸುಂಕದಿಂದ ವಿನಾಯಿತಿ ನೀಡಲು ನಿರ್ಧರಿಸಿದೆ. ಈ ಬೆಳವಣಿಗೆಯನ್ನು ಸ್ವಾಗತಿಸಿರುವ, ಬಯೋಕಾನ್ ಅಧ್ಯಕ್ಷೆ ಕಿರಣ್ ಮಜುಂದಾರ್–ಶಾ ಅವರು ಔಷಧ ವಲಯದ ಮೇಲಿನ ಸಕಾರಾತ್ಮಕ ಪರಿಣಾಮಗಳ ಬಗ್ಗೆ ತಿಳಿಸಿದ್ದಾರೆ.

ಭಾರತ ಮತ್ತು ಅಮೆರಿಕ ನಡುವಿನ ಬಲವಾದ ದ್ವಿಪಕ್ಷೀಯ ಸಂಬಂಧವನ್ನು ಹಾಗೂ ಸಾರ್ವಜನಿಕ ಆರೋಗ್ಯವನ್ನು ಹೆಚ್ಚಿಸುವಲ್ಲಿ ಭಾರತೀಯ ಔಷಧ ವಲಯದ ನಿರ್ಣಾಯಕ ಪಾತ್ರ ನಿರ್ಧರಿಸಿರುವ ಔಷಧೀಯ ಉತ್ಪನ್ನಗಳಿಗೆ ಸುಂಕದಿಂದ ವಿನಾಯಿತಿ ನೀಡುವ ಅಮೆರಿಕ ಸರ್ಕಾರದ ನಿರ್ಧಾರವನ್ನು ನಾನು ಸ್ವಾಗತಿಸುತ್ತೇನೆ ಎಂದು ಅವರು ತಿಳಿಸಿದ್ದಾರೆ. ಜೀವರಕ್ಷಕ ಔಷಧಿಗಳು ಕೈಗೆಟುಕುವಂತೆ ಮಾಡುವುದು ಹಾಗೂ ಲಭ್ಯತೆಯ ಆಧಾರದ ಮೇಲೆ ಒತ್ತು ನೀಡುವುದು ವಿಶೇಷವಾಗಿ ಮುಖ್ಯವಾಗಿದೆ, ಏಕೆಂದರೆ ಇದು ಎರಡೂ ರಾಷ್ಟ್ರಗಳ ಹಂಚಿಕೆಯ ಆದ್ಯತೆಗಳೊಂದಿಗೆ ಪ್ರತಿಧ್ವನಿಸುತ್ತದೆ. 2030ರ ವೇಳೆಗೆ ನಮ್ಮ ದೇಶಗಳ ನಡುವಿನ ವ್ಯಾಪಾರವನ್ನು ದ್ವಿಗುಣಗೊಳಿಸುವ ಗುರಿಯನ್ನು ಹೊಂದಿರುವ ಮಹತ್ವಾಕಾಂಕ್ಷೆಯ ಮಿಷನ್ 500 ಯೋಜನೆಯೊಂದಿಗೆ ಹೊಂದಾಣಿಕೆ ಮಾಡಲು ಇದು ಉತ್ತೇಜನಕಾರಿಯಾಗಿದೆ ಎಂದು ಕಿರಣ್ ಹೇಳಿದರು.

ಈ ವಿನಾಯಿತಿಯಿಂದಾಗಿ ಅಮೆರಿಕದ ಮಾರುಕಟ್ಟೆಯಲ್ಲಿ ಭಾರತೀಯ ಔಷಧ ಸಂಸ್ಥೆಗಳು ಸ್ಪರ್ಧೆ ನೀಡುವ ನಿರೀಕ್ಷೆಯಿದೆ, ಇದು 'ವಿಶ್ವದ ಔಷಧಾಲಯ'ವಾಗಿ ಭಾರತದ ಸ್ಥಾನವನ್ನು ಬಲಪಡಿಸುತ್ತದೆ. ಈ ಕ್ರಮವು ಪೂರೈಕೆ ಸರಪಳಿಗಳನ್ನು ಬಲಪಡಿಸಲು ಮತ್ತು ಆರೋಗ್ಯ ವೆಚ್ಚವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಎಂದು ತಜ್ಞರ ಅಭಿಪ್ರಾಯವಾಗಿದೆ. ವ್ಯಾಪಾರ ಮತ್ತು ಆರೋಗ್ಯ ರಕ್ಷಣೆಯಲ್ಲಿ ಭಾರತ–ಅಮೆರಿಕಾ ಸಹಕಾರ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ, ಎರಡೂ ರಾಷ್ಟ್ರಗಳು ಸ್ಥಿತಿಸ್ಥಾಪಕ ಮತ್ತು ವೆಚ್ಚ–ಪರಿಣಾಮಕಾರಿ ಔಷಧ ಪೂರೈಕೆ ಸರಪಳಿಯ ಅಗತ್ಯವನ್ನು ಗುರುತಿಸಿವೆ ಎಂದು ಹೇಳಲಾಗಿದೆ.

# ಪ್ರವಾಸೋದ್ಯಮ ಇಲಾಖೆ: ಛಾಯಾಚಿತ್ರ ಸ್ಪರ್ಧೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರೀಲ್.04– ಜಿಲ್ಲೆಯ ಪ್ರವಾಸೋದ್ಯಮವನ್ನು ಇನ್ನಷ್ಟು ಮೇಲ್ದರ್ಜೆಗೇರಿಸಲು ಹಾಗೂ ಎಲ್ಲಾ ವರ್ಗದ ಧಾರ್ಮಿಕ, ಸಾಂಸ್ಕೃತಿಕ, ಪಾರಂಪರಿಕ, ಕರಕುಶಲ, ನೈಸರ್ಗಿಕ, ವನ್ಯಜೀವಿ ಮತ್ತು ಸಾಹಸ ಚಟುವಟಿಕೆಗಳು ಹಾಗೂ ಇತರೆ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ದೃಷ್ಟಿಕೋನದಲ್ಲಿ ಪ್ರಮುಖ ತಾಣಗಳನ್ನು ಗುರುತಿಸಿ, ವಿಶ್ವ ದರ್ಜೆಯಲ್ಲಿ ಅಭಿವೃದ್ಧಿ ಪಡಿಸಲು ಕೇಂದ್ರ ಪ್ರವಾಸೋದ್ಯಮದಿಂದ Discover the Beauty of India ಶೀರ್ಷಿಕೆಯಡಿ Dekho Apna Desh Photo Con-test -2025ರ ಛಾಯಾಚಿತ್ರ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಜಿಲ್ಲೆಯ ಐತಿಹಾಸಿಕ ಸ್ಮಾರಕಗಳು, ವನ್ಯಜೀವಿ ಧಾಮಗಳು, ಜಿಐ ಟ್ಯಾಗ್ ಹೊಂದಿರುವ ಕರಕುಶಲ ಮತ್ತು ಕೈಮಗ್ಗಗಳು, ಭೂದೃಶ್ಯ ಅಂದರೆ ಬೆಟ್ಟಗುಡ್ಡಗಳು, ಸಾಹಸಮಯ ಪ್ರವಾಸಿ ತಾಣಗಳ ಆಕರ್ಷಕ ಛಾಯಾಚಿತ್ರಗಳನ್ನು ಆಯೋಜಿಸಿರುವ ಸ್ಪರ್ಧೆಗೆ ಪ್ರವಾಸಿ ತಾಣಗಳ ಕಿರು ವಿವರಣೆಯೊಂದಿಗೆ ಅತ್ಯುತ್ತಮ ಛಾಯಾಚಿತ್ರಗಳನ್ನು ಏಪ್ರಿಲ್ 07ರ ಒಳಗೆ ಇ–ಮೇಲ್ ವಿಳಾಸ: Dekhoapnadeshpho-tos@gmail.com ಗೆ ಕಳುಹಿಸಬಹುದಾಗಿದೆ.

# ಸರ್ಕಾರಿ ನಿವೃತ್ತ ನೌಕರರಿಗೆ ಉಚಿತ ಆರೋಗ್ಯ ಸೌಲಭ್ಯಕ್ಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಏ.4–ರಾಜ್ಯ ಸರ್ಕಾರಿ ನಿವೃತ್ತ ನೌಕರರು ಹಾಗೂ ಕುಟುಂಬ ಪಿಂಚಣಿದಾರರಿಗೆ ಉಚಿತ ಆರೋಗ್ಯ ಸೌಲಭ್ಯ ನೀಡುವಂತೆ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಡಾ. ಎಲ್. ಭೈರಪ್ಪ ಸರ್ಕಾರವನ್ನು ಒತ್ತಾಯಿಸಿದರು.

ರಾಜ್ಯ ಸರ್ಕಾರಿ ನಿವೃತ್ತ ನೌಕರ ಸಂಘದ ವತಿಯಿಂದ ಅರಮನೆ ಮೈದಾನದಲ್ಲಿಂದು ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಕಾರ್ಯಾಗಾರ ಹಾಗೂ ಬೃಹತ್ ಸಮಾವೇಶದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಅವರು, ನಾಲ್ಕೂವರೆ ಲಕ್ಷ ಪಿಂಚಣಿದಾರರು ಇದ್ದು, ಜೀವನದ ಸಂಧ್ಯಾ ಕಾಲದಲ್ಲಿರುವ ಇವರು ಹಲವು ರೀತಿಯ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಎಂದರು.

ರಾಜ್ಯ 7ನೇ ವೇತನ ಆಯೋಗದ ಶಿಫಾರಸಿನಂತೆ ರಾಜ್ಯ ಸರ್ಕಾರಿ ನಿವೃತ್ತ ನೌಕರರು ಮತ್ತು ಕುಟುಂಬ ಪಿಂಚಣಿದಾರರಿಗೆ ಸಂಧ್ಯಾ ಕಿರಣ ಯೋಜನೆಯನ್ನು ಶೀಘ್ರವಾಗಿ ಜಾರಿಗೊಳಿಸಬೇಕು. 70 ವರ್ಷ ಮೇಲ್ಪಟ್ಟ 80 ವರ್ಷದೊಳಗಿನ ನಿವೃತ್ತ ನೌಕರರು ಹಾಗೂ ಕುಟುಂಬ ಪಿಂಚಣಿದಾರರಿಗೆ ಮೂಲ ಪಿಂಚಣಿಯಲ್ಲಿ ಶೇ.10ರಷ್ಟು ಹೆಚ್ಚಳ ಮಾಡಿ ಆರ್ಥಿಕ ಸೌಲಭ್ಯ ನೀಡಬೇಕು ಎಂದು ಅವರು ಕೋರಿದರು. ನಿವೃತ್ತ ನೌಕರರು ಮತ್ತು ಕುಟುಂಬ ಪಿಂಚಣಿದಾರರು ಮೃತಪಟ್ಟಾಗ ಶವಸಂಸ್ಕಾರಕ್ಕೆ 10 ಸಾವಿರ ರೂ.ಗಳ ಶವ ಸಂಸ್ಕಾರ ಭತ್ಯೆ ನೀಡಬೇಕು. 2022ರ ಜುಲೈ ಒಂದರಿಂದ 2024ರ ಜುಲೈ 31ರ ಅವಧಿಯಲ್ಲಿ ನಿವೃತ್ತಿಯಾಗಿರುವ ನೌಕರರ ಆರ್ಥಿಕ ಪರಿಸ್ಥಿತಿಯನ್ನು ಸಹಾನುಭೂತಿಯಿಂದ ಪರಿಗಣಿಸಿ 2022ರ ಜುಲೈ ಒಂದರಿಂದ ಅನ್ವಯವಾಗುವಂತೆ ಡಿಸಿಆರ್‌ಜಿ ರಜೆನಗದೀಕರಣ, ಕಮ್ಯೂಟೇಷನ್‌ಗೆ ಸಂಬಂಧಪಟ್ಟ ಆರ್ಥಿಕ ಸೌಲಭ್ಯ ನೀಡಲು ಮನವಿ ಮಾಡಿದರು.

ಕೆಎಸ್ಆರ್‌ಟಿಸಿ ಹಾಗೂ ನಗರ ಸಾರಿಗೆ ಬಸ್ಸುಗಳಲ್ಲಿ ನಿವೃತ್ತ ನೌಕರರು ಮತ್ತು ಕುಟುಂಬ ಪಿಂಚಣಿದಾರರಿಗೂ ಉಚಿತ ಪ್ರಯಾಣ ಸೌಲಭ್ಯ ನೀಡಬೇಕು ಇಲ್ಲವೇ, ಶೇ.50ರಷ್ಟು ರಿಯಾಯಿತಿ ನೀಡಬೇಕು. ನಿವೃತ್ತ ನೌಕರರಿಗೆ ಆದಾಯ ತೆರಿಗೆಯಿಂದ ವಿನಾಯಿತಿ ನೀಡಲು ಭಾರತ ಸರ್ಕಾರಕ್ಕೆ ಶಿಫಾರಸು ಮಾಡುವಂತೆ ರಾಜ್ಯ ಸರ್ಕಾರವನ್ನು ಕೋರಿದರು.

ರಾಜ್ಯ ಸರ್ಕಾರಿ ನಿವೃತ್ತ ನೌಕರರ ಕೇಂದ್ರ ಸಂಘಕ್ಕೆ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಶಾಖೆಗಳಿಗೆ ಸರ್ಕಾರದಿಂದ ಉಚಿತವಾಗಿ ಅಥವಾ ರಿಯಾಯಿತಿ ದರದಲ್ಲಿ ನಿವೇಶನ ಮಂಜೂರು ಮಾಡುವಂತೆ ಅವರು ಮನವಿ ಮಾಡಿದರು. ಸಮಾವೇಶದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಷಡಕ್ಷರಿ, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಡಾ.ಟಿ.ಹೆಚ್. ಆಂಜನಪ್ಪ, ಪುಣ್ಯ ಆಸ್ಪತ್ರೆಯ ಲ್ಯಾಪ್ರೋಸ್ಕೋಪಿ ತಜ್ಞರಾದ ಡಾ.ಪುಣ್ಯವತಿ ಸಿ.ನಾಗರಾಜ್, ಸರ್ಕಾರಿ ನಿವೃತ್ತ ನೌಕರರ ಸಂಘದ ಗೌರವಾಧ್ಯಕ್ಷ ಎಂ.ವಿ.ರಾಜಶೇಖರಯ್ಯ, ಪ್ರಧಾನ ಕಾರ್ಯದರ್ಶಿ ರಂಗೇಗೌಡ, ಖಜಾಂಚಿ ಆನಂದಪ್ಪ ಸೇರಿದಂತೆ ಸಂಘದ ಜಿಲ್ಲಾ, ತಾಲ್ಲೂಕು ಶಾಖೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

# ಬಿಜೆಪಿ ಪ್ರತಿಭಟನೆಗೆ ಡಿಕೆಶಿ ಲೇವಡಿ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ,ಏ.4–ಮುಖ್ಯಮಂತ್ರಿ ಸಿದ್ದರಾಮಯ್ಯನವರು ಲೋಕಸಭೆಯ ವಿರೋಧಪಕ್ಷದ ನಾಯಕ ರಾಹುಲ್‌ಗಾಂಧಿಯವರನ್ನು ಭೇಟಿ ಮಾಡಿರುವುದರಲ್ಲಿ ಯಾವ ತಪ್ಪೂ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು, ಮುಖ್ಯಮಂತ್ರಿ ಹಾಗೂ ಕೆಲ ಸಚಿವರು ದೆಹಲಿಗೆ ಬಂದಿದ್ದೇವೆ. ನಾನೂ ಕೂಡ ರಾಹುಲ್‌ಗಾಂಧಿಯವರನ್ನು ಭೇಟಿ ಮಾಡಿದ್ದೆ. ಅದರಂತೆ ಸಿದ್ದರಾಮಯ್ಯನವರೂ ಭೇಟಿ ಮಾಡಿದ್ದಾರೆ. ಕಾಂಗ್ರೆಸ್ ಕಚೇರಿ ನಮಗೆ ದೇವಸ್ಥಾನವಿದ್ದಂತೆ. ರಾಹುಲ್‌ಗಾಂಧಿ ರಾಷ್ಟ್ರೀಯ ನಾಯಕರು. ಅವರನ್ನು ಭೇಟಿ ಮಾಡಿರುವುದರಲ್ಲಿ ತಪ್ಪೇನೂ ಇಲ್ಲ. ನಮ ಪಕ್ಷದ ನಾಯಕರನ್ನು ಬಿಟ್ಟು ಮತ್ತಿನ್ಯಾರನ್ನೂ ಭೇಟಿ ಮಾಡಲು ಸಾಧ್ಯ? ಎಂದು ಪ್ರಶ್ನೆ ಮಾಡಿದರು.

ನಿನ್ನೆ ಕರ್ನಾಟಕ ಭವನ ಉದ್ಘಾಟನೆಯಾಗಿದೆ. ಅದು ಕರ್ನಾಟಕದಿಂದ ಬರುವ ರಾಜ–ಕಾರಣಿ ಹಾಗೂ ಅಧಿಕಾರಿಗಳಿಗೂ ಉತ್ತಮ ವ್ಯವಸ್ಥೆ ಕಲ್ಪಿಸಲಿ, ಇಲ್ಲಿ ನಡೆಯುವ ಚರ್ಚೆಗಳು ರಾಜ್ಯದ ಅಭಿವೃದ್ಧಿಗೆ ಪೂರಕವಾಗಿರಲಿ ಎಂದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕೆಲ ಸಲಹೆಗಳನ್ನು ನೀಡಿದ್ದಾರೆ. ಅದನ್ನು ಅನುಷ್ಠಾನಕ್ಕೆ ತರುವ ಅಗತ್ಯವಿದೆ ಎಂದು ಹೇಳಿದರು.

ಬೆಲೆ ಏರಿಕೆ ವಿರೋಧಿಸಿ ಬಿಜೆಪಿಯವರು ಪ್ರತಿಭಟನೆ ನಡೆಸುತ್ತಿರುವುದಕ್ಕೆ ಶುಭ ಕೋರುತ್ತೇವೆ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಟೋಲ್ ಬೆಲೆ ಹೆಚ್ಚಾಗುತ್ತಿದೆ. ಅದನ್ನು ಏಕೆ ಬಿಜೆಪಿಯವರು ಪ್ರತಿಭಟಿಸುತ್ತಿಲ್ಲ. ಈ ಹಿಂದೆ ಪೆಟ್ರೋಲ್, ಡೀಸೆಲ್, ಅಡುಗೆ ಅನಿಲದ ಬೆಲೆಯೆಲ್ಲಾ ಹೆಚ್ಚಾದಾಗ ಏಕೆ ಪ್ರತಿಭಟನೆ ಮಾಡಲಿಲ್ಲ.


ಆಗಲೂ ಅವರು ಜನಪ್ರತಿನಿಧಿಗಳಾಗಿದ್ದರಲ್ಲಾ ಎಂದು ಲೇವಡಿ ಮಾಡಿದರು.

ಹಾಲು, ನೀರಿನ ಮೇಲಿನ ಬೆಲೆ ಹೆಚ್ಚಳ ಮಾಡುತ್ತಿದ್ದೇವೆ. ಅದರಿಂದ ರೈತರಿಗೆ ಅನುಕೂಲವಾಗುತ್ತಿದೆ. ರೈತರ ಪಕ್ಷ ಎಂದು ಕೇವಲ ಹಸಿರು ಟವಲ್ ಹಾಕಿಕೊಂಡರೆ ಸಾಲುವುದಿಲ್ಲ.

ಅವರಿಗೆ ಅನುಕೂಲ ಮಾಡಿಕೊಡಬೇಕು. ನಾವು ಗ್ರಾಮೀಣ ಪ್ರದೇಶಗಳಿಗೆ ಭೇಟಿ ನೀಡಿದಾಗ ರೈತರು ನಮಗೆ ಹೊಡೆಯಲಿಲ್ಲ. ಅದೇ ಪುಣ್ಯ. ಹಸುಗಳನ್ನು ಸಾಕಲು ಸಾಧ್ಯವಾಗುತ್ತಿಲ್ಲ. ಬೇರೆ ಬೇರೆ ದರಗಳು ಹೆಚ್ಚಾಗುತ್ತಿವೆ ಎಂದು ಜನ ಆಕ್ರೋಶಗೊಂಡಿದ್ದರು. ಹಸುಗಳನ್ನು ಮಾರಾಟ ಮಾಡುವ ಪರಿಸ್ಥಿತಿಯಲ್ಲಿದ್ದರು. ಹಾಲಿನ ದರ ಬೆಲೆ ಏರಿಕೆಯಿಂದ ಅವರಿಗೆ ಅನುಕೂಲವಾಗುತ್ತಿದೆ ಎಂದು ಹೇಳಿದರು. ವಿಧಾನಪರಿಷತ್ ಸದಸ್ಯರ ನೇಮಕಾತಿಗೆ ಚರ್ಚೆಯಾಗುತ್ತಿದೆ. ಆದರೆ ಈಗಾಗಲೇ ನಿರ್ಧಾರವಾಗಿದೆ, ನಾಳೆ ಪ್ರಕಟವಾಗುತ್ತದೆ ಎಂಬುದು ಸರಿಯಲ್ಲ ಎಂದರು.

ಪ್ರತಿಭಟನೆ ವಿಚಾರದಲ್ಲಿ ಬಿಜೆಪಿ ಮತ್ತು ಜೆಡಿಎಸ್ ನಡುವೆ ಒಡಕು ಮೂಡಿರುವುದಕ್ಕೆ ನಾನು ಪ್ರತಿಕ್ರಿಯಿಸುವುದಿಲ್ಲ. ಎರಡೂ ಪಕ್ಷಗಳು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ ಎಂದು ಹೇಳಿದರು.

# ಕನ್ನಡ ಸೇನೆ ಕರ್ನಾಟಕ ಸಂಘಟನೆಗೆ ಸಾಬೇರ್ ದರವೇಶ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಕನ್ನಡ ಸೇನೆ ಕರ್ನಾಟಕ ಸಂಘಟನೆಗೆ ಮಹಮ್ಮದ್ ಸಾಬೇರ್ ದರವೇಶ ಅವರನ್ನು ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಅವರ ಆದೇಶದ ಮೇರೆಗೆ ನೇಮಕ ಮಾಡಲಾಗಿದೆ ಎಂದು ಜಿಲ್ಲಾ ಅಧ್ಯಕ್ಷ ಸುಭಾಷ ಕೆನ್ನಾಡೆ ತಿಳಿಸಿದ್ದಾರೆ. ಕನ್ನಡ ನಾಡು, ನುಡಿ, ನೆಲ, ಜಲದ ಸೇವೆಗಾಗಿ ಮಹಮ್ಮದ್ ಸಾಬೇರ್ ದರವೇಶ ಅವರನ್ನು ಜಿಲ್ಲಾ ಉಪಾಧ್ಯಕ್ಷರಾಗಿ ಶುಕ್ರವಾರ ನೇಮಕಾತಿ ಆದೇಶ ಪತ್ರ ನೀಡಿದರು. ಕನ್ನಡ ವಿರುದ್ಧ ಚಟುವಟಿಕೆಗಳು ಕಂಡು ಬಂದಲ್ಲಿ ತಕ್ಷಣ ಸದ್ಯಸತ್ವ ರದ್ದು ಪಡಿಸಲಾಗುವುದು ಎಂದು ನೇಮಕಾತಿ ಪತ್ರದಲ್ಲಿ ತಿಳಿಸಲಾಗಿದೆ. ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ರಮೇಶ ಧೂಳ, ಜಿಲ್ಲಾ ಕೋಶಾಧ್ಯಕ್ಷ ಹಮ್ಮಿದ್, ನಿರ್ಣಾ ಗ್ರಾಮ ಅಧ್ಯಕ್ಷ ರಮೇಶ ಬಾಕಿ, ಜಿಲ್ಲಾ ಮಾಧ್ಯಮ ಸಂಚಾಲಕರು ಚಿದಾನಂದ ಗುಳ್ಳಾ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಬಸವಕಲ್ಯಾಣ :– ಮಹಾರಾಷ್ಟ್ರದ ಉಮರಗಾ ತಾಲೂಕಿನ ಅಚ್ಚಲಪೇಟ್ ದೇವಸ್ಥಾನದಲ್ಲಿ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ತಮ್ಮ ಅಮೃತ ಹಸ್ತದಿಂದ ಶ್ರೀ ಕಾಶಿನಾಥ ಮಹಾರಾಜ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮಾಡಿದರು. ಈ ಸಂದರ್ಭದಲ್ಲಿ ಹರಿ ಗುರೂಜಿ, ಜ್ಞಾನೇಶ್ವರ ಗುರೂಜಿ, ಅರುಣ ಆಕಡೆ ಲಾತೂರ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಬೆಂಗಳೂರು: ಮನೆಗೆ ನುಗ್ಗಿದ ಚಿರತೆ, ಡೋರ್ ಲಾಕ್ ಮಾಡಿ ಆಚೆ ಬಂದ ದಂಪತಿ!



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಬೆಂಗಳೂರಿನ ಹೊರವಲಯದ ಜಿಗಣಿಯಲ್ಲಿರುವ ಮನೆಯೊಂದಕ್ಕೆ ಗುರುವಾರ ಬೆಳಗ್ಗೆ ಚಿರತೆ ನುಗ್ಗಿದ್ದು, ಬೆಚ್ಚಿಬಿದ್ದ ದಂಪತಿ, ಕೂಡಲೇ ಮನೆಯಿಂದ ಆಚೆ ಬಂದು ಬಾಗಿಲು ಲಾಕ್ ಮಾಡಿದ್ದಾರೆ.

ಇಂದು ಬೆಳಗ್ಗೆ ಜಿಗಣಿಯ ಪಿಲ್ಲಾ ರೆಡ್ಡಿ ಲೇಔಟ್‌ನಲ್ಲಿ ಈ ಘಟನೆ ನಡೆದಿದ್ದು, ವೆಂಕಟೇಶ್, ಅವರ ಪತ್ನಿ ವೆಂಕಟಲಕ್ಷ್ಮಿ ಮತ್ತು ಅವರ ಮಗ ನಿಖಿಲ್ ವಾಸಿಸುತ್ತಿದ್ದ ಬಾಡಿಗೆ ಮನೆಗೆ ಚಿರತೆ ನುಗ್ಗಿದೆ.

ಚಿರತೆ ಬಂದಿದ್ದನ್ನ ಗಮನಿಸಿದ ವೆಂಕಟೇಶ್ ಅವರು ಒಂದು ಕ್ಷಣ ಭಯಬೀತರಾಗಿದ್ದರೂ ವಿಚಲಿತರಾಗದೆ ಸಮಯಪ್ರಜ್ಞೆ ತೋರಿ, ಮನೆಯಲ್ಲಿದ್ದ ಪತ್ನಿಯನ್ನು ಹೊರಗೆ ಕರೆತಂದು ಮನೆ ಬಾಗಿಲನ್ನ ಲಾಕ್ ಮಾಡಿದ್ದಾರೆ. ಇದರಿಂದ ಚಿರತೆ ಮನೆಯೊಳಗೆ ಲಾಕ್ ಆಗಿದ್ದು, ಬಳಿಕ ಪೊಲೀಸರು ಹಾಗೂ ಅರಣ್ಯ ಇಲಾಖೆಹಗೆ ಮಾಹಿತಿ ನೀಡಿದ್ದಾರೆ.

ತಕ್ಷಣ ಸ್ಥಳಕ್ಕೆ ಆಗಮಿಸಿದ ಪೊಲೀಸ್ ಸಿಬ್ಬಂದಿ ಹಾಗೂ ಅರಣ್ಯ ಇಲಾಖೆಯವರು ಮನೆಯಲ್ಲಿ ಲಾಕ್ ಆಗಿದ್ದ ಚಿರತೆಯನ್ನು ಸೆರೆ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ.

ಘಟನೆಯಲ್ಲಿ ಯಾರಿಗೂ ಯಾವುದೇ ಗಾಯಗಳಾಗಿಲ್ಲ ಎಂದು ಅರಣ್ಯ ಅಧಿಕಾರಿಯೊಬ್ಬರು ದೃಢಪಡಿಸಿದ್ದಾರೆ.

ಅರಣ್ಯಪ್ರದೇಶವಾದ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದ ಬಳಿ ಇರುವ ಜಿಗಣಿಯಲ್ಲಿ ಚಿರತೆಗಳು ಮತ್ತು ಆನೆಗಳು ಸೇರಿದಂತೆ ಆಗಾಗ್ಗೆ ವನ್ಯಜೀವಿಗಳು ವಸತಿ ಪ್ರದೇಶದಲ್ಲಿ ಕಾಣಿಸಿಕೊಳ್ಳುತ್ತವೆ ಎಂದು ಅರಣ್ಯ ಅಧಿಕಾರಿ ತಿಳಿಸಿದ್ದಾರೆ.

# ಪಂಚಮಸಾಲಿ ಹೋರಾಟಗಾರರ ಮೇಲೆ ಲಾಠಿ ಚಾರ್ಜ್: ನ್ಯಾಯಾಂಗ ತನಿಖೆಗೆ ಹೈಕೋರ್ಟ್ ಆದೇಶ



ಮಲ್ಲಮ್ಮ ನುಡಿ ವಾರ್ತೆ

ಧಾರವಾಡ: ಕಳೆದ ಡಿಸೆಂಬರ್ 10ರಂದು ಬೆಳಗಾವಿಯಲ್ಲಿ ನಡೆದ ಅಧಿವೇಶನದ ಸಂದರ್ಭದಲ್ಲಿ ಪಂಚಮಸಾಲಿ ಮೀಸಲಾತಿ ಹೋರಾಟಗಾರರ ಮೇಲೆ ನಡೆದ ಲಾಠಿ ಚಾರ್ಜ್ ಪ್ರಕರಣವನ್ನು ಧಾರವಾಡ ಹೈಕೋರ್ಟ್ ಪೀಠ ಶುಕ್ರವಾರ ನ್ಯಾಯಾಂಗ ತನಿಖೆಗೆ ಆದೇಶಿಸಿದೆ.

ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ನೀಡಬೇಕು ಎಂದು ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದವರ ಮೇಲೆ ನಡೆದ ಲಾಠಿ ಚಾರ್ಜ್ ಬಗ್ಗೆ ತನಿಖೆಗೆ ಆದೇಶಿಸಬೇಕು ಎಂದು ಕೋರಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್, ನ್ಯಾಯಾಂಗ ತನಿಖೆಗೆ ಆದೇಶಿಸಿದೆ.

ಲಾಠಿ ಚಾರ್ಜ್ ಬಗ್ಗೆ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿಯಿಂದ ತನಿಖೆ ನಡೆಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಸೂಚನೆ ನೀಡಿದೆ. ಅಲ್ಲದೇ ಕಾಲ ಮಿತಿಯಲ್ಲಿ ತನಿಖೆ ನಡೆಸಿ ವರದಿ ನೀಡುವಂತೆ ಆದೇಶಿಸಿದೆ. 2ಎ ಮೀಸಲಾತಿಗಾಗಿ ಸುವರ್ಣ ಸೌಧ ಮುತ್ತಿಗೆಗೆ ಯತ್ನಿಸಿದ್ದ ಪಂಚಮಸಾಲಿ ಸಮುದಾಯದ ಹೋರಾಟಗಾರರ ಮೇಲೆ ಪೊಲೀಸರು ಲಾಠಿ ಚಾರ್ಜ್ ಮಾಡಿದ್ದರು. ಇದು ತೀವ್ರ ಆಕ್ರೋಶಕ್ಕೆ ಕಾರಣವಾಗಿತ್ತು. ಸರ್ಕಾರದ ನಡೆ ಖಂಡಿಸಿ ಬಿಜೆಪಿ ಹಾಗೂ ಕೂಡಲಸಂಗಮದ ಪಂಚಮಸಾಲಿ ಗುರುಪೀಠದ ಬಸವ ಜಯಮೃತ್ಯುಂಜಯ ಸ್ವಾಮೀಜಿ ಪ್ರತಿಭಟನೆ ನಡೆಸಿದ್ದರು ಮತ್ತು ತಮ್ಮ ಸಮುದಾಯದ ಜನರ ಮೇಲೆ ಲಾಠಿ ಚಾರ್ಜ್ ಮಾಡಿದ ಪೊಲೀಸ್ ಅಧಿಕಾರಿಗಳು ಅಮಾನತು ಮಾಡುವಂತೆ ಆಗ್ರಹಿಸಿದ್ದರು.

## ಪವರ ಗ್ರೀಡ್ ಉಪ ಕೇಂದ್ರಕ್ಕೆ ಜಿಲ್ಲಾಧಿಕಾರಿ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 04 : ಕಮಲನಗರ್ ತಾಲ್ಲೂಕಿನ ಚಿಮ್ಮೇಗಾಂವ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಿರ್ಮಿಸಲಾಗುತ್ತಿರುವ ಪವರ ಗ್ರೀಡ್ ಉಪಕೇಂದ್ರಕ್ಕೆ ಬುಧವಾರ ಸಂಜೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಭೇಟಿ ನೀಡಿದರು.

ಬಳಿಕ ಮಾತನಾಡಿದ ಅವರು, ಪವರ ಗ್ರೀಡ್ ಉಪ ಕೇಂದ್ರದ ಕಾಮಗಾರಿ ವೇಳೆ ಗುಂಡಿ ಅಗೆಯಲು ಸ್ಫೋಟಕಗಳನ್ನು ಬಳಕೆ ಮಾಡುತ್ತಿದ್ದು, ಇದರಿಂದ ಅಕ್ಕ-ಪಕ್ಕದ ಗ್ರಾಮಗಳಲ್ಲಿನ ಕೊಳವೆಬಾವಿ,ತೆರೆದಬಾವಿಯ ನೀರು ಬತ್ತಿ ಹೋಗುತ್ತಿವೆ.

ಇದರಿಂದ ನೀರಿನ ಸಮಸ್ಯೆಯಾಗಿದ್ದು, ಕಡಿಮೆ ಸಾಮರ್ಥ್ಯದ ಸ್ಫೋಟಕ ಬಳಕೆ ಮಾಡಿ ಗುಂಡಿಗಳನ್ನು ಅಗೆಯಬೇಕು. ಕೊಳವೆ ಬಾವಿ ಹಾಗೂ ತೆರೆದ ಬಾವಿಗಳ ನೀರು ಬತ್ತಿರುವ ಗ್ರಾಮಗಳಲ್ಲಿ ಹೊಸ ಕೊಳವೆ ಬಾವಿ ಹಾಗೂ ತೆರೆದ ಬಾವಿಯನ್ನು ಕೊರೆಸಬೇಕು. ಯಾವುದೇ ಕಾರಣಕ್ಕೂ ನೀರಿನ ಸಮಸ್ಯೆಯಾಗದಂತೆ ನಿಗಾವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಚಿಮ್ಮೇಗಾಂವ ಗ್ರಾಮದಲ್ಲಿ ಶಾಶ್ವತ ಕುಡಿಯುವ ನೀರಿಗಾಗಿ ಭೋಪಾಳಗಡಬೆಳಕೋಣಿಕೆರೆಯ ಹತ್ತಿರ ತೆರೆದ ಬಾವಿ ಕೊರೆದು ವ್ಯವಸ್ಥೆ ಮಾಡಿಕೊಡಬೇಕು ಎಂದು ತಿಳಿಸಿದರು.

ಪವರ ಗ್ರೀಡ್ ಕೇಂದ್ರದ ಅಕ್ಕ-ಪಕ್ಕದ ರೈತರ ಹೊಲಗಳಿಗೆ ಹೋಗುವ ಕಾಲು ದಾರಿ ಇಲ್ಲದೆ ತುಂಬಾ ತೊಂದರೆ ಅನುಭವಿಸುತ್ತಿರುವ ಕುರಿತು ರೈತರು ತಿಳಿಸಿದ್ದಾರೆ. ರೈತರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಅವರ ಹೊಲಗಳಿಗೆ ಹೋಗಲು ಕಾಲುದಾರಿ ವ್ಯವಸ್ಥೆ ಮಾಡಿಕೊಡುವಂತೆ ಪವರ್ ಗ್ರಿಡ್ ಕಾರ್ಪೊರೇಷನ್ ಲಿಮಿಟೆ???ನ ಡೆಪ್ಯೂಟಿ ಜನರಲ್ ಮ್ಯಾನೇಜರ್ ಗಣೇಶ ಅವರಿಗೆ ತಿಳಿಸಿದರು.

ಪವರ್ ಗ್ರಿಡ್ ಕಾರ್ಪೊರೇಷನ್ ಲಿಮಿಟೆ???ನ ಡೆಪ್ಯೂಟಿ ಜನರಲ್ ಮ್ಯಾನೇಜರ್ ಗಣೇಶ, ತಹಶೀಲ್ದಾರ್ ಅಮೀತಕುಮಾರ ಕುಲಕರ್ಣಿ, ತಾ.ಪಂ. ಇಒ ಮಾಣಿಕರಾವ ಪಾಟೀಲ್, ಸಹಾಯಕ ಆಯುಕ್ತ ಮೊಹಮ್ಮದ ಶಕೀಲ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಔರಾದ ಉಪವಿಭಾಗದ ಎಇಇ ಮಾಣಿಕರಾವ, ಜೆಇ ಶಿವಕುಮಾರ,ನಾಡತಹಶೀಲ್ದಾರ ಸೋಮಶೇಖರ, ಕಂದಾಯ ನಿರೀಕ್ಷಕ ಸಂಜುಕುಮಾರ ರಾಠೋಡ, ಗ್ರಾಮ ಲೆಕ್ಕಿಗ ಮಹಾಳಪ್ಪಾ,ಗ್ರಾ.ಪಂ. ಪಿಡಿಒ ತಾನಾಜಿ ಪಾಟೀಲ್,ಗ್ರಾ.ಪಂ. ಅಧ್ಯಕ್ಷೆ ಯಶೋಧಾಬಾಯಿ ಸಂತೋಷ, ಗ್ರಾ.ಪಂ ಸದಸ್ಯ ಅನೀಲಕುಮಾರ ಬಿರಾದಾರ, ಮುಖಂಡರಾದ ಭಾನುದಾಸ ಮುಳೆ, ಪಂಢರಿ ವರವಟ್ಟೆ, ಸತೀಶ ದೇಶಮುಖ, ಕಿಶೋರ ಪಾಟೀಲ, ಸಂತೋಷ ಜಾಧವ, ಅನಂತ ಹಾಗೂ ಅನೇಕರು ಇದ್ದರು.

# ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ದಲಿತರ ಹಕ್ಕು ಕಬಳಿಸಿದ ಚವ್ಹಾಣ ಶಾಸಕತ್ವ ರದ್ದುಗೊಳಿಸಿ: ನಿರಾಟೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 04 : 2008 ರಿಂದ ಇಲ್ಲಿಯವರೆಗೆ ಔರಾದ ಮೀಸಲು ವಿಧಾನಸಭಾ ಕ್ಷೇತ್ರದ ಹಾಲಿ ಶಾಸಕರಾದ ಪ್ರಭು ಚವ್ಹಾಣ ಅವರು ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಶಾಸಕರಾಗಿ ದಲಿತರ ಎಲ್ಲಾ ಹಕ್ಕುಗಳು ಅನುಭವಿಸಿ ಮೋಸ ಮಾಡಿದ್ದು, ಅವರ ಶಾಸಕತ್ವ ಕೂಡಲೇ ರದ್ದುಗೊಳಿಸಬೇಕೆಂದು ದಲಿತ ಸೇನೆ (ರಾಮವಿಲಾಸ) ರಾಜ್ಯ ಉಪಾಧ್ಯಕ್ಷ ಚಂದ್ರಕಾಂತ ನಿರಾಟೆ ಆಗ್ರಹಿಸಿದರು.

ಶುಕ್ರವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಪ್ರಭು ಚವ್ಹಾಣ ಅವರು ಮೂಲತಃ ಮಹಾರಾಷ್ಟ್ರದವರಾಗಿದ್ದು,ಅವರ ಶಿಕ್ಷಣ ಸಹ ಮಹಾರಾಷ್ಟ್ರದಲ್ಲಿಯೇ ಆಗಿರುತ್ತದೆ. ಅವರ ಮಕ್ಕಳು ಸಹ ಮಹಾರಾಷ್ಟ್ರದಲ್ಲಿಯೇ ಶಿಕ್ಷಣ ಪಡೆದಿರುತ್ತಾರೆ. ಈಗಿನ ಅವರ ವಾಸಸ್ಥಾನವಾದ ಬೋಂತಿ ತಾಂಡಾ ಅವರ ಅಜ್ಜಿಯ ಊರಾಗಿದ್ದು,ಇಲ್ಲಿಯೇ ಉಳಿದು ನಾಲ್ಕು ಬಾರಿ ಶಾಸಕರಾಗಿ ಸರ್ಕಾರದ ಎಲ್ಲಾ ಸೌಲತ್ತುಗಳು ಅನುಭವಿಸಿದ್ದಾರೆ. ಮಂತ್ರಿ ಸಹ ಆಗಿ ದಲಿತರ ಹಕ್ಕು ವಂಚಿಸಿದ್ದಾರೆ. ಇವರ ವಿರುದ್ಧ ಹೋರಾಟಕ್ಕಿಳಿದ ಹಲವು ದಲಿತ ಮುಖಂಡರನ್ನು ಹತ್ತಿಕ್ಕುವ ಪ್ರಯತ್ನ ಮಾಡಿರುತ್ತಾರೆ ಎಂದು ಆರೋಪಿಸಿದರು.

2023ರಲ್ಲಿ ಔರಾದ ಮೀಸಲು ವಿಧಾನಸಭೆ ಕ್ಷೇತ್ರದಿಂದ ನರಸಿಂಗ್ ತಂದೆ ತುಕಾರಾಮ ಎನ್ನುವವರು ಚವ್ಹಾಣ ಅವರ ವಿರುದ್ಧ ಸ್ಪರ್ಧೆ ಮಾಡಿದ್ದರು. ಆದರೆ ಆಗಿನ ಚುನಾವಣಾಧಿಕಾರಿಗಳು ಚವ್ಹಾಣ ಅವರ ಅರ್ಜಿ ಪುರಸ್ಕರಿಸಿ ನರಸಿಂಗ್ ಅವರ ಅರ್ಜಿ ತಿರಸ್ಕರಿಸುವ ಮೂಲಕ ದಲಿತರನ್ನು ಚೆನ್ನಾಗಿ ತುಳಿಯುವ ಕಾರ್ಯ ನಡೆಯಿತು. ಅದೇ ಸಂದರ್ಭದಲ್ಲಿ ನರಸಿಂಗ ಅವರು ಚವ್ಹಾಣರ ವಿರುದ್ಧ ಸುಳ್ಳು ಜಾತಿ ಪ್ರಮಾಣ ಪತ್ರ ಪ್ರಶ್ನಿಸಿ ಸಮಾಜ ಕಲ್ಯಾಣ ಇಲಾಖೆ ಆಯುಕ್ತರಿಗೆ ಮೇಲ್ಮನವಿ ಸಲ್ಲಿಸಿದ್ದರು. ಇದನ್ನು ಪ್ರಶ್ನಿಸಿ ಪುನಃ ಚವ್ಹಾಣ ಅವರು ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿ ತನ್ನ ದೌರ್ಜನ್ಯ ಮುಂದುವರೆಸಿದ್ದರು. ಮಾರ್ಚ್ 17, 2025 ರಂದು ಕಲಬುರಗಿ ಹೈಕೋರ್ಟ್‌ನ ನ್ಯಾ. ಸೂರಜ್ ಗೋವಿಂದರಾಜ್ ಅವರ ಏಕಸದಸ್ಯ ಪೀಠವು ಚವ್ಹಾಣ ಅವರ ಅರ್ಜಿ ತಿರಸ್ಕರಿಸಿ ಈ ತಿಂಗಳ 28 ರಂದು ಖುದ್ದಾಗಿ ಅಥವಾ ಅವರ ವಕೀಲರ ಮೂಲಕ ನ್ಯಾಯಾಲಯಕ್ಕೆ ಹಾಜರಾಗಿ ಸೂಕ್ತ ದಾಖಲೆ ಸಲ್ಲಿಸುವಂತೆ ಆದೇಶಿಸಿದ್ದಾರೆ.

ಒಟ್ಟಾರೆಯಾಗಿ ಪ್ರಭು ಚವ್ಹಾಣ ಅವರು ಔರಾದನಲ್ಲಿ ದೌರ್ಜನ್ಯ, ದಬ್ಬಾಳಿಕೆಯಿಂದ ಹಲವರನ್ನು ಸದೆ ಬಡೆಯುತ್ತ ಬರುತ್ತಿದ್ದು, ಅವರ ಈ ದುರ್ವರ್ತನೆಯಿಂದ ಔರಾದ ದಲಿತ ನಾಯಕರು ಇಲ್ಲಿಯವರೆಗೆ ಶಾಸಕರಾಗಲಿ ಅಥವಾ ಇತರೆ ಜನಪ್ರತಿನಿಧಿಗಳಾಗಲೀ ಆಗಲು ಸಾಧ್ಯವಾಗಿಲ್ಲ. ಇಂತಹ ಭಂಡತನ ಹಾಗೂ ಮೋಸಗಾರ ಚವ್ಹಾಣ ಅವರ ಶಾಸಕತ್ವ ವಿಧಾನಸಭೆ ಸಭಾಪತಿಗಳು ಕೂಡಲೇ ರದ್ದುಗೊಳಿಸಬೇಕು. ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಇಲಾಖೆ ಆಯುಕ್ತರು ಇನ್ನು ಮುಂದೆ ಕಾಲಹರಣ ಮಾಡದೆ ಚವ್ಹಾಣ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು. ನಾಲ್ಕು ಬಾರಿ ಶಾಸಕರಾಗಿ ಒಮ್ಮೆ ಮಂತ್ರಿಯಾಗಿ ಅನುಭವಿಸಿದ ಎಲ್ಲಾ ಸರ್ಕಾರಿ ಸೌಲತ್ತುಗಳು ಅವರಿಂದ ವಸೂಲಿ ಮಾಡಬೇಕು. ಚವ್ಹಾಣ ಅವರಿಗೆ ಸುಳ್ಳು ಜಾತಿ ಪ್ರಮಾಣ ಪತ್ರ ನೀಡಿ ಅವರು ಶಾಸಕರಾಗಲು ಬೆಂಬಲಿಸಿದ ತಹಸಿಲ್ದಾರರು, ಚುನಾವಣಾಧಿಕಾರಿಗಳು ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಎಫ್ಐಆರ್ ದಾಖಲಾಗಬೇಕು. ಅವರನ್ನು ಸೇವೆಯಿಂದ ವಜಾಗೊಳಿಸಬೇಕು ಎಂದು ನಿರಾಟೆ ಸರ್ಕಾರಕ್ಕೆ ಒತ್ತಾಯಿಸಿದರು. ಮೇಲಿನ ನಮ್ಮ ಮನವಿ ಸರ್ಕಾರ ಪುರಸ್ಕರಿಸದೇ ಇದ್ದಲ್ಲಿ ಮುಂಬರುವ ದಿನಗಳಲ್ಲಿ ಉಗ್ರ ಹೋರಾಡ ನಡೆಸಲಾಗುವುದೆಂದು ಎಚ್ಚರಿಸಿದ ಅವರು ಈಗಲಾದರೂ ಔರಾದ ಕ್ಷೇತ್ರದ ನಮ್ಮ ದಲಿತ ಬಾಂಧವರು ಚವ್ಹಾಣ ಅವರ ದೌರ್ಜನ್ಯದ ವಿರುದ್ಧ ಸಿಡಿದೆದ್ದು ಪ್ರತಿಭಟನೆಗೆ ಮುಂದಾಗಬೇಕು. ನಮ್ಮ ಸಾಂವಿಧಾನಿಕ ಹಕ್ಕು ಪಡೆಯಲು ಕ್ಷೇತ್ರದ ಎಲ್ಲಾ ನಮ್ಮ ಬಾಂಧವರು ಮುಂದೆ ಬರಬೇಕೆಂದು ಕರೆಕೊಟ್ಟರು.

ಪತ್ರಿಕಾಗೋಷ್ಠಿಯಲ್ಲಿ ಅಂಬೇಡ್ಕರ್ ಯುವ ಸೇನೆ ರಾಜ್ಯಾಧ್ಯಕ್ಷ ರಾಜಕುಮಾರ ಗೂನ್ನಳ್ಳಿ,ದಲಿತ ಮುಖಂಡರಾದ ರಾಘವೇಂದ್ರ ಮೀನಕೇರಾ ಮಾತನಾಡಿದರು. ಅಂಬೇಡ್ಕರ್ ಬೌದ್ಧೆ, ಜಗನ್ನಾಥ ಹೊನ್ನಾ, ಪ್ರಭಾಕರ ಏಕಂಬೇಕರ್, ಭೀಮರಾವ ಭಾವಿಕಟ್ಟಿ, ಅಂಬಾದಾಸ್ ಹುಲಸೂರೆ, ದೀಪಕ ದೊಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕೌಶಲ ಇದ್ದರೆ ಭವಿಷ್ಯ ಉಜ್ವಲ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 04 : ಪದವಿ ಜತೆಗೆ ಕೌಶಲ ಇದ್ದರೆ ಭವಿಷ್ಯ ಉಜ್ವಲವಾಗಲಿದೆ ಎಂದು ಹೈದರಾಬಾದನ ಪ್ರೇರಕ ಭಾಷಣಕಾರ ವೆಂಕಟ ವವಿಲಾಲಾ ಹೇಳಿದರು.

ನಗರದ ಕರ್ನಾಟಕ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಕಾಲೇಜಿನಲ್ಲಿ ಶುಕ್ರವಾರ ಆಯೋಜಿಸಿದ್ದ ವೃತ್ತಿಮಾರ್ಗದರ್ಶನ ಹಾಗೂ ಸಮಾಲೋಚನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೌಶಲಕ್ಕೆ ಈಗ ಎಲ್ಲೆಡೆ ಬಹು ಬೇಡಿಕೆ ಇದೆ ಎಂದು ತಿಳಿಸಿದರು.

ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಪದವಿಗಷ್ಟೇ ಸೀಮಿತರಾಗಬಾರದು. ಉಜ್ವಲ ಭವಿಷ್ಯ ಕಟ್ಟಿಕೊಳ್ಳಲು ನೆರವಾಗುವ ಎಂ.ಬಿ.ಎ, ಎಂ.ಎಸ್ಸಿ, ಎಂ.ಕಾಂ. ಸೇರಿದಂತೆ ವಿವಿಧ ಕೋರ್ಸ್‌ಗಳ ಅಧ್ಯಯನಕ್ಕೆ ಆಸಕ್ತಿ ತೋರಬೇಕು. ಯುಪಿಎಸ್‌ಸಿ, ಕೆಪಿಎಸ್‌ಸಿ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೂ ತಯಾರಿ ನಡೆಸಬೇಕು ಎಂದು ಸಲಹೆ ಮಾಡಿದರು.

ಹೆಚ್ಚು ಅಭಿರುಚಿ ಇರುವ ಕ್ಷೇತ್ರವನ್ನು ಆಯ್ಕೆಮಾಡಿಕೊಂಡಲ್ಲಿ ಯಶಸ್ಸು ಗಳಿಸಬಹುದು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜು ಪ್ರಾಚಾರ್ಯ ಪ್ರೊ. ಮಲ್ಲಿಕಾರ್ಜುನ ಹಂಗರಗಿ, ಹೈದರಾಬಾದನ ಎಸ್.ಎನ್. ಕಮ್ಯುನಿಕೇಷನ್ಸ್ ಮುಖ್ಯಸ್ಥ ಶಂಕರ ಜಾಧವ್, ಉಪ ಪ್ರಾಚಾರ್ಯ ಸೋಮನಾಥ ಬಿರಾದಾರ, ಐಕ್ಯೂಎಸಿ ಸಂಯೋಜಕ ಡಾ. ರಾಜಕುಮಾರ ಪರದೇಶಿ ಮಾತನಾಡಿದರು.

ಕಾಲೇಜಿನ ಐಐಸಿ ಘಟಕದ ಮುಖ್ಯಸ್ಥ ಡಾ. ವಿನೋದ ಕಾಳೇಕರ್ ಸ್ವಾಗತಿಸಿದರು. ವಾಣಿಜ್ಯ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಅನ್ನಿ ಕ್ರಿಸ್ಟಿನಾ ನಿರೂಪಿಸಿದರು. ಗಣಕಯಂತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಪವನಕುಮಾರ ವಂದಿಸಿದರು.

ಕರ್ನಾಟಕ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು ಹಾಗೂ ಹೈದರಾಬಾದನ ಧ್ರುವ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜಮೆಂಟ್ ಸಹಯೋಗದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

## ಗುರುಭದ್ರೇಶ್ವರ ಪುರಾಣ ಕಾರ್ಯಕ್ರಮಕ್ಕೆ ಅದ್ದೂರಿ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 04 : ಬೀದರ್ ತಾಲೂಕಿನ ಸುಕ್ಷೇತ್ರ ಬಾವಗಿ ಗ್ರಾಮದ ಆರಾಧ್ಯ ದೈವ ಪವಾಡ ಪುರುಷ ಶೀ ಗುರು ಭದ್ರೇಶ್ವರ ಜಾತ್ರಾ ಮಹೋತ್ಸವದ ಪ್ರಯುಕ್ತ ಇಂದು ಶ್ರೀ ಗುರು ಭದ್ರೇಶ್ವರ ಅವರ ಪುರಾಣ ಕಾರ್ಯಕ್ರಮ ವನ್ನು ಗುರು ಭದ್ರೇಶ್ವರ ಸಂಸ್ಥಾನದ ವೇದಮೂರ್ತಿ ಭದ್ರಯ್ಯ ಸ್ವಾಮಿ, ಬಾಲಸಂಗಯ್ಯಾ ಸ್ವಾಮಿ, ಶಿವಕುಮಾರ್ ಸ್ವಾಮಿ ರವರು ದೀಪ ಬೆಳಗುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಪ್ರತಿ ವರ್ಷ ನಡೆಯುವ ಜಾತ್ರಾ ಮಹೋತ್ಸವದಲ್ಲಿ ಅನೇಕ ಮಹಾತ್ಮರ ಪುರಾಣ ಪ್ರವಚನ ಹಮ್ಮಿಕೊಂಡಿದ್ದೇವು, ಆದರೆ ಈ ಬಾರಿ ಭಕ್ತರ ಹಾಗೂ ಗ್ರಾಮಸ್ಥರ ಇಚ್ಛೆಯಂತೆ ಪವಾಡ ಪುರುಷ ಶೀ ಗುರು ಭದ್ರೇಶ್ವರ ರವರ ಜೀವನ ಚರಿತ್ರೆ ಕುರಿತು ಪುರಾಣವನ್ನು ಹಮ್ಮಿಕೊಳ್ಳಲಾಗಿದೆ,

ಈ ಪುರಾಣವು 11 ದಿನಗಳ ಕಾಲ ನಡೆಯಲಿದ್ದು ಹಾಗಾಗಿ ಸಕಲ ಭಕ್ತಾದಿಗಳು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಪುರಾಣ ಮತ್ತು ಜಾತ್ರಾ ಮಹೋತ್ಸವ ಯಶಸ್ವಿಯಾಗಿಸಬೇಕೆಂದು ವೇದಮೂರ್ತಿ ಭದ್ರಯ್ಯ ಸ್ವಾಮಿ ನುಡಿದರು.

ಪುರಾಣಿಕರಾದ ಪಂಡಿತ ವೇದ ಮೂರ್ತಿ ಬೆಟದಯ್ಯ ಶಾಸ್ತ್ರಿಗಳು ಶ್ರೀ ಗುರು ಭದ್ರೇಶ್ವರ ಜೀವನ ಚರಿತ್ರೆ ಕುರಿತು ಪುರಾಣವನ್ನು ಭಕ್ತರಿಗೆ ಉಣಬಡಿಸಿದರು. ಕಲಾವಿದರಾದ ಮಹಾದೇವ ಸ್ವಾಮಿ ಯಂಪಳ್ಳಿ, ತಬಲಾ ವಾದಕರಾದ ಶ್ರೀ ದಯಾನಂದ ಸ್ವಾಮಿ ಕಲ್ಲೂರರವರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಮುಖಂಡರಾದ ಚನ್ನಮಲ್ಲಪ್ಪ ಹಜ್ಜರಗಿ, ರಾಜಕುಮಾರ್ ಭದ್ರಣ್ಣ, ಲೋಕೇಶ ಕನಶೆಟ್ಟಿ, ನಾಗಶೆಟ್ಟಿ ಅಳ್ಳಿ, ಕಂಟಯ್ಯ ಸ್ವಾಮಿ ಗುಂಡಯ್ಯ ಸ್ವಾಮಿ, ಕಾಶಪ್ಪಾ ಪಕ್ಕಾ, ಶಿವಕುಮಾರ ರೇಶಟ್ಟಿ, ಮಡೆಪ್ಪ ಹಜರಗಿ ರಾಜಕುಮಾರ ಮಡಿವಾಳ ರಾಜಕುಮಾರ ಪಾಟೀಲ, ಬಸವರಾಜ ಖೌದಿ, ಪ್ರಭು ಹಜ್ಜರಗಿ, ಮಾರುತಿ ಹೂಗಾರ, ಶರಣಪ್ಪಾ ಮುದ್ದ ಸುನೀಲ ಚಿದ್ರಿ ,ನಾಗೇಶ್ ಕೊಳಾರ, ಅವಿನಾಶ್ ಭಾಲ್ಕೇ ರೇವಣಪ್ಪ ಮೆತ್ರಿ ಗುರು ಭದ್ರೇಶ್ವರ ಜಾತ್ರಾ ಮಹೋತ್ಸವದ ಸೇವಾ ಸಮಿತಿಯ ಸದಸ್ಯರು ಸೇರಿದಂತೆ ಹಲವಾರು ಭಕ್ತರು ಬಾವಗಿ ಗ್ರಾಮದ ಸಕಲ ಗ್ರಾಮಸ್ಥರು ಕಾರ್ಯಕ್ರಮಕ್ಕೆ ಸಾಕ್ಷಿಯಾಗಿದ್ದರು.

ಭದ್ರೇಶ್ವರ ಸಂಸ್ಥಾನದ ಶಾಂತಕುಮಾರ ಸ್ವಾಮಿ ನಿರೂಪಿಸಿದರೆ ಆನಂದ ಸ್ವಾಮಿ ವಂದಿಸಿದರು.

## ಬದುಕಿನ ಸುಗಮ ನಿರ್ವಹಣೆಗೆ ಕಾಯಕ ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.4:ಬದುಕಿನ ಸುಗಮ ನಿರ್ವಹಣೆಗೆ ಪ್ರತಿಯೊಬ್ಬರು ನಿತ್ಯ ಕಾಯಕವನ್ನು ಮಾಡಿ ಉತ್ತಮ ಜೀವನವನ್ನು ನಡೆಸಬೇಕು ಎಂದು ಮಲ್ಲಯ್ಯಗಿರಿಯ ಬಸವಲಿಂಗ ಅವಧೂತರು ಹೇಳಿದರು. ತಾಲ್ಲೂಕಿನ ಸಿದ್ದೇಶ್ವರ ಗ್ರಾಮದಲ್ಲಿ ಸಿದ್ದಲಿಂಗೇಶ್ವರ 78ನೇ ಜಾತ್ರಾ ಮಹೋತ್ಸವ ನಿಮಿತ್ಯ ಹಮ್ಮಿಕೊಂಡಿದ್ದ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ಜೀವನದಲ್ಲಿ ಬಡತನವೆಂಬ ದಾರಿದ್ರ್ಯವನ್ನು ಹೋಗಲಾಡಿಸಲು ಬಸವಣ್ಣನವರು ನೀಡಿದ ಕಾಯಕವೇ ಕೈಲಾಸ ಎಂಬ ಮಂತ್ರವನ್ನು ಎಲ್ಲರೂ ಚಾಚು ತಪ್ಪದೇ ಪಾಲಿಸಬೇಕು.

ಮಾನವ ಜನ್ಮ ಬಹುದೊಡ್ಡದು. ಅದನ್ನು ವ್ಯರ್ಥ ಚಟಗಳಿಗೆ ಒಳಪಡಿಸಿ ಹಾಳು ಮಾಡಿಕೊಳ್ಳಬಾರದು. ಭಗವಂತನು ಕರುಣಿಸಿದ ಬದುಕನ್ನು ಸಮಾಜೋಪಯೋಗಿ ಕಾರ್ಯಗಳಿಗೆ ಬಳಸಿ ಸಮಾಜಕ್ಕೂ, ಹೆತ್ತಮನೆಗೂ ಉತ್ತಮ ಕೀರ್ತಿಯನ್ನು ತರಬೇಕು ಎಂದು ತಿಳಿಸಿದರು. ಯುವಕರು ಪಶ್ಚಿಮಾತ್ಯ ಸಂಸ್ಕೃತಿಯ ಪ್ರಭಾವಕ್ಕೆ ಒಳಗಾಗಿ ಭಾರತೀಯ ಸಂಸ್ಕೃತಿಯನ್ನು ಯಾವುದೇ ಕಾರಣಕ್ಕೂ ಮರೆಯಬಾರದು. ಪ್ರತಿಯೊಬ್ಬರೂ ಪ್ರತಿದಿನ ಹೆತ್ತವರ ಸೇವೆಯನ್ನು ಮಾಡುತ್ತಾ ಜಪ, ತಪ, ಶಿವ ಧ್ಯಾನದಲ್ಲಿ ತೊಡಗಿಸಿಕೊಂಡು ಬದುಕನ್ನು ಆನಂದಮವಾಗಿಸಿಕೊಳ್ಳಬೇಕು ಎಂದರು. ಸಿದ್ದಲಿಂಗೇಶ್ವರ ಮಹಿಮೆ ಅಪಾರವಾಗಿದ್ದು, ಅವರು ತೋರಿದ ದಾರಿಯಲ್ಲಿ ಸರವರೂ ಸಾಗಬೇಕು ಎಂದು ಹೇಳಿದರು.

ದೇವಸ್ಥಾನ ಸಮಿತಿ ಅಧ್ಯಕ್ಷ ರಾಜಕುಮಾರ ಬೆಲ್ಲಾಳೆ, ಉಪಾಧ್ಯಕ್ಷ ಚಂದ್ರಕಾಂತ ಸ್ವಾಮಿ, ಕಾರ್ಯದರ್ಶಿ ಶಶಿಧರ ಸೀತಾ ಪ್ರಮುಖರಾದ ಸಂತೋಷ ತರನಳ್ಳಿ, ಬಂಡೆಪ್ಪ ಪರ್ಮಾ, ಸುಧಾಕರ ಪರ್ಮಾ, ವೀರಶೆಟ್ಟಿ ಖಂಡ್ರೆ, ರಾಜಕುಮಾರ ಕನಕಟ್ಟೆ, ವಿಶ್ವನಾಥ ಪರ್ಮಾ, ನಾಗಯ್ಯ ಸ್ವಾಮಿ ಸೇರಿದಂತೆ ಇತರರು ಇದ್ದರು.

## ಔಷಧ ವ್ಯಾಪಾರಿಗಳ ಸಂಘ: 7 ರಿಂದ ಸದಸ್ಯತ್ವ ಅಭಿಯಾನ



ಬೀದರ. ಏ. 04 : ಜಿಲ್ಲಾ ಔಷಧ ವ್ಯಾಪಾರಿಗಳ ಸಂಘವು ಏಪ್ರಿಲ್ 7 ರಿಂದ ಸದಸ್ಯತ್ವ ಅಭಿಯಾನ ನಡೆಸಲಿದೆ ಎಂದು ಸಂಘದ ಅಧ್ಯಕ್ಷ ಶಿವರಾಜ ಪಾಟೀಲ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಸಂಘವನ್ನು ಇನ್ನಷ್ಟು ಬಲಪಡಿಸುವ ದಿಸೆಯಲ್ಲಿ ಸದಸ್ಯತ್ವ ಅಭಿಯಾನ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದು ಹೇಳಿದ್ದಾರೆ.

ಜಿಲ್ಲೆಯ ಔಷಧ ವ್ಯಾಪಾರಿಗಳು ನಗರದ ಜನವಾಡ ರಸ್ತೆಯಲ್ಲಿನ ದೂರದರ್ಶನ ಕೇಂದ್ರದ ಹಿಂಭಾಗದಲ್ಲಿರುವ ಫಾರ್ಮಾ ಭವನದಲ್ಲಿ ಬೆಳಿಗ್ಗೆ 10 ರಿಂದ ಸಂಜೆ 5 ರ ವರೆಗೆ ಸದಸ್ಯತ್ವ ನೋಂದಣಿ ಮಾಡಿಸಬಹುದು ಎಂದು ತಿಳಿಸಿದ್ದಾರೆ.

ಸದಸ್ಯತ್ವ ಹಾಗೂ ಅಭಿಯಾನ ಕುರಿತ ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 9448130728 ಗೆ ಸಂಪರ್ಕಿಸಬಹುದು ಎಂದು ಹೇಳಿದ್ದಾರೆ.

## ಮನಸ್ಸಿನ ಶುದ್ಧಿಗೆ ಪ್ರವಚನ ಆಲಿಸಿ : ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.4:ನಿತ್ಯದ ಸಂಸಾರಿಕ ಜಂಜಾಟದಲ್ಲಿ ಕಲ್ಮಶಗೊಂಡಿರುವ ಮನಸ್ಸನ್ನು ಪರಿಶುದ್ಧಗೊಳಿಸುವ ಶಕ್ತಿ ಇರುವುದು ಪ್ರವಚನಕ್ಕೆ. ಹಾಗಾಗಿ, ಎಲ್ಲರೂ ಶರಣರ, ಮಹಾತ್ಮರ ಪ್ರವಚನ ನಿತ್ಯ ಆಲಿಸಬೇಕು ಎಂದು ಹಿರೇಮಠದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು. ಪಟ್ಟಣದ ಹಿರೇಮಠದಲ್ಲಿ ಪ್ರವಚನ ಹಾಗೂ ಸಾಮೂಹಿಕ ವಚನ ಪಾರಾಯಣ ಕರಪತ್ರ ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಪ್ರವಚನ ಮನಸ್ಸಿನಲ್ಲಿರುವ ದ್ವೇಷ, ಅಸೂಯೆ ಕಳೆಯುತ್ತದೆ. ಪ್ರೀತಿಯ ನೀರು ನಮ್ಮ ಹೃದಯದಲ್ಲಿ ಉಕ್ಕಿ ಬರುತ್ತದೆ. ಬಸವಣ್ಣನವರು ಪ್ರೀತಿಯಿಂದಲೇ ಕಲ್ಯಾಣ ರಾಜ್ಯ ಕಟ್ಟಿದರು. ಅದಕ್ಕಾಗಿ ಈ ವರ್ಷ ಶರಣರು ಕಂಡ ಬಸವಣ್ಣ ವಿಷಯದ ಕುರಿತು ಪ್ರವಚನ ನಡೆಯಲಿದೆ. ಸಾಮೂಹಿಕ ವಚನ ಪಾರಾಯಣದಿಂದ ನಮ್ಮ ಜೀವನ ಬಸವಾದಿ ಶರಣರು ಮೌಲ್ಯಗಳ ಮೇಲೆ ನಡೆಯುತ್ತದೆ. ಈ ಎರಡು ಕಾರ್ಯಕ್ರಮಗಳಲ್ಲಿ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಬೇಕು ಎಂದು ತಿಳಿಸಿದರು. ವಚನ ಜಾತ್ರೆ, ಚನ್ನಬಸವ ಪಟ್ಟದ್ದೇವರ ಸ್ಮರಣೋತ್ಸವ ನಿಮಿತ್ತ ಏ. 10 ರಿಂದ 21 ರವರೆಗೆ ಪ್ರತಿದಿನ ಸಂಜೆ 5 ಗಂಟೆಗೆ ಸಿದ್ದಬಸವ ದೇವರಿಂದ ಶರಣರು ಕಂಡ ಬಸವಣ್ಣ ಪ್ರವಚನ ನಡೆಯಲಿದೆ. ಏ.15 ರಿಂದ 21 ರವರೆಗೆ ಬೆಳಿಗ್ಗೆ 6 ಗಂಟೆಗೆ ಸಾಮೂಹಿಕ ವಚನ ಪಾರಾಯಣ ಜರುಗಲಿದೆ ಎಂದು ಹೇಳಿದರು. ಪ್ರವಚನ ಸೇವಾ ಸಮಿತಿ ಅಧ್ಯಕ್ಷೆ ಶಶಿಕಲಾ ಅಶೋಕ ವಾಲೆ, ಪಾರಾಯಣ ಸೇವಾ ಸಮಿತಿ ಅಧ್ಯಕ್ಷೆ ರೇಖಾ ಶಿವರಾಜ ಜ್ಯೋತೆಪ್ಪ, ಮಲ್ಲಮ್ಮ ನಾಗನಕೇರೆ, ಪಾರ್ವತಿ ಡೋಣಗಾಪೂರೆ, ಸುನೀತಾ ಮಮ್ಮಾ, ಸಂಗಮೇಶ ವಾಲೆ, ಕಸಾಪ ಅಧ್ಯಕ್ಷ ನಾಗಭೂಷಣ ಮಾಮಡಿ, ಮಲ್ಲಿಕಾರ್ಜುನ ಪಾವಡಶೆಟ್ಟಿ, ಜೈಹಿಂದ ಕುಂಬಾರ, ಸಿದ್ದಯ್ಯ ಕಾವಡಿಮಠ, ದೀಪಕ ಠಮಕೆ ಸೇರಿದಂತೆ ಇತರರು ಇದ್ದರು.

## ಏ. 16 ರಂದು ಉದ್ಯೋಗ ಮೇಳ : ನಿರುದ್ಯೋಗಿಗಳಿಗೆ ಉದ್ಯೋಗದ ಅವಕಾಶ ಸದುಪಯೋಗ ಪಡಿಸಿಕೊಳ್ಳಲು ಡಿ.ಸಿ. ಕರೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಏ 04: ಕಲಬುರಗಿ ಜಿಲ್ಲೆಯಲ್ಲಿ ಏಪ್ರೀಲ್ 16 ರಂದು ಉದ್ಯೋಗ ಮೇಳವನ್ನು ಆಯೋಜನೆ ಮಾಡುತ್ತಿದ್ದು, ಎಸ್.ಎಸ್.ಎಲ್.ಸಿ. ಪಿ.ಯು.ಸಿ ಐ.ಟಿ.ಐ. ಡಿಪ್ಲೋಮ, ಪದವಿ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಮತ್ತು ನಿರುದ್ಯೋಗಿ ಯುವಕರು ಈ ಉದ್ಯೋಗ ಮೇಳದಲ್ಲಿ ಪಾಲ್ಗೊಂಡು ಉದ್ಯೋಗ ಪಡೆದುಕೊಂಡು ಆರ್ಥಿಕವಾಗಿ ಸದೃಢರಾಗಬೇಕೆಂದು ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್ ಅವರು ಹೇಳಿದರು.

ಶುಕ್ರವಾರದಂದು ಪಿ.ಡಿ.ಎ. ಇಂಜಿನಯರಿಂಗ್ ಕಾಲೇಜಿನ ಸಭಾಂಗಣದಲ್ಲಿ ಕಲಬುರಗಿ ನಗರದ ಎಲ್ಲ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ಉದ್ಯೋಗ ಮೇಳದಲ್ಲಿ ಈಗಾಗಲೇ 5,083 ಅಭ್ಯರ್ಥಿಗಳು ಹಾಗೂ 190 ಸ್ಥಳೀಯ ಮತ್ತು ಎಂ.ಎನ್.ಸಿ ಕಂಪನಿಗಳು ಆನ್‌ಲೈನ್ ಮೂಲಕ ನೋಂದಣಿಯಾಗಿವೆ ಎಂದು ಜಿಲ್ಲಾಧಿಕಾರಿ ಮಾಹಿತಿಯನ್ನು ನೀಡಿದರು. ಏಪ್ರಿಲ್ 10 ರವರೆಗೆ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ನೋಂದಣಿ ಮಾಡಿಕೊಳ್ಳಬೇಕಾಗಿ ತಿಳಿಸಿದರು.

ಈ ಉದ್ಯೋಗ ಮೇಳದಲ್ಲಿ ಎಷ್ಟು ಜನ ಬಂದು ಹೋದರೆನ್ನುವದಕ್ಕಿಂತ ಈ ಭಾಗದ ಎಷ್ಟು ಜನರಿಗೆ ಉದ್ಯೋಗ ಲಭಿಸಿದೆ ಎಂಬುವುದು ಮುಖ್ಯವಾಗುತ್ತಿದೆ ಎಂದು ಜಿಲ್ಲಾಧಿಕಾರಿ ಹೇಳಿದರು.

ಕೈಗಾರಿಕೆ ಇಲಾಖೆಯ ಉಪನಿರ್ದೇಶಕ ಅಬ್ದುಲ್ ಅಜೀಮ್ ಮಾತನಾಡಿ, ಈ ಭಾಗದ ಇಬ್ಬರು ಸಚಿವರು ಮತ್ತು ಜಿಲ್ಲಾಡಳಿತ ಅಧಿಕಾರಿಗಳ ಸಹಕಾರದಿಂದ ಉದ್ಯೋಗ ಮೇಳ ಆಯೋಜನೆ ಮಾಡುತ್ತಿದ್ದು, ಸಂಪನ್ಮೂಲ ತರಬೇತಿದಾರರ ವ್ಯಕ್ತಿಗಳಿಂದ ಮಾರ್ಗದರ್ಶನ ಪಡೆದುಕೊಂಡು ಈ ಭಾಗದ ಹೆಚ್ಚಿನ ಯುವಕರು ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು.

ಬೆಂಗಳೂರು-ಹೈದ್ರಾಬಾದ ನಗರಗಳಿಗೆ ಉದ್ಯೋಗದ ಸಂದರ್ಶನಕ್ಕಾಗಿ ಹೋಗುವುದಕ್ಕಿಂತ ಕಲಬುರಗಿಯಲ್ಲಿ ನಡೆಯುವ ಉದ್ಯೋಗ ಮೇಳದಲ್ಲಿ ಪಾಲ್ಗೊಂಡು ಈ ಭಾಗದ ಹೆಚ್ಚಿನ ವಿದ್ಯಾರ್ಥಿಗಳು ಉದ್ಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿ ಎಕ್ಸೆಲ್ ಕಾರ್ಪ ಕಂಪನಿಯ ಆಧಿಕೇಶ್ವರ, ವಿದ್ಯಾರ್ಥಿಗಳಿಗೆ ಸೆಮಿನಾರ್ ನೀಡಿ ಯಾವುದೇ ಒಂದು ಕಾರ್ಪೋರೆಟ್ ಕಂಪನಿಯಲ್ಲಿ ಉದ್ಯೋಗವನ್ನು ಪಡೆಯಬೇಕಾದರೆ ಪ್ರತಿಯೊಬ್ಬ ವಿದ್ಯಾರ್ಥಿಯು ವೃತ್ತಿ ಕೌಶಲ್ಯಗಳು ಕಲಿತು ಕೊಂಡಿರಬೇಕು ಅಂದಾಗ ಮಾತ್ರ ಶಿಕ್ಷಣಕ್ಕೆ ತಕ್ಕಂತೆ ಉದ್ಯೋಗ ಪಡೆಯಲು ಸಾಧ್ಯವಿದೆ ಎಂದು ಹೇಳಿದರು.

ಜಿಲ್ಲಾ ಕೌಶಲ್ಯ ಅಭಿವೃದ್ಧಿ ಅಧಿಕಾರಿ ನಾಗುಬಾಯಿ ಸ್ವಾಗತಿಸಿದರು. ಪಿ.ಡಿ.ಎ. ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಸಿದ್ಧರಾಮ ಪಾಟೀಲ ವಂದಿಸಿದರು, ಕೌಶಲ್ಯ ಅಭಿವೃದ್ಧಿ ಇಲಾಖೆ ಕಿರಿಯ ತರಬೇತಿ ಅಧಿಕಾರಿ ಬಸನಗೌಡ ಪಾಟೀಲ ಕಾರ್ಯಕ್ರಮ ನಿರೂಪಸಿದರು. ಪುರಷ ಐ.ಟಿ.ಐ. ಕಾಲೇಜಿನ ಪ್ರಾಂಶುಪಾಲರಾದ ಮುರಳಿಧರ ರತ್ನಗಿರಿ, ಪಿ.ಡಿ.ಎ. ಇಂಜಿನಿಯರಿಂಗ್ ಕಾಲೇಜಿನ ಉಪಪ್ರಾಂಶುಪಾಲರಾದ ಎಸ್.ಭಾರತಿ, ಉಪನ್ಯಾಸಕ ನಾಗೇಶ ಸಾಲಿಮಠ, ಎಕ್ಸಲ್ ಕಂಪನಿಯ ಟೀಂ ಲೀಡರ್ ಅಶ್ವಥ, ಸೇರಿದಂತೆ ಎಲ್ಲ ಇಂಜಿನಿಯರಿಂಗ್ ಉಪನ್ಯಾಸಕರು ಮತ್ತು ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ವಿವಿಧ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ : ಸಿಇಓ ಲವೀಶ್ ಒರಡಿಯಾ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 04 –ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲೂಕಿನ ಚಪೆಟ್ಲಾ ಗ್ರಾಮ ಪಂಚಾಯಿತಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ಲವೀಶ್ ಒರಡಿಯಾ ಅವರು ಇಂದು ಭೇಟಿ ನೀಡಿ ಸಾರ್ವಜನಿಕರ ಸಮಸ್ಯೆಗಳ ಬಗ್ಗೆ ಸ್ಪಂದಿಸಿದರು.

ಅಂಗನವಾಡಿ ಕೋಸಿನ ಮನೆಗೆ ಭೇಟಿ ನೀಡಿ ಪರಿಶಿಲಿಸಿದರು. ಚೆಪೆಟ್ಲಾ ಬೆಟ್ಟದಲ್ಲಿ ನಡೆಯುತ್ತಿರುವ (ಟ್ರೆಂಚೆಸ್) ಕಂದಕ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ವೀಕ್ಷಿಸಿದರು. ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕೂಲಿಕಾರ ಸಮಸ್ಯೆ ಆಲಿಸಿದರು.

ಚಿನ್ನಕಾರ ಪಂಚಾಯತಿ ವ್ಯಾಪ್ತಿಯಲ್ಲಿರುವ ಧರ್ಮಾಪುರ ತಾಂಡಕ್ಕೆ ಭೇಟಿ ನೀಡಿ, ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಆಲಿಸಿದರು. ಬೋರ್ವೆಲ್ ಸಮಸ್ಯೆ ಪರಿಹರಿಸುವಂತೆ ಪಿಡಿಓ ಅವರಿಗೆ ತಿಳಿಸಿದರು. ನಂತರ ಚಿನ್ನಕಾರ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಗ್ರಂಥಾಲಯ, ಗ್ರಾಮ ಪಂಚಾಯಿತಿ ಹೊಸ ಕಟ್ಟಡ ನಿರ್ಮಾಣಕ್ಕೆ ಸ್ಥಳ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಜಿ.ಪಂ ಯೋಜನಾ ನಿರ್ದೇಶಕರಾದ ಶ್ರೀ ಸಿ.ಬಿ ದೇವರಮನಿ, ಗುರುಮಠಕಲ್ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಅಂಬ್ರೇಶ್ ಪಾಟೀಲ್, ತಾ.ಪಂ ಸಹಾಯಕ ಯೋಜನಾ ನಿರ್ದೇಶಕ ರಾಮಚಂದ್ರ ಬಸೂದೆ, ತಾಂತ್ರಿಕ ಸಂಯೋಜಕ ಮುಜಾಮಿಲ್, ಟಿಎಮ್ ಐಸಿ ತಮ್ಮಾರೆಡ್ಡಿ, ಸಂಬಂಧಿಸಿದ ಪಂಚಾಯಿತಿ ಪಿಡಿಓ, ಬಿಎಫ್ ಟಿಗಳು ಹಾಗೂ ಗ್ರಾ.ಪಂ ಸದಸ್ಯರು ಮತ್ತು ಸಿಬ್ಬಂದಿವರ್ಗ ಉಪಸ್ಥಿತರಿದ್ದರು.

## ಉದ್ಯೋಗ ಖಾತ್ರಿ ಯೋಜನೆಯ ಕೂಲಿ ದರ 370ಕ್ಕೆ ಹೆಚ್ಚಳ

# ಸಮಾನ ಕೆಲಸಕ್ಕೆ ಸಮಾನ ಕೂಲಿ ಮಹಿಳಾ ಮತ್ತು ಪುರುಷರಿಗೆ ಸಮಾನ ಕೂಲಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕನೂರ ತಾಲೂಕಿನ ತಳಕಲ್ ಗ್ರಾಮ ಪಂಚಾಯತಿ ವ್ಯಾಪ್ತಿಯ ಅಡವಿಹಳ್ಳಿ ಕೆರೆ ಕಾಮಗಾರಿ ಸ್ಥಳದಲ್ಲಿ ರೋಜಗಾರ ದಿನ ಆಚರಿಸಿ ಮಾನ್ಯ ಸಹಾಯಕ ನಿರ್ದೇಶಕರು ಗ್ರಾಮೀಣ ಉದ್ಯೋಗ ಶರಣಪ್ಪ ಕೆಳಗಿನಮನಿ ಮಾತನಾಡಿ ನರೇಗಾ ಯೋಜನೆಯಡಿ ಸದರಿ ಆರ್ಥಿಕ ವರ್ಷದಲ್ಲಿ ರೂ.21 ಹೆಚ್ಚಿಸಿ ರೂ. 370 ಆಗಿದೆ ಇದರ ಸದುಪಯೋಗವನ್ನು ಪಡೆಸುಕೊಳ್ಳಬೇಕು. ನಿರಂತರ ಕೆಲಸ ಮಾಡಲು ಇದೇ ಬೇಸಿಗೆಯಲ್ಲಿ 90 ದಿನಗಳ ವರೆಗೆ ಕೆಲಸ ಮಾಡಿದಲ್ಲಿ ನಮೂನೆ –6 ಸಲ್ಲಿಸಿ ಕೆಲಸ ಪಡೆಯಲು ಸಲಹೆ ನೀಡಿದರು. ಅದರಂತೆ ಅಳತೆ ಪ್ರಕಾರ ಕೆಲಸ ಮಾಡಿದಲ್ಲಿ 100 ದಿನಕ್ಕೆ ರೂ. 37000 ಸಿಗುತ್ತದೆ.

ಕೂಲಿಕಾರರು ಸುರಕ್ಷತೆ ದೃಷ್ಟಿಯಿಂದ ಸರ್ಕಾರದ ವಿಮಾ ಸೌಲಭ್ಯವನ್ನು ಹೊಂದಬೇಕು ಎಲ್ಲರೂ ಕಡ್ಡಾಯವಾಗಿ ಕಓಖಃಜ, ಕಓಎಎಃಜ.ಂಖಿಂಐಕಜಟಣುಂಟ, ಪ್ರಧಾನ ಮಂತ್ರಿ ಶ್ರಮ ಯೋಗಿ ಮಾನ್ ಧನ್ ಯೋಜನೆಯಡಿ ಪೆನ್ ಷನ್ ಯೋಜನೆಗೆ ನೊಂದಣಿ ಯಾಗಬೇಕು, ಬಿಸಿಲು ಹೆಚ್ಚಾಗಿರುವುದರಿಂದ ಎಲ್ಲರೂ ನೆರಳಿಗಾಗಿ ಟವಲ್ ಹಾಗೂ ವಸ್ತ್ರಗಳನ್ನು ತಲೆಗೆ ಹಾಕಬೇಕು, ನೀರು ಹೆಚ್ಚಾಗಿ ಕುಡಿಯಬೇಕು ಎಂದರು.

ತಾಂತ್ರಿಕ ಸಂಯೋಜಕ ಸುರೇಶ್ ದೇಸಾಯಿ ರವರು ಮಾತನಾಡಿ ಅಳತೆಯ ಪ್ರಕಾರ ಒಬ್ಬ ಕೂಲಿಕಾರರು 1.03 ಕ್ಯೂಬಿಕ್ ಮೀಟರ್ ಕಡಿದರೆ ಪೂರ್ತಿ 370 ಕೂಲಿ ಸಿಗುತ್ತದೆ ಎಂದರು.

ಸ್ಥಳದಲ್ಲಿ ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ ಕಂಪ್ಯೂಟರ್ ಅಪರೇಟರ್ ಪ್ರದೀಪ್ ಜನಾದ್ರಿ ಕಾಯಕ ಬಂಧುಗಳು 350 ಕ್ಕೂ ಹೆಚ್ಚು ಕೂಲಿಕಾರರು ಹಾಜರಿದ್ದರು.

# ಆರನೇ ದಿನವೂ ಎಸ್ಸೆಸ್ಸೆಲ್ಸಿ ಪರೀಕ್ಷೆ ಸುಗಮ; 1,232 ವಿದ್ಯಾರ್ಥಿಗಳು ಗೈರು

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರೀಲ್.04– ರಾಯಚೂರು ಜಿಲ್ಲೆಯಲ್ಲಿ ಏಪ್ರೀಲ್ 04ರ ಶುಕ್ರವಾರ ದಂದು ಜಿಲ್ಲೆಯ 97 ಕೇಂದ್ರಗಳಲ್ಲಿ ಹಿಂದಿ ವಿಷಯದ ಪರೀಕ್ಷೆ ಸುಗಮವಾಗಿ ನಡೆಯಿತು.

ದೇವದುರ್ಗ, ಲಿಂಗಸುಗೂರ, ಮಾನ್ವಿ, ರಾಯಚೂರು ಹಾಗೂ ಸಿಂಧನೂರು ಸೇರಿ ಜಿಲ್ಲೆಯಲ್ಲಿ ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದ ಒಟ್ಟು 31,471 ವಿದ್ಯಾರ್ಥಿಗಳ ಪೈಕಿ 30,239 ವಿದ್ಯಾರ್ಥಿಗಳು ಹಾಜರಾಗಿದ್ದು, 1,232 ವಿದ್ಯಾರ್ಥಿಗಳು ಗೈರಾದರು. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತವೆಂದು ಘೋಷಿಸಲಾಗಿತ್ತು.

ಜಿಲ್ಲೆಯ ದೇವದುರ್ಗ ತಾಲೂಕಿನಲ್ಲಿ ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದ 4,364 ವಿದ್ಯಾರ್ಥಿಗಳ ಪೈಕಿ 4,250 ವಿದ್ಯಾರ್ಥಿಗಳು ಹಾಜರಾಗಿದ್ದು, 114 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಲಿಂಗಸೂಗೂರು ತಾಲೂಕಿನಲ್ಲಿ ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದ 6,530 ವಿದ್ಯಾರ್ಥಿಗಳ ಪೈಕಿ 6,314 ವಿದ್ಯಾರ್ಥಿಗಳು ಹಾಜರಾಗಿದ್ದು, 216 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಮಾನ್ವಿ ತಾಲೂಕಿನಲ್ಲಿ ಪರೀ–ಕ್ಷೆಗೆ ನೋಂದಾಯಿಸಿಕೊಂಡಿದ್ದ 5,826 ವಿದ್ಯಾರ್ಥಿಗಳ ಪೈಕಿ 5,511 ವಿದ್ಯಾರ್ಥಿಗಳು ಹಾಜರಾಗಿದ್ದು, 315 ವಿದ್ಯಾರ್ಥಿಗಳು ಗೈರಾಗಿದ್ದಾರೆ. ರಾಯಚೂರು ತಾಲೂಕಿನಲ್ಲಿ ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದ 9,077 ವಿದ್ಯಾರ್ಥಿಗಳ ಪೈಕಿ 8,690 ವಿದ್ಯಾರ್ಥಿಗಳು ಹಾಜರಾಗಿದ್ದು, 387 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಸಿಂಧನೂರು ತಾಲೂಕಿನಲ್ಲಿ ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದ 5,674 ವಿದ್ಯಾರ್ಥಿಗಳ ಪೈಕಿ 5,474 ವಿದ್ಯಾರ್ಥಿಗಳು ಹಾಜರಾಗಿದ್ದು, 200 ವಿದ್ಯಾರ್ಥಿಗಳು ಗೈರಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಬಿ.ಬಡಿಗೇರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ.ಬಾಬು ಜಗಜೀವನರಾಮ್ ಅವರ ಜಯಂತಿಯಲ್ಲಿ ಭಾಗವಹಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರೀಲ್.04– ಏಪ್ರೀಲ್ 5ರಂದು ಭಾರತದ ಮಾಜಿ ಉಪ ಪ್ರಧಾನಿ, ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಅವರ 118ನೇ ಜನ್ಮ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಜಿಲ್ಲೆಯ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು, ಸಮಾಜದ ಮುಖಂಡರು, ವಿವಿಧ ಸಂಘ–ಸಂಸ್ಥೆಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಂದು ಬೆಳಿಗ್ಗೆ 9 ಗಂಟೆಗೆ ಡಾ. ಬಾಬು ಜಗಜೀವನ ರಾಮ್ ವೃತ್ತದಲ್ಲಿರುವ ಡಾ.ಬಾಬು ಜಗಜೀವನ ರಾಮ್ ಅವರ ಪುತ್ಥಳಿಗೆ ಪೂಜೆ ಹಾಗೂ ಮಾಲಾರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಾಗಿದೆ. ಬೆಳಿಗ್ಗೆ 11 ಗಂಟೆಗೆ ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮದಲ್ಲಿ ಮೈಸೂರು ವಿಶ್ವವಿದ್ಯಾಲಯದ ಡಾ.ಬಾಬು ಜಗಜೀವನ ರಾಮ್ ಅಧ್ಯಯನ ಕೇಂದ್ರದ ಸಂಶೋಧನಾ ಅಧಿಕಾರಿಗಳಾದ ಡಾ.ಶ್ರೀನಿವಾಸ ಮೂರ್ತಿ ಎಂ. ಅವರು ಡಾ.ಬಾಬು ಜಗಜೀವನ ರಾಮ್ ಅವರ ಕುರಿತು ಉಪನ್ಯಾಸ ನೀಡಲಿದ್ದು, ಜಿಲ್ಲೆಯ ಎಲ್ಲಾ ಅಧಿಕಾರಿ, ಸಿಬ್ಬಂದಿ ವರ್ಗದವರು, ಸಮಾಜದ ಮುಖಂಡರು, ವಿವಿಧ ಸಂಘ–ಸಂಸ್ಥೆಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನ ಸಲ್ಲಿಸಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 04, 2024 ಮತ್ತು 2025ನೇ ಸಾಲಿನ ಸರ್ಕಾರಿ ಅಧಿಕಾರಿ, ನೌಕರರಿಗೆ ರಾಜ್ಯ ಸರ್ಕಾರದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನಗಳನ್ನು ಸಲ್ಲಿಸಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರು ತಿಳಿಸಿದ್ದಾರೆ.

ರಾಜ್ಯ ಸರ್ಕಾರಿ ನೌಕರರಿಗೆ ಸರ್ವೋತ್ತಮ ಸೇವಾ ಪ್ರಶಸ್ತಿ ನೀಡುವ ಯೋಜನೆಯನ್ನು ಸರ್ಕಾರದ ಆದೇಶದ ಅನ್ವಯ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನ ಸಲ್ಲಿಸುವ ನೌಕರರು ಕನಿಷ್ಠ 3 ವರ್ಷ ಸೇವೆ ಪೂರೈಸಿರಬೇಕು, (ಪರೀಕ್ಷಾರ್ಥ ಅವಧಿ ಘೋಷಣೆ ಸಹಿತ), ಉತ್ತಮ ಸೇವೆ ಸಲ್ಲಿಸಿರುವ ಪತ್ರಾಂಕಿತ ಎ.ಬಿ ಮತ್ತು ಸಿ ವೃಂದದವರು ಹಾಗೂ ಗ್ರೂಪ್ ಡಿ ನೌಕರರು ಯಾವುದೇ ಕ್ರಿಮಿನಲ್ ಪ್ರಕರಣ, ಲೋಕಾಯುಕ್ತ ಪ್ರಕರಣ, ಇಲಾಖಾ ವಿಚಾರಣೆ ಹಾಗೂ ಇತರೆ ಯಾವುದೇ ಲೋಪವಿರದಂತಹ ಅಧಿಕಾರಿ, ಸಿಬ್ಬಂದಿಗಳು, (ಒಡಾಳಿತ ಇಲಾಖೆ ಮತ್ತು ಅರಣ್ಯ ಪರಿಸರ ಜೀವಶಾಸ್ತ್ರ ಇಲಾಖೆಯ ಸಮವಸ್ತ್ರ, ಅಧಿಕಾರಿ, ಸಿಬ್ಬಂದಿಗಳನ್ನು ಹೊರತುಪಡಿಸಿ ಹಾಗೂ ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿಯನ್ನು ಹೊರತುಪಡಿಸಿ) ನಾಮ ನಿರ್ದೇಶನವನ್ನು ಸಲ್ಲಿಸಲು ಬಯಸುವವರು ಜಾಲತಾಣ https://dparar.karnataka.gov.in ಅಥವಾ ವೆಬ್‌ಸೈಟ್ sarvothamaawards.karnataka. gov.in ನಲ್ಲಿ ಅರ್ಜಿ ಸಲ್ಲಿಸಬೇಕು.

ಸರ್ಕಾರದ ಸುತ್ತೋಲೆಯ ನಿರ್ದೇಶನದಂತೆ, 2024ನೇ ಸಾಲಿನ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನ ಸಲ್ಲಿಸಲು 2023ನೇ ಕ್ಯಾಲೆಂಡರ್ ವರ್ಷದಲ್ಲಿ ಮಾಡಿರುವ ಉಪಕ್ರಮ, ಸಾಧನೆಯನ್ನು ಪರಿಗಣಿಸಲಾಗುವುದು. ಹಾಗೆಯೇ, 2025ನೇ ಸಾಲಿನ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನ ಸಲ್ಲಿಸಲು 2024ನೇ ಕ್ಯಾಲೆಂಡರ್ ವರ್ಷದಲ್ಲಿ ಮಾಡಿರುವ ಉಪ ಕ್ರಮ, ಸಾಧನೆಯನ್ನು ಪರಿಗಣಿಸಲಾಗುವುದು.

2024 ಹಾಗೂ 2025ನೇ ಸಾಲಿನ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಆನ್‌ಲೈನ್‌ನಲ್ಲಿ ನಾಮ ನಿರ್ದೇಶನವನ್ನು ಸಲ್ಲಿಸಲು 2025ರ ಏಪ್ರಿಲ್ 14ರ ಒಳಗೆ ಸಲ್ಲಿಸಬೇಕು, ನಂತರ ಯಾವುದೇ ಕಾರಣಕ್ಕೂ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ ಎಂದು ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ.ವಿನಯಾ ಹೂಗಾರ ತಹಶೀಲ್ದಾರರಾಗಿ ಅಧಿಕಾರ ಸ್ವೀಕಾರ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ: ತಾಲ್ಲೂಕಿನ ನೂತನ ದಂಡಾಧಿಕಾರಿಗಳಾಗಿ ಡಾ.ವಿನಯಾ ಅರವಿಂದ ಹೂಗಾರ ಗುರುವಾರ ಅಧಿಕಾರ ಸ್ವೀಕರಿಸಿದರು. ಈ ಹಿಂದೆ ತಹಶೀಲ್ದಾರರಾಗಿ ಸೇವೆ ಸಲ್ಲಿಸುತ್ತಿದ್ದ ಕೀರ್ತಿ ಚಾಲಕ ಅವರು ಅಧಿಕಾರ ಹಸ್ತಾಂತರಿಸಿದರು.

ಕೆಎಎಸ್ 2020ರ ಬ್ಯಾಚಿನ ಅಧಿಕಾರಿಯಾಗಿರುವ ಡಾ.ವಿನಯಾ ಹೂಗಾರ ಅವರು ವೈದ್ಯಕೀಯ ಪದವಿಧರೆಯಾಗಿದ್ದು ತಾಳಿಕೋಟಿ ತಾಲ್ಲೂಕಿನ ಹಿರೂರ ಗ್ರಾಮದವರಾಗಿದ್ದಾರೆ.

# ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 04–ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು ಯಾದಗಿರಿ ವಿಧಾನಸಭಾ ಶಾಸಕರಾದ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಅವರ ಅಧ್ಯಕ್ಷತೆಯಲ್ಲಿ 2025ರ ಏಪ್ರಿಲ್ 8ರ ಮಂಗಳವಾರ ರಂದು ಬೆಳಿಗ್ಗೆ 11 ಗಂಟೆಗೆ ತಾಲೂಕ ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ ಎಂದು ಯಾದಗಿರಿ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಅವರು ತಿಳಿಸಿದ್ದಾರೆ.

**ವಿಷಯಸೂಚಿ** : 2025ರ ಮಾರ್ಚ್ ಅಂತ್ಯದವರೆಗೆ ಪ್ರಗತಿ ಪರಿಶೀಲನೆ. ಅಧ್ಯಕ್ಷರ ಅನುಮತಿ ಮೇರೆಗೆ ಇತರೆ ವಿಷಯಗಳ ಕುರಿತು ಚರ್ಚೆ ನಡೆಯಲಿದೆ. 2025ರ ಮಾರ್ಚ್ ಅಂತ್ಯದವರೆಗಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ವರದಿಯನ್ನು (ಕಡ್ಡಾಯವಾಗಿ ಎ4 ಸೈಜ್ ಲ್ಯಾಂಡ್ ಸ್ಕೇಪ್) ಐದು ಪ್ರತಿಗಳಲ್ಲಿ 2025ರ ಏಪ್ರಿಲ್ 7ರ ಮಧ್ಯಾಹ್ನ 2 ಗಂಟೆಯ ಒಳಗೆ ಸಲ್ಲಿಸಬೇಕು,

ಈ ಸಭೆಗೆ ನಿಗಧಿಪಡಿಸಿದ ಸಮಯಕ್ಕೆ ಅಧಿಕಾರಿಗಳು ಪ್ರಗತಿ ವರದಿಯೊಂದಿಗೆ ಪ್ರತಿನಿಧಿಯನ್ನು ಕಳುಹಿಸದೇ ಖುದ್ದಾಗಿ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆದನಗೌಡ ಬಿಜ್ಜಳ ನಿಧನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಷ್ಟಗಿ ತಾಲೂಕಿನ ದೋಟಿಹಾಳ ಗ್ರಾಮದ ಹಿರಿಯ ಜೀವಿಗಳಾದ ಆದನಗೌಡ ಬಿಜ್ಜಳ ದಿನಾಂಕ 04/04/2025ರ ಶುಕ್ರವಾರ ಬೆಳಗ್ಗೆ 3:00 ಗಂಟೆಗೆ ತಮ್ಮ ಸ್ವಗ್ರಹದಲ್ಲಿ ನಿಧನ ಹೊಂದಿರುತ್ತಾರೆ. ಮೃತರ ಅಂತ್ಯಕ್ರಿಯೆಯನ್ನು ಸ್ವಗ್ರಾಮವಾದ ದೋಟಿಹಾಳದಲ್ಲಿ 04/04/2025ರ ಶುಕ್ರವಾರ ಮಧ್ಯಾಹ್ನ 4:00ಗೆ ನೆರವೇರಿಸಲಾಯಿತು.

# ಅಭಿಮಾನ ಯಾತ್ರೆ ಯಶಸ್ವಿಗೆ ಸಹಕರಿಸಿ: ಬಸನಗೌಡ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಶಾಸಕ ಬಸನಗೌಡ ಯತ್ನಾಳರ ಉಚ್ಚಾಟನೆ ವಿರೋಧಿಸಿ ಮತಕ್ಷೇತ್ರದಲ್ಲಿ ನಡೆಯುತ್ತಿರುವ ಪ್ರತಿಭಟನೆಗಳಲ್ಲಿ ಕೆಲವರು ದುರುದ್ದೇಶದಿಂದ ಮಾಜಿ ಶಾಸಕ ನಡಹಳ್ಳಿ ಅವರ ವ್ಯಕ್ತಿತ್ವ ತೇಜೋವಧೆಗೆ ಇಳಿದಿದ್ದು ಇದನ್ನು ನಡಹಳ್ಳಿ ಅಭಿಮಾನಿ ಬಳಗ ಉಗ್ರವಾಗಿ ಖಂಡಿಸುತ್ತದೆ, ಇದರ ವಿರುದ್ಧ ಎಪ್ರಿಲ್ 7 ರಂದು ಪಟ್ಟಣದಲ್ಲಿ ನಡಹಳ್ಳಿ ಅಭಿಮಾನಿ ಬಳಗದ ವತಿಯಿಂದ ಅಭಿಮಾನ ಯಾತ್ರೆ ನಡೆಯಲಿದೆ ಇದರ ಯಶಸ್ವಿಗೆ ಸರ್ವ ಸಮಾಜದ ಬಾಂಧವರು ಸಹಕರಿಸಬೇಕು ಎಂದು ಜಿಪಂ ಮಾಜಿ ಸದಸ್ಯ ಬಸನಗೌಡ ವಣಕಿಹಾಳ ಮನವಿ ಮಾಡಿಕೊಂಡರು. ಗುರುವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ ನಡಹಳ್ಳಿ ಅವರು ಸರ್ವ ಸಮಾಜವನ್ನು ಪ್ರೀತಿಸುವ ಗೌರವಿಸುವ ವ್ಯಕ್ತಿಗಳಾಗಿದ್ದಾರೆ ಅವರೆಂದೂ ಜಾತಿ ರಾಜಕಾರಣ ಮಾಡಿದವರಲ್ಲ, ಜನರ ಸೇವೆಯ ಮುಖಾಂತರ ರಾಜಕೀಯಕ್ಕೆ ಬಂದವರು ಆದರೆ ಅವರಿಗೆ ಆಗದ ಕೆಲವರು ಉದ್ದೇಶಪೂರ್ವಕವಾಗಿ ಅವರ ಹೇಳಿಕೆಯನ್ನು ನೆಪವಾಗಿಟ್ಟುಕೊಂಡು ಅವರ ತೇಜೋವಧೆಗೆ ಕೀಳು ಮಟ್ಟದ ಕೆಲಸಗಳಿಗೆ ಇಳಿದಿದ್ದಾರೆ, ಹತ್ತು ವರ್ಷಗಳ ಹಿಂದಿನ ಕೆಲವು ವಿಡಿಯೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿದ್ದಾರೆ ಹೀಗೆ ಮಾಡುವುದರಿಂದ ನಡಹಳ್ಳಿ ಅವರ ವ್ಯಕ್ತಿತ್ವ ಹಾಳಾಗುತ್ತದೆ ಎಂದು ತಿಳಿದಿದ್ದರೆ ಅದು ಅವರ ಭ್ರಮೆಯಾಗಿದೆ, ನಡಹಳ್ಳಿ ಜನರ ಹೃದಯಗಳಲ್ಲಿ ಇರುವ ವ್ಯಕ್ತಿ ಅವರು ಸೋತಿರಬಹುದು ಅದು ಮತದಾರರ ತೀರ್ಮಾನ ಆದರೆ ಜನ ಅವರ ಸೇವೆಯನ್ನು ಎಂದೂ ಮರೆಯುವುದಿಲ್ಲ, ರೆಡ್ಡಿ ಹಾಗೂ ಪಂಚಮಸಾಲಿ ಸಮಾಜದ ನಡುವೆ ಅನೂನ್ಯವಾದ ಸಂಬಂಧಗಳಿವೆ ನಾವೆಲ್ಲಿದ್ದರೂ ಒಬ್ಬರಿಗೊಬ್ಬರು ರಾಜಕೀಯದಲ್ಲಿ ಬೆಂಬಲಿಸುತ್ತಾ ಬಂದಿದ್ದೇವೆ ನಮ್ಮನ್ನು ಬೇರ್ಪಡಿಸಲು ಯಾರಿಂದಲೂ ಸಾಧ್ಯವಿಲ್ಲ, ನಡಹಳ್ಳಿ ಅವರು ಯತ್ನಾಳರ ಕುರಿತು ಮಾತನಾಡಿದ್ದು ರಾಜಕೀಯವಾಗಿ ಅಷ್ಟೇ ಇದನ್ನು ಜಾತೀಕರಣ ಗೊಳಿಸುವ ಅಗತ್ಯ ಇಲ್ಲ. ರಾಜಕೀಯದಲ್ಲಿ ಆರೋಪ ಪ್ರತ್ಯಾರೋಪ ಹೇಳಿಕೆಗಳು ಸಾಮಾನ್ಯ ಆದರೆ ಅವು ವೈಯಕ್ತಿಕ ತೇಜೋವಧೆ ಮಟ್ಟಿಗೆ ಹೋಗಬಾರದು ಎಂಬುದು ನಮ್ಮ ಕಳಕಳಿಯಾಗಿದೆ. ನಡಹಳ್ಳಿ ಅವರಿಗೆ ರಾಜಕಾರಣಕ್ಕಿಂತಲೂ ಹೆಚ್ಚು ಎಲ್ಲ ಸಮಾಜ ಜನರ ಪ್ರೀತಿ ವಿಶ್ವಾಸ ಮುಖ್ಯವಾಗಿದೆ ಅದನ್ನು ಅವರೆಂದೂ ಕಳೆದುಕೊಳ್ಳಲು ಬಯಸುವುದಿಲ್ಲ ಎಂದ ಅವರು ಏಪ್ರಿಲ್ 7 ರಂದು ಪಟ್ಟಣದಲ್ಲಿ ನಡೆಯಲಿರುವ ಎ. ಎಸ್. ಪಾಟೀಲ ನಡಹಳ್ಳಿ ಅಭಿಮಾನ ಯಾತ್ರೆಯಲ್ಲಿ ಸರ್ವ ಸಮಾಜದವರ ಅಭಿಮಾನಿಗಳು ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೆ ಸಹಕರಿಸಬೇಕೆಂದು ಮತ್ತೊಮ್ಮೆ ಕೇಳಿಕೊಳ್ಳುತ್ತೇನೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ಮಲ್ಲನಗೌಡ ಪೊಲೀಸ ಪಾಟೀಲ, ರಾಜುಗೌಡ ಕೋಳೂರ( ಮಾಜಿ ಟಿಪಿ), ಮಲ್ಲಯ್ಯ ಸಾಲಿಮಠ, ಗುಂಡಕನಾಳ ರಾಜುಗೌಡ, ವಿಶ್ವನಾಥ ರೆಡ್ಡಿ ಪಾಟೀಲ, ಶಂಕರಗೌಡ ದೇಸಾಯಿ, ಜಿಪಂ ಮಾಜಿ ಸದಸ್ಯ ಸಾಹೇಬಗೌಡ ಪಾಟೀಲ, ಸಿದ್ದನಗೌಡ ಲಕ್ಕುಂಡಿ, ಮುತ್ತು ಜಹಗೀರದಾರ, ಸುರೇಶಕುಮಾರ ಇಂಗಳಗಿ, ಗೌಡಪ್ಪಗೌಡ ಮಾಳಿ, ಬಸನಗೌಡ ನೀರಲಗಿ, ಸಾಹೇಬಗೌಡ ನಡಹಳ್ಳಿ, ಮಂಜು ಮೈಲೇಶ್ವರ ಇದ್ದರು.

# ಬೇಸಿಗೆ ನಿಮಿತ್ಯ ಕುಡಿಯುವ ನೀರು ಮತ್ತು ಮೇವಿನ ಲಭ್ಯತೆ ಕುರಿತು ತಹಶೀಲ್ದಾರ ಅಧ್ಯಕ್ಷತೆಯಲ್ಲಿ ಜರುಗಿದ ತಾಲೂಕು ಮಟ್ಟದ ಸಭೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಬೇಸಿಗೆ ಪ್ರಾರಂಭವಾಗಿರುವದರಿಂದ ಗ್ರಾಮೀಣ ಭಾಗ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರು ಮತ್ತು ಮೇವಿನ ಲಭ್ಯತೆ ಕುರಿತು ದಿನಾಂಕ:04–04–2025ರಂದು ರಂದು ತಾಲೂಕ ಪಂಚಾಯತಿ ಕೊಪ್ಪಳದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಹಾಗು ಕಾರ್ಯನಿರ್ವಾಹಕ ಅಧಿಕಾರಿಗಳ ಉಪಸ್ಥಿತಿಯಲ್ಲಿ ಸಭೆ ಜರುಗಿತು.

ತಹಶೀಲ್ದಾರರಾದ ವಿಠ್ಠಲ್ ಚೌಗಲಾ ಸಭೆಯನ್ನು ಉದ್ದೇಶಿಸಿ ಮಾತನಾಡಿ ಬೇಸಿಗೆ ಪ್ರಾರಂಭವಾಗಿರುವುದರಿಂದ ಕುಡಿಯುವ ನೀರಿನ ಕೊರತೆ ಉಂಟಾಗುವ ಸಂಭವವಿದ್ದು, ಗ್ರಾಮೀಣ ಮತ್ತು ನಗರಕ್ಕೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಗತ್ಯ ಮುನ್ನಚ್ಚೇರಿಕೆ ಕ್ರಮ ಕೈಗೊಳ್ಳಲು ಸೂಚಿಸಿದರು.

ನಾನ್ ಪೋರ್ಟೆಬಲ್ ಬಂದ ನೀರಿನ ಮೂಲಗಳಿಂದ ಕುಡಿಯುವ ನೀರು ಸರಬರಾಜು ಮಾಡಬಾರದು ಮತ್ತು ಜನರಿಗೆ ಕುಡಿಯಲು ಬಳಸಬಾರದೆಂದು ಜಾಗೃತಿ ಮೂಡಿಸಲು ಸೂಚಿಸಿದರು. ಪ್ರತಿ ವಾರ ಕಡ್ಡಾಯವಾಗಿ ಗ್ರಾಮ ಪಂಚಾಯತಿ ಮಟ್ಟದ ಕುಡಿಯುವ ನೀರಿನ ಮತ್ತು ಮೇವಿನ ಟಾಸ್ಕ್ ಫೋರ್ಸ್ ಸಭೆ ಜರುಗಿಸಿ ಅದರ ಪ್ರತಿಯನ್ನು ತಾಲೂಕ ಪಂಚಾಯತಿಗೆ ಸಲ್ಲಿಸಲು ಸೂಚಿಸಿದರು. ಎಲ್ಲಾ ಅಧಿಕಾರಿಗಳು ಸಮನ್ವಯ ಸಾಧಿಸಿ ಕುಡಿಯುವ ನೀರಿನ ಅಭಾವ ಬರದಂತೆ ಕ್ರಮವಹಿಸಲು ನಿರ್ದೇಶನ ನೀಡಿದರು. ಇಂದ್ರನಗರದಲ್ಲಿ ಹೊಸದಾಗಿ ಕಟ್ಟಿರುವ ಔಊಖಿಗೆ ತ್ವರಿತವಾಗಿ ಪೈಪಲೈನ್ ಸಂಪರ್ಕ ಕೈಗೊಳಲು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಸೂಚಿಸಿದರು.

ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ಮಾತನಾಡಿ ನೆಲೋಗಿಪುರ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಮೂಲಕ ತಾಲೂಕಿನ ಅಳವಂಡಿ, ಬೋಚನಹಳ್ಳಿ, ಕವಲೂರು, ಹಟ್ಟಿ 4 ಗ್ರಾಮ ಪಂಚಾಯತಿಗಳ 14 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದ್ದು, ಮುಂದಿನ ಒಂದು ವಾರದ ವರೆಗೆ ನದಿಯಲ್ಲಿರುವ ನೀರಿನ ಮೂಲಕ ಸರಬರಾಜು ಮಾಡಬಹುದಾಗಿದ್ದು ಮತ್ತು ಮುಂದಿನ ವಾರದಿಂದ ಗ್ರಾಮ ಪಂಚಾಯತಿಗಳಿಗೆ ನೀರಿನ ಅಭಾವವಾಗಬಹುದು.

ಈ 4 ಗ್ರಾಮ ಪಂಚಾಯತಿಯವರು ಸರಕಾರಿ ಬೋರೆವೆಲ್ ಗಳನ್ನು ಪರಿಶೀಲಿಸಿ ಸನ್ನದ್ದು ಮಾಡಿಕೊಳ್ಳಲು ಮತ್ತು ಮುನ್ನೆಚ್ಚರಿಕೆಯಾಗಿ ಖಾಸಗಿ ಬೋರೆವೆಲ್ ಗುರುತಿಸಿ ಮಾಲೀಕರಿಂದ ಒಪ್ಪಂದ ಮಾಡಿಕೊಳ್ಳಲು ಕಾರ್ಯನಿರ್ವಾಹಕ ಅಧಿಕಾರಿಗಳು ಸೂಚಿಸಿದರು.

ಸಭೆಯಲ್ಲಿ ನಗರಸಭೆಯ ಅಧಿಕಾರಿಗಳು, ಭಾಗ್ಯನಗರ ಪಟ್ಟಣ ಪಂಚಾಯತಿಯ ಅಧಿಕಾರಿಗಳು, ತಾಲೂಕ ಮಟ್ಟದ ಅಧಿಕಾರಿಗಳು, ಉಪತಹಶೀಲ್ದಾರರು, ಕಂದಾಯ ನಿರಿಕ್ಷಕರು, ಪಂಚಾಯತ ಅಭಿವೃದ್ದಿ ಅಧಿಕಾರಿಗಳು, ಗ್ರಾಮ ಆಡಳಿತಾಧಿಕಾರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಸಭೆಯಲ್ಲಿ ಹಾಜರಿದ್ದರು.

# ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.04–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ,ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ಕಾರ್ಯಕ್ರಮಗಳನ್ನು ಏ.05 ಮತ್ತು 06 ರಂದು ನಗರದ ಜಿಲ್ಲಾ ಕ್ರೀಡಾಂಗಣ ಮೈದಾನದಲ್ಲಿ ಆಯೋಜಿಸಲಾಗಿದೆ.

ಏ.05 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ಕಾರ್ಯಕ್ರಮಗಳ ಉದ್ಘಾಟನೆ ನಡೆಯಲಿದೆ.

ವಸತಿ,ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಸಂಸದರಾದ ಈ.ತುಕಾರಾಂ ಅವರು ಕ್ರೀಡಾ ಧ್ವಜರೋಹಣ ನೆರವೇರಿಸುವರು.

ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್ ಅವರು ಕ್ರೀಡಾ ಜ್ಯೋತಿ ಸ್ವೀಕಾರ ಮಾಡುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಪ್ರತಿಜ್ಞಾ ವಿಧಿ ಭೋದಿಸುವರು.

ರಾಜ್ಯ ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷರು ಹಾಗೂ ಜಿಲ್ಲಾಧ್ಯಕ್ಷರಾದ ಎಂ.ಎ.ಆಸೀಫ್ ಅವರು ಪ್ರಾಸ್ತಾವಿಕವಾಗಿ ಮಾತನಾಡುವರು.

ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ್,ರಾಜ್ಯಸಭೆ ಸಂಸದರಾದ ಡಾ.ಸೈಯದ್ ನಾಸೀರ್ ಹುಸೇನ್,ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ,ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್,ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್. ಆಂಜನೇಯಲು ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ,ಬಳ್ಳಾರಿ ವಲಯ ಪೊಲೀಸ್ ಮಹಾನಿರೀಕ್ಷಕರಾದ ಬಿ.ಎಸ್ ಲೋಕೇಶ್ ಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್,ಬಳ್ಳಾರಿ ವೃತ್ತದ ಲೋಕೋಪಯೋಗಿ ಇಲಾಖೆಯ ಅಧೀಕ್ಷಕ ಅಭಿಯಂತರಾದ ಅಮೀನ್ ಮುಕ್ತಾರ್ ಅಹ್ಮದ್, ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಕೆ.ಪಿ.ರವಿಕುಮಾರ್,ಎಸ್.ನವೀನ್ ಕುಮಾರ್,ಸಹಾಯಕ ಆಯುಕ್ತ ಪಿ.ಪ್ರಮೋದ್,ಅಬಕಾರಿ ಉಪ ಆಯುಕ್ತ ಮಂಜುನಾಥ.ಎನ್., ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ ಸೇರಿದಂತೆ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಮಟ್ಟದ ಪದಾಧಿಕಾರಿಗಳು, ವಿವಿಧ ತಾಲ್ಲೂಕುಗಳ ಅಧ್ಯಕ್ಷರು, ಜಿಲ್ಲೆಯ ಎಲ್ಲಾ ಶಾಖೆಯ ಪದಾಧಿಕಾರಿಗಳು,ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಎಲ್ಲಾ ಇಲಾಖೆಯ ವೃಂದ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು, ಜಿಲ್ಲೆಯ ಅಧಿಕಾರಿಗಳು,ನೌಕರರ ಬಾಂಧವರು ಹಾಗೂ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಇಂದು ಡಾ.ಬಾಬು ಜಗಜೀವನ ರಾಮ್ ಅವರ 118ನೇ ಜಯಂತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.04–ಜಿಲ್ಲಾಡಳಿತದಿಂದ ಭಾರತದ ಮಾಜಿ ಉಪ ಪ್ರಧಾನಮಂತ್ರಿ ಹಾಗೂ ಹಸಿರು ಕ್ರಾಂತಿ ಹರಿಕಾರರಾದ ಡಾ.ಬಾಬು ಜಗಜೀವನ ರಾಮ್ ಅವರ 118ನೇ ಜಯಂತಿ ಕಾರ್ಯಕ್ರಮವನ್ನು ಏ.05 ರಂದು ಮಧ್ಯಾಹ್ನ 01 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಅಂದು ಬೆಳಿಗ್ಗೆ 9 ಗಂಟೆಗೆ ಡಾ.ಬಾಬು ಜಗಜೀವನ ರಾಮ್ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು. ಬಳಿಕ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಮುನ್ಸಿಪಾಲ್ ಕಾಲೇಜು ಮೈದಾನದಿಂದ ಡಾ.ಬಾಬು ಜಗಜೀವನ ರಾಂ ಅವರ ಭಾವಚಿತ್ರ, ಸ್ತಬ್ಧಚಿತ್ರಗಳನ್ನೊಳಗೊಂಡ ಭವ್ಯ ಮೆರವಣಿಗೆ ನಡೆಯಲಿದೆ.

ಮೆರವಣಿಗೆಯು ಗಡಿಗಿ ಚೆನ್ನಪ್ಪ ವೃತ್ತ–ಬ್ರೂಸ್‌ಪೇಟೆ ಠಾಣೆ–ಹೆಚ್.ಆರ್.ಗವಿಯಪ್ಪ ವೃತ್ತ–ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದವರೆಗೆ ಸಾಗಿಬರಲಿದೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳು, ಸಂಘಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು ಮತ್ತು ಸಾರ್ವಜನಿಕರು ಭಾಗವಹಿಸಬೇಕು ಎಂದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ ಅವರು ಕೋರಿದ್ದಾರೆ.

# ಗೊಂದಲದ ಗೂಡಾದ ಸರ್ಕಾರಿ ಶಾಲೆಯ ಎಸ್ ಡಿ ಎಂ ಸಿ ರಚನೆ



ಮಲ್ಲಮ್ಮನುಡಿವಾರ್ತೆ

ಕೊಪ್ಪಳ:ಅಭಿವೃದ್ಧಿಯ ಹರಿಕಾರ,ಶಿಕ್ಷಣಕ್ರಾಂತಿಯ ರೂವಾರಿ ಎಂದೆಲ್ಲ ಹೆಸರು ಪಡೆದುಕೊಂಡಿರುವ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ,ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕ ಬಸವರಾಜ ರಾಯರೆಡ್ಡಿ ಅವರ ಕ್ಷೇತ್ರದಲ್ಲಿ ಎಸ್ ಡಿ ಎಂ ಸಿ ಅವಧಿ ಮುಗಿದು ಒಂದು ವರ್ಷ ನಾಲ್ಕು ತಿಂಗಳು ಗುರುತಿಸಿದರು ಸಹ ನೂತನ ಸಮಿತಿ ರಚನೆಯಾಗಲಿ ಅಥವಾ ಪರ್ಯಾಯ ಆಯ್ಕೆಯಾಗಲಿ ಮಾಡದೆ ಶಿಕ್ಷಣ ಇಲಾಖೆಯ ನೀತಿಯನ್ನು ದಾಳಿಗೆ ತೂರಿದ ಘಟನೆ ಜರುಗಿರುವುದು ನಿಜಕ್ಕೂ ಆಶ್ಚರ್ಯಕರವಾಗಿದೆ.

ಶಾಲಾ ಸುಧಾರಣಾ ಸಮಿತಿ ಅವಧಿಯು ಶಿಕ್ಷಣ ಇಲಾಖೆಯ ನೀತಿಯ ಪ್ರಕಾರ ಗರಿಷ್ಠ ಮೂರು ವರ್ಷಗಳದ್ದಾಗಿರುತ್ತದೆ ನಂತರ ನೂತನ ಸಮಿತಿ ರಚನೆ ವಿಳಂಬವಾದರೆ ಪರ್ಯಾಯವಾಗಿ ಶಾಲೆಯಲ್ಲಿರುವ ಹಿರಿಯ ಶಿಕ್ಷಕರು ಒಬ್ಬರನ್ನು ಸಮಿತಿಯ ಬದಲಾಗಿ ಜವಾಬ್ದಾರಿ ವ್ಯಕ್ತಿಯನ್ನಾಗಿ ಆಯ್ಕೆ ಮಾಡುವುದು ನಿಯಮವಾಗಿದ್ದು ಆದರೆ ಸಿದ್ನೆಕೊಪ್ಪ ಗ್ರಾಮದಲ್ಲಿ ಎಲ್ಲಾ ನಿಯಮಗಳನ್ನು ಗಾಳಿಗೆ ತೂರಿ ಅವಧಿ ಮುಗಿದರು ಸಹ ಹಳೆಯ ಸಮಿತಿಯನ್ನೇ ಮುಂದುವರಿಸಿಕೊಂಡು ಬಂದಿದ್ದು ಇದನ್ನು ಸಹಿಸದ ಗ್ರಾಮದ ಯುವಕರು ಶಿಕ್ಷಣ ಇಲಾಖೆಯ ಅಧಿಕಾರಿಯಾಗ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮಾಹಿತಿ ನೀಡಿದ ನಂತರ ನೂತನ ಶಾಲಾ ಸುಧಾರಣಾ ಸಮಿತಿ ರಚನೆ ಮಾಡಲು ಶಾಲೆಯ ಶಿಕ್ಷಕರು ಹಾಗೂ ಸ್ಥಳೀಯರು ಮುಂದಾಗಿದ್ದು ಅದು ಸಹ 18 ಜನರ ಸದಸ್ಯರನ್ನು ಜಾತಿ ಲೆಕ್ಕಾಚಾರದ ಮೇಲೆ ಸರಳವಾಗಿ ಆಯ್ಕೆ ಮಾಡಿದ್ದು ನಂತರ ಅಧ್ಯಕ್ಷ ಸ್ಥಾನದ ಆಯ್ಕೆ ಸಂದರ್ಭದಲ್ಲಿ ಆಯ್ಕೆ ಪ್ರಕ್ರಿಯೆ ಜಾತಿ ಬಣ್ಣ ಕಳೆದುಕೊಂಡು ಆಶ್ಚರ್ಯಕರ ಸಂದರ್ಭ ನಿರ್ಮಾಣಗೊಂಡಿದೆ.

ಈಗಾಗಲೇ ಎರಡು ಬಾರಿ ಸಮಿತಿ ರಚನೆಗೆ ಸಭೆ ಕರೆಯಲಾಗಿದ್ದು ಸಭೆ ಗೊಂದಲದ ಗೂಡಾಗಿ ಮಾರ್ಪಟಿತ್ತು

ಮೂರನೇ ಬಾರಿ ಸಭೆಯಲ್ಲಿ ಶತಾಯಗತಾಯ ಸಮಿತಿಯನ್ನು ರಚನೆ ಮಾಡಲೇಬೇಕೆಂದು ಇಲಾಖೆಯಿಂದ ಒಂದಲ್ಲ ಎರಡು ಅಲ್ಲ ಒಟ್ಟು ಐದು ಅಧಿಕಾರಿಗಳು ಶಾಲೆಗೆ ಆಗಮಿಸಿದ್ದರು ಸಹ ಕೊನೆಯ ಹಂತದಲ್ಲಿ ಸಮಿತಿ ರಚನೆಗೆ ಜಾತಿ ಬಣ್ಣ ಪಡೆದುಕೊಂಡಿ–ದ್ದು ಆಶ್ಚರ್ಯಕರ ಸಂಗತಿಗೆ ಕಾರಣವಾಗಿದೆ.

ಶಿಕ್ಷಣ ಇಲಾಖೆಯಿಂದ ಇಬ್ಬರು ಸಿ ಆರ್ ಪಿ ಗಳು, ಒಬ್ಬ ಬಿ ಆರ್ ಪಿ, ಒಬ್ಬ ನೋಡಲ್ ಅಧಿಕಾರಿ ಮತ್ತೊಬ್ಬ ಸಮನ್ವಯ ಅಧಿಕಾರಿ ಸ್ಥಳಕ್ಕೆ ಆಗಮಿಸಿ ಸಮಿತಿ ರಚನೆಗೆ ಹರಸಾಹಸ ಪಟ್ಟರು ಸಹ ಕೊನೆಗಳಿಗೆಗೆ ಒಂದು ಕೋಮುವಿನ ಜನಾಂಗದವರು ನಮ್ಮ ಸಮುದಾಯಕ್ಕೆ ಇಲ್ಲಿಯ ತನಕ ಎಸ್ ಡಿ ಎಂ ಸಿ ಅಧ್ಯಕ್ಷ ಸ್ಥಾನ ದೊರೆತಿಲ್ಲ ಈ ಅವಧಿಯಲ್ಲಿ ನಮಗೆ ಅಧ್ಯಕ್ಷ ಸ್ಥಾನ ನೀಡಬೇಕು ಎಂದು ಪಟ್ಟುಹಿಡಿದರು. ನಿಧಾನವಾಗಿ ಆಯ್ಕೆ ಪ್ರಕ್ರಿಯೆ ಜಾತಿ ಬಣ್ಣ ಪಡೆದುಕೊಂಡಿದ್ದು ನಂತರ ಇನ್ನು ಕೆಲವು ಸಮುದಾಯದವರು ನಮ್ಮ ಸಮುದಾಯಕ್ಕೂ ಸಹ ಅಧ್ಯಕ್ಷ ಸ್ಥಾನ ದೊರಕಿಲ್ಲ ನಮಗೆ ಅಧ್ಯಕ್ಷ ಸ್ಥಾನ ಬೇಕು ಎಂದಾಗ ಅಧಿಕಾರಿಗಳು ಗೊಂದಲಕ್ಕೀಡಾಗಿದ್ದಂತೂ ಸತ್ಯ.

ಕೊನೆಗೆ ಅಧಿಕಾರಿಗಳು ಎಲ್ಲಾ ರೀತಿಯ ಮನವಲಿಕೆಯ ಅರಸಹಾಸ ಮಾಡಿದರು

ಪರಿಸ್ಥಿತಿ ತಿಳಿಗೊಳ್ಳದೆ ಇದ್ದಾಗ ವಿಷಯವನ್ನು ಸ್ಥಳೀಯ ಆಡಳಿತದ ಸ್ಥಾಯಿ ಸಮಿತಿ ಅವಗಾಹನೆಗೆ ಕಳಿಸಲಾಗುವುದು ಅವರ ತೀರ್ಮಾನದಂತೆ ಮುಂದಿನ ನಿರ್ಧಾರಗಳು ಕೈಗೊಳ್ಳಲಾಗುತ್ತದೆ ಎಂದು ಹೇಳಿ ವರದಿಯನ್ನು ಬರೆದು ಶಾಲೆಯಿಂದ ಹೊರಟು ಹೋದರು.

ರಾಜ್ಯದಲ್ಲಿಯೇ ಹೆಸರು ಮಾಡಿರುವ ಅತ್ಯುತ್ತಮ ಶಾಸಕರಿದ್ದು ಅದು ಸಹ ಶಿಕ್ಷಣ ರಂಗಕ್ಕೆ ಎಲ್ಲಾ ರೀತಿಯ ಸಹಕಾರ ನೀಡುತ್ತಿದ್ದು ನಮ್ಮ ಗ್ರಾಮದ ಶಾಲೆಯಲ್ಲಿ ಮಾತ್ರ ವರ್ಷಗಳ ಗತಿಸಿದರು ನೂತನ ಶಾಲಾ ಸುಧಾರಣಾ ಸಮಿತಿ ರಚನೆ ಮಾಡದೆ ಇರುವುದು ಹಲವಾರು ಅನುಮಾನಕ್ಕೆ ಕಾರಣವಾಗಿದ್ದು ಇನ್ನಾದರೂ ಸಂಬಂಧಪಟ್ಟ ಉನ್ನತ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಈ ಕಡೆ ಗಮನಹರಿಸಿ ಶಾಲೆಯ ಅಭಿವೃದ್ಧಿಗೆ ಪೂರಕ ವಾತಾವರಣ ನಿರ್ಮಾಣ ಮಾಡುತ್ತಾರೆ ಎಂದು ಜಾತಕ ಪಕ್ಷಿಯಂತೆ ಕಾಯುತ್ತಿದ್ದೇವೆ ಎಂದು ಗ್ರಾಮದ ಹಲವು ಯುವಕರು ಪತ್ರಿಕೆಗೆ ತಿಳಿಸಿರುತ್ತಾರೆ.

ಶಾಲಾ ಸುಧಾರಣೆ ಸಮಿತಿ ರಚನೆ ಪ್ರಕ್ರಿಯೆಯಲ್ಲಿ ನೋಡಲ್ ಅಧಿಕಾರಿ ಶಿವಪ್ಪ ಉಪ್ಪಾರ, ಬಿ ಆರ್ ಪಿ ಮಹೇಶ ಅಸೂಟಿ,ಶಿಕ್ಷಣ ಸಂಯೋಜನಾಧಿಕಾರಿ ಶರಣಪ್ಪ ರಾವಣಕಿ, ಸಿ ಆರ್ ಪಿ ಗಳಾದ ಪೀರ್ ಸಾಬ್ ದಫೆಧರ್, ಖಾದರ್ ಬಾಷಾ, ಶಾಲಾ ಮುಖೋಪಾಧ್ಯಾಯ ಶೇಖರಪ್ಪ ಗದಗ, ಶಾಲಾ ವಿದ್ಯಾರ್ಥಿಗಳ ಪಾಲಕರು ಪಾಲ್ಗೊಂಡಿದ್ದರು.

# ವಿಭಾ ಅವರಿಗೆ ಪಿಎಚ್‌ಡಿ ಪದವಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.04–ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಭೌತಶಾಸ್ತ್ರ ಅಧ್ಯಯನ ವಿಭಾಗದ ವಿದ್ಯಾರ್ಥಿನಿಯಾಗಿದ್ದ ವಿಭಾ ಅವರಿಗೆ ಪಿಎಚ್‌ಡಿ ಪದವಿ ಲಭಿಸಿದೆ.

ವಿವಿಯ ಭೌತಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕರಾದ ಡಾ.ತಿಪ್ಪೇರುದ್ರಪ್ಪ.ಜೆ ಅವರ ಮಾರ್ಗದರ್ಶನದಲ್ಲಿ ಸಿದ್ಧಪಡಿಸಿದ್ದ ಶುದ್ಧ ವಿಜ್ಞಾನದ ನಿಕಾಯದಡಿ "ಡಿಎಫ್‌ಟಿ,ಸಾಲ್ವೆಟೋಕ್ರೋಮಿಸಮ್ ಅಂಡ್ ಎನರ್ಜಿ ಟ್ರಾನ್ಸರ್ ಸ್ಟಡೀಸ್ ಇನ್ ಸಮ್ ಬಯಲಾಜಿಕಲಿ ಆಕ್ಟೀವ್ ಆರ್ಗ್ಯಾನಿಕ್ ಫ್ಲೋರೊಸೆಂಟ್ ಮಾಲಿಕ್ಯೂಲ್ಸ್" ಎಂಬ ಪ್ರೌಢ ಪ್ರಬಂಧ ಮಂಡಿಸಿದ್ದಕ್ಕೆ ವಿಶ್ವವಿದ್ಯಾಲಯವು ಪಿಎಚ್‌ಡಿ ಪದವಿ ಪ್ರದಾನ ಮಾಡಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ.

# ಇಪಿಎಫ್‌ಓ: ಏ.15 ರಂದು ಪಿಂಚಣಿ ಅದಾಲತ್


ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.04–ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಏ.15 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವೆಂಕಟ ಸುಬ್ಬಯ್ಯ ಅವರು ತಿಳಿಸಿದ್ದಾರೆ.

ಬಳ್ಳಾರಿ,ವಿಜಯನಗರ,ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇ–ರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ–ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪವ ಹಾಗೂ ಇತ್ಯಾದಿಗಳನ್ನು ಏ.11 ರೊಳಗಾಗಿ ತಿಳಿಸಬಹುದು. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392–268943 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಜಿಲ್ಲಾ ಸಲಹಾ ಸಮಿತಿ ಸಭೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.04–ಲ್ಲೆಯಲ್ಲಿ ಗರ್ಭಪೂರ್ವ ಮತ್ತು ಪ್ರಸವಪೂರ್ವ ಭ್ರೂಣ ಲಿಂಗ ಪತ್ತೆ ತಂತ್ರ ವಿಧಾನಗಳ (ಲಿಂಗ ಆಯ್ಕೆ ನಿಷೇಧ) ಪಿಸಿ ಮತ್ತು ಪಿಎನ್‌ಡಿಟಿ ಕಾಯ್ದೆ 1994 ರ ಪರಿಣಾಮಕಾರಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಚರ್ಚಿಸಲು ಏ.05 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಲ್ಲಿ ಜಿಲ್ಲಾ ಸಲಹಾ ಸಮಿತಿ ಸಭೆ ಆಯೋಜಿಸಲಾಗಿದೆ ಎಂದು ಪಿಸಿ ಮತ್ತು ಪಿಎನ್‌ಡಿಟಿ ಕಾಯ್ದೆಯ ಜಿಲ್ಲಾ ನೋಡಲ್ ಅಧಿಕಾರಿಯೂ ಆದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

# ಅನಾಮಧೇಯ ಮೃತ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.04–ನಗರದ ಹೆಚ್.ಆರ್ ಗವಿಯಪ್ಪ (ಮೋತಿ ವೃತ್ತ) ವೃತ್ತದ ನೀಲಕಂಠ ದೇವಸ್ಥಾನದ ಹತ್ತಿರ ಅಂದಾಜು 55 ವರ್ಷದ ಅನಾಮದೇಯ ವ್ಯಕ್ತಿಯು ಯಾವುದೋ ಖಾಯಿಲೆಯಿಂದ ಬಳಲುತ್ತಿದ್ದು, ಅನಾರೋಗ್ಯದಿಂದ ಏ.02 ರಂದು ಮೃತಪಟ್ಟಿದ್ದು, ಮೃತನ ವಾರಸುದಾರರು ತಿಳಿದಿರುವುದಿಲ್ಲ. ಮೃತನ ವಾರಸುದಾರರ ಪತ್ತೆ–ಗೆ ಸಹಕರಿಸಬೇಕು ಎಂದು ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು:

ಎತ್ತರ 5.5 ಅಡಿ, ಕೋಲು ಮುಖ, ಎಣ್ಣೆಗೆಂಪು ಮೈಬಣ್ಣ, ತೆಳುವಾದ ಮೈಕಟ್ಟು ಹೊಂದಿದ್ದು, ಮೃತನ ತಲೆಯ ಮೇಲೆ ಕಪ್ಪು ಕೂದಲು ಮತ್ತು ಮುಖದಲ್ಲಿ ಕಪ್ಪು ಗಡ್ಡ ಇರುತ್ತದೆ.

ಈ ಮೇಲ್ಕಂಡ ಚಹರೆ ಗುರುತುಗಳುಳ್ಳ ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಇದ್ದಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100,258102 ಬ್ರೂಸ್‌ಪೇಟೆ ಪೊಲೀಸ್ ಠಾಣೆ ದೂ.08392–272022, ಪಿ.ಎಸ್.ಐ ಮೊ:9480803081 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.04–ಕುರುಗೋಡು ಪಟ್ಟಣ ಇಂದಿರಾ ನಗರದ 14 ನೇ ವಾರ್ಡ್ ನಿವಾಸಿಯಾದ ವಡ್ಡರ ವೀರೇಶ್ ಎನ್ನುವ 36 ವರ್ಷದ ವ್ಯಕ್ತಿಯು ಜ.17 ರಂದು ಕಾಣೆಯಾಗಿದ್ದು, ಈ ಕುರಿತು ಕುರುಗೋಡು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಸಬ್‌ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

ಚಹರೆ ಗುರುತು:

ಅಂದಾಜು 5 ಅಡಿ ಎತ್ತರ, ದುಂಡು ಮುಖ, ಗೋದಿ ಮೈಬಣ್ಣ,ಸಾಧಾರಣ ಮೈಕಟ್ಟು ಹೊಂದಿರುತ್ತಾನೆ. ಕಾಣೆಯಾದ ಸಂದರ್ಭದಲ್ಲಿ ಕೆಂಪು ಬಣ್ಣದ ಚೆಕ್ಸ್ ಅಂಗಿ ಹಾಗೂ ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ,ತೆಲುಗು ಭಾಷೆ ಮಾತನಾಡುತ್ತಾನೆ.

ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ಕುರುಗೋಡು ಪೊಲೀಸ್ ಠಾಣೆಯ ದೂ.08393–263433 ಅಥವಾ ಪಿ.ಎಸ್.ಐ ಮೊ.9480803051, ಸಿ.ಪಿ.ಐ ಮೊ.9480803039, ಬಳ್ಳಾರಿ ಎಸ್.ಪಿ ರವರ ಕಚೇರಿ ದೂ.08392–258400,258300 ಬಳ್ಳಾರಿ ಕಂಟ್ರೋಲ್ ರೂಂ ದೂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏಪ್ರಿಲ್ ಮತ್ತು ಮೇ ತಿಂಗಳಿನಲ್ಲಿ ಕಚೇರಿ ಕೆಲಸದ ವೇಳೆಯನ್ನು ಬದಲಾವಣೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏಪ್ರಿಲ್;04–ಬೆಳಗಾವಿ ವಿಭಾಗದ ವಿಜಯಪುರ ಮತ್ತು ಬಾಗಲಕೋಟೆ ಹಾಗೂ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಗಳಿಗೆ 2025ರ ಏಪ್ರಿಲ್ ಮತ್ತು ಮೇ ತಿಂಗಳಿನಲ್ಲಿ ಕಚೇರಿ ಕೆಲಸದ ವೇಳೆಯನ್ನು ಬದಲಾವಣೆ ಆದೇಶವನ್ನು(ಆಡಳಿತ ಸುಧಾರಣೆ ಸ್ವೀಮರ ತಪಾಸಣೆ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಸರ್ಕಾರದ ಅಧೀನ ಕಾರ್ಯದರ್ಶಿ ವಿಮಲಾಕ್ಷಿ.ಬಿ ಅವರು ಹೊರಡಿಸಿದ್ದಾರೆ.

ಕರ್ನಾಟಕ ಸರ್ಕಾರದ ನಡವಳಿಗಳು 2025ನೇ ಸಾಲಿನ ಏಪ್ರಿಲ್ ಮತ್ತು ಮೇ ಮಾಹೆಗಳಲ್ಲಿ ಹೆಚ್ಚಿನ ಬಿಸಿಲಿನ ತಾಪಮಾನದ ಹಿನ್ನಲೆಯಲ್ಲಿ ಬೆಳಗಾವಿ ವಿಭಾಗದ ವಿಜಯಪುರ ಮತ್ತು ಬಾಗಲಕೋಟೆ ಹಾಗೂ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಗಳಿಗೆ ಪ್ರಸ್ತುತ ಜಾರಿಯಲ್ಲಿರುವ ಸರ್ಕಾರಿ ಕಚೇರಿಗಳ ವೇಳಾಪಟ್ಟಿಯ ಬದಲಾಗಿ ಏಪ್ರಿಲ್ ಮತ್ತು ಮೇ ತಿಂಗಳುಗಳಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 1.30 ಗಂಟೆಯ ವರೆಗೆ ಬದಲಾಯಿಸಿ ಆದೇಶಿಸಿದೆ.

# ಶಾಲಾ ಆಡಳಿತ ಮಂಡಳಿಯ ವಿರುದ್ಧ ಕ್ರಮಕ್ಕೆ ಶಿಫಾರಸ್ಸು – ಶೇಖರಗೌಡ ರಾಮತ್ನಾಳ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಬಾಲಕಿಯ ಆತ್ಮಹತ್ಯೆ ಪ್ರಕರಣ ಹಿನ್ನೆಲೆಯಲ್ಲಿ ಮೃತ ವಿದ್ಯಾರ್ಥಿನಿಯ ಮನೆಗೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ ರಾಮತ್ನಾಳ ಅವರು ಬುಧವಾರ ಭೇಟಿ ನೀಡಿ, ಪಾಲಕರಿಗೆ ಸಾಂತ್ವನ ಹೇಳಿದರು.

ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದಿದ್ದಕ್ಕೆ 8ನೇ ತರಗತಿ ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡಿರುವ ಬಗ್ಗೆ ಇತ್ತೀಚೆಗೆ ದಿನ ಪತ್ರಿಕೆಗಳಲ್ಲಿ ಪ್ರಕಟವಾಗಿತ್ತು. ಅದರಂತೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರು ಮೃತ ವಿದ್ಯಾರ್ಥಿನಿ ಮನೆಗೆ ಭೇಟಿ ನೀಡಿದರು. ಮಗುವಿನ ಪೋಷಕರು ಮಗಳಿಗೆ 8ನೇ ತರಗತಿಯಲ್ಲಿ ಕಡಿಮೆ ಅಂಕ ಪಡೆದುಕೊಂಡಿದ್ದು ಅದರಿಂದಾಗಿ ಮಾನಸಿಕ ಖಿನ್ನತೆಗೆ ಒಳಗಾಗಿ ಆತ್ಮಹತ್ಯೆ ಮಾಡಿಕೊಂಡಿರಬಹುದೆಂದು ತಿಳಿಸಿರುತ್ತಾರೆ.

ಈ ಮಗುವು ವ್ಯಾಸಂಗ ಮಾಡುತ್ತಿದ್ದ ಎಸ್.ಎಫ್.ಎಸ್. ಶಾಲೆಗೆ ಭೇಟಿ ನೀಡಿ, ಶಾಲಾ ಶಿಕ್ಷಕರು ಹಾಗೂ ಸಿಬ್ಬಂದಿಯವರನ್ನು ವಿಚಾರಿಸಲಾಗಿದೆ. ಈ ವೇಳೆ ಮಗುವು ಪರೀಕ್ಷೆಯಲ್ಲಿ ನಕಲು ಮಾಡುವುದು ಕಂಡುಬಂದಿದ್ದು, ಈ ಬಗ್ಗೆ ಮಗುವಿನ ಪಾಲಕರನ್ನು ಕರೆಯಿಸಿ ಈ ರೀತಿ ಪುನರಾವರ್ತನೆಯಾಗದಂತೆ ನಡೆದುಕೊಳ್ಳಲು ತಿಳಿವಳಿಕೆ ನೀಡಲಾಗಿರುತ್ತದೆ ಎಂದು ವರ್ಗದ ಶಿಕ್ಷಕರು ಹೇಳಿದರು.

ಆದರೆ, ಈ ಬಗ್ಗೆ ವಿಚಾರಿಸಿದಾಗ ಮಗು ಆತ್ಮಹತ್ಯೆ ಮಾಡಿಕೊಳ್ಳವಷ್ಟು ಅವಳಿಗೆ ಉತ್ತೇಜನ ಹಾಗೂ ಅವಹೇಳನ ಮಾಡಿ, ಮನನೊಂದು ಆತ್ಮಹತ್ಯೆ ಮಾಡಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದ್ದು, ಈ ಕುರಿತು ಹಾಜರಿದ್ದ ಪೊಲೀಸ್ ನಿರೀಕ್ಷಕರಿಗೆ ಸೂಕ್ತ ತನಿಖೆ ನಡೆಸಿ ಸಂಬಂಧಿಸಿದ 8ನೇ ವರ್ಗದ ಶಿಕ್ಷಕರು, ಪರೀಕ್ಷಾ ಮೇಲ್ವಿಚಾರಕರು, ಸಂಸ್ಥೆ ಹಾಗೂ ಆಡಳಿತ ಮಂಡಳಿಯ ವಿರುದ್ಧ ಕ್ರಮ ಜರುಗಿಸಲು ಶಿಫಾರಸ್ಸು ಮಾಡಿದರು ಹಾಗೂ ಈ ಕುರಿತು ಆಯೋಗಕ್ಕೆ ವರದಿ ನೀಡುವಂತೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದು ರಾಜ್ಯಪಠ್ಯಕ್ರಮದ ಶಾಲೆಯಾಗಿರುವುದರಿಂದ ಶಿಕ್ಷಣ ಇಲಾಖೆಯ ನಿಯಮಾವಳಿಗಳಂತೆ ಕಾರ್ಯನಿರ್ವಹಿಸಬೇಕಾಗಿದ್ದು, ಪರೀಕ್ಷಾ ಫಲಿತಾಂಶಗಳನ್ನು ಪ್ರಕಟಿಸಲು ಏಪ್ರಿಲ್–9ರ ವರೆಗೆ ಕಾಲಾವಕಾಶ ಇದ್ದರೂ ಸಹ ಮಾರ್ಚ್–26ನೇ ತಾರೀಖಿನಂದು ಫಲಿತಾಂಶ ಪ್ರಕಟಿಸಲಾಗಿದೆ. ಅಷ್ಟೇ ಅಲ್ಲದೇ ಶಿಕ್ಷಣ ಇಲಾಖೆಯ ನಿಯಮಾವಳಿಗಳಂತೆ ಕಾರ್ಯನಿರ್ವಹಿಸದೇ ಇರುವ ಬಗ್ಗೆ ಸಂಸ್ಥೆ, ಆಡಳಿತ ಮಂಡಳಿ ವಿರುದ್ಧ ಕ್ರಮ ಜರುಗಿಸುವಂತೆ ಹಾಜರಿದ್ದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸಿದರು ಹಾಗೂ ಜಿಲ್ಲೆಯ ಯಾವುದೇ ಪ್ರದೇಶದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಎಲ್ಲಾ ಶಿಕ್ಷಣ ಸಂಸ್ಥೆಗಳು, ಸಿಬ್ಬಂದಿಗಳು ಮತ್ತು ಆಡಳಿತ ಮಂಡಳಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕೆಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು,ಕ್ಷೇತ್ರಶಿಕ್ಷಣಾಧಿಕಾರಿಗಳು ಹಾಗೂ ಪೊಲೀಸ್ ನಿರೀಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಏ.8 ಲೋಕಾಯುಕ್ತ ಜನಸಂಪರ್ಕ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.4-ಜಿಲ್ಲಾಮಟ್ಟದ ಸಾರ್ವಜನಿಕ ಸಮಸ್ಯೆಗಳನ್ನು ಪರಿಹರಿಸಲು ಬಾಗಲಕೋಟೆ ಲೋಕಾಯುಕ್ತ ಅಧಿಕಾರಿಗಳು ಎಪ್ರೀಲ್ 8ರಂದು ರಬಕವಿ-ಬನಹಟ್ಟಿ ನಗರಸಭೆಯಲ್ಲಿ ಜನಸಂಪರ್ಕ ಸಭೆ ಹಮ್ಮಿಕೊಂಡಿದ್ದಾರೆ.

ಅಲ್ಲಿನ ನಗರಸಭೆ ಕಾರ್ಯಾಲಯದಲ್ಲಿ ಬೆಳಿಗ್ಗೆ 10:30 ರಿಂದ 1:30ರವರೆಗೆ ನಡೆಯುವ ಈ ಜನಸಂಪರ್ಕ ಸಭೆಯಲ್ಲಿ ಬಾಗಲಕೋಟೆ ಲೋಕಾಯುಕ್ತ ಅಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟದ ಎಲ್ಲಾ ಇಲಾಖೆ ಅಧಿಕಾರಿಗಳು ಹಾಜರಿರುತ್ತಾರೆ.

ಸಾರ್ವಜನಿಕರು ತಮ್ಮ ಲಿಖಿತ ದೂರುಗಳನ್ನು ನೀಡಬಹುದು. ಸರಕಾರಿ ಕೆಲಸಗಳಲ್ಲಿ ವಿಳಂಬ ಅಥವಾ ತೊಂದರೆಯಾದರೆ ಸ್ಥಳೀಯ ಅಧಿಕಾರಿಗಳ ಸಹಕಾರದಿಂದ ಪರಿಹಾರ ಸಿಗಲಿದೆ. ಸಮಸ್ಯೆ ಇತ್ಯರ್ಥವಾಗದಿದ್ದರೆ ದೂರುಗಳನ್ನು ಫಾರ್ಮ್ ನಂ. 1 ಮತ್ತು 2 ರಲ್ಲಿ ದಾಖಲೆ ಮಾಡಿ, ಗೌರವಾನ್ವಿತ ಲೋಕಾಯುಕ್ತರಿಗೆ ಕಳುಹಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08354-236200 ಹಾಗೂ 295170. ಸಂಪರ್ಕಿಸುವಂತೆ ಬಾಗಲಕೋಟ ಜಿಲ್ಲಾ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಮಲ್ಲೇಶ ಟಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸವ ಧರ್ಮ ಸಂಸತ್ತು ವ್ಯವಸ್ಥಿತವಾಗಿರಲಿ : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.4-ಜಿಲ್ಲೆಯ ಕೂಡಲಸಂಗಮದಲ್ಲಿ ಎರಡು ದಿನಗಳ ಕಾಲ ಆಯೋಜಿಸಲು ನಿರ್ಧರಿಸಿರುವ ಬಸವ ಧರ್ಮ ಸಂಸತ್ತು ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಾಗೂ ವ್ಯವಸ್ಥಿತವಾಗಿ ನಡೆಸಬೇಕು ಎಂದು ಜಿಲ್ಲಾಧಿಕಾರಿ ಜಾನಕಿ ಕೆ ಎಂ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಕೂಡಲಸಂಗಮದಲ್ಲಿ ಸರ್ವ ಧರ್ಮ ಸಂಸತ್ತು ಕಾರ್ಯಕ್ರಮದ ಆಯೋಜನೆಗೆ ಸೂಕ್ತ ಸಮಿತಿಗಳ ರಚಿಸುವ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಸವಣ್ಣನವರ ಬದುಕು, ಸಂದೇಶ, ಚಿಂತನೆಗಳನ್ನು ವ್ಯಾಪಕವಾಗಿ ಪ್ರಚುರಪಡಿಸುವ ನಿಟ್ಟಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೂಡಲಸಂಗಮ ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಯಾವುದೇ ಲೋಪದೋಷಗಳಾಗದಂತೆ ಕಾರ್ಯಗಳಾಗಬೇಕು ಎಂದರು.

ಸ್ವಾಗತ ಮತ್ತು ಶಿಷ್ಟಾಚಾರ ಸಮಿತಿ, ಹಣಕಾಸು, ಸಾರಿಗೆ, ವಸತಿ, ಆಹಾರ, ಪ್ರಚಾರ ಮತ್ತು ಜಾಹೀರಾತು ಮಾಧ್ಯಮ ಸಮಿತಿ, ಮೂಲಭೂತ ಸೌಲಭ್ಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಸಮಿತಿ, ಆರೋಗ್ಯ ಮತ್ತು ನೈರ್ಮಲೀಕರಣ ಸಮಿತಿ, ಕಾನೂನು ಸುವ್ಯವಸ್ಥೆ ಹಾಗೂ ಅಗ್ನಿಶಾಮಕ ದಳ ವ್ಯವಸ್ಥೆ ಸಮಿತಿ, ಮೆರವಣಿಗೆ ಹಾಗೂ ವೇದಿಕೆ ಸಮಿತಿ ಸೇರಿ ಒಟ್ಟು 11 ಸಮಿತಿಗಳನ್ನು ರಚಿಸಲಾಗಿದ್ದು, ಎಲ್ಲ ಸಮಿತಿಗಳು ನಿರ್ವಹಿಸಬೇಕಾದ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು

ವಿಶೇಷವಾಗಿ ಜಿಲ್ಲೆಯಲ್ಲಿ ಬಿಸಿಲಿನ ತಾಪ ಹೆಚ್ಚಿರುವ ಕಾರಣ ಕಾರ್ಯಕ್ರಮ ಜರಗುವ ಸ್ಥಳದಲ್ಲಿ ಅಲ್ಲಲ್ಲಿ ನೆರಳಿನ ವ್ಯವಸ್ಥೆ, ಕುಡಿಯುವ ನೀರು, ಕಾರ್ಯಕ್ರಮದ ಅಂದಾಜು ಖರ್ಚು ವೆಚ್ಚ, ಅತಿಥಿಗಳ ವಸತಿ, ಕೂಡಲಸಂಗಮ ಸಂಪರ್ಕಿಸುವ ರಸ್ತೆಗಳ ಸ್ಥಿತಿಗತಿ, ಕಾರ್ಯಕ್ರಮದ ಕುರಿತು ಪ್ರಚಾರ ವೈಖರಿ ಮತ್ತು ಭದ್ರತೆ ವಿಚಾರವಾಗಿ ಅಧಿಕಾರಿಗಳೊಂದಿಗೆ ಸಾಕಷ್ಟು ಚರ್ಚೆ ನಡೆಸಿದರು.

ಜಿಲ್ಲೆಯ ಎಲ್ಲ ತಾಲೂಕುಗಳ ತಹಸೀಲ್ದಾರರು ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಗೆ ಹಾಜರಿದ್ದು, ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಶಶಿಧರ ಕುರೇರ, ಅಪರ ಪೊಲೀಸ್ ಅಧೀಕ್ಷಕ ಪ್ರಸನ್ನ ಬಸವಂತರಾಯ್ ದೇಸಾಯಿ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಜೈನಾಪುರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಪ್ರಜ್ವಲ್‌ಗೆ ರಾಜ್ಯಮಟ್ಟದ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.4-ನಗರದ ಬಿವಿವಿ ಸಂಘದ ಪಾಲಿಟೆಕ್ನಿಕ್ ಸಂಸ್ಥೆಯ ವಿದ್ಯಾರ್ಥಿ ಪ್ರಜ್ವಲ್ ಕೋಳಿಗೆ ರಾಜ್ಯಮಟ್ಟದ ಅತ್ಯುತ್ತಮ ವಿದ್ಯಾರ್ಥಿ ಪ್ರಶಸ್ತಿ ಲಭಿಸಿದೆ.

ಭಾರತೀಯ ತಾಂತ್ರಿಕ ಶಿಕ್ಷಣ ಮಂಡಳಿ(ಐ.ಎಸ್.ಟಿ.ಇ.)ಕೊಡಮಾಡುವ ಈ ಪ್ರಶಸ್ತಿ ಪಡೆದಿರುವ ಪ್ರಜ್ವಲ್ ಮೆಕ್ಯಾನಿಕಲ್ ವಿಭಾಗದಲ್ಲಿ ಓದುತ್ತಿದ್ದು, ಈಚೆಗೆ ಬೆಂಗಳೂರಿನಲ್ಲಿ ನಡೆದ 20 ನೇ ಐಎಸ್‌ಟಿಇ ರಾಜ್ಯಮಟ್ಟದ ವಿದ್ಯಾರ್ಥಿಗಳ ಸಮಾವೇಶದಲ್ಲಿ ಪ್ರಶಸ್ತಿ ನೀಡಲಾಯಿತು.

ವಿದ್ಯಾರ್ಥಿಯ ಪ್ರತಿಭೆ ಹಾಗೂ ರಾಜ್ಯ ಹಾಗೂ ರಾಷ್ಟ್ರಮಟ್ಟಗಳಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸುವುದರ ಮೇಲೆ ಈ ಪ್ರಶಸ್ತಿಯನ್ನು ನೀಡಲಾಗುತ್ತಿದ್ದು, ಪ್ರಶಸ್ತಿ ವಿಜೇತ ವಿದ್ಯಾರ್ಥಿಯನ್ನು ಬಿ.ವಿ.ವಿ. ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ್ ಅಥಣಿ, ಸಂಘದ ಸರ್ವ ಸದಸ್ಯರು ಪ್ರಾಚಾರ್ಯರು ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

# 'ದೇಖೋ ಅಪನಾ ದೇಶ' ಫೋಟೋ ಸ್ಪರ್ಧೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.4-ಪ್ರವಾಸೋದ್ಯಮವನ್ನು ಮತ್ತಷ್ಟು ಮೇಲ್ದರ್ಜೆಗೇರಿಸಲು ಹಾಗೂ ಧಾರ್ಮಿಕ, ಸಾಂಸ್ಕೃತಿಕ, ಪಾರಂಪರಿಕ, ಕರಕುಶಲ, ನೈಸರ್ಗಿಕ, ವನ್ಯಜೀವಿ, ಸಾಹಸ ಚಟುವಟಿಕೆಗಳೊಂದಿಗೆ ಪ್ರಮುಖ ಪ್ರವಾಸಿ ತಾಣಗಳನ್ನು ಗುರುತಿಸಿ, ಅವುಗಳನ್ನು ವಿಶ್ವದರ್ಜೆಯಲ್ಲಿ ಅಭಿವೃದ್ಧಿಪಡಿಸಲು ಕೇಂದ್ರ ಪ್ರವಾಸೋದ್ಯಮ ಇಲಾಖೆಯಿಂದ ಡಿಸ್ಕವರಿ ದಿ ಬ್ಯೂಟಿ ಆಪ್ ಇಂಡಿಯಾ ಶೀರ್ಷಿಕೆಯಡಿಯಲ್ಲಿ 'ದೇಖೋ ಅಪನಾ ದೇಶ' ಫೋಟೋ ಕಾಂಟೆಸ್ಟ್-2025 ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಬಾಗಲಕೋಟೆ ಜಿಲ್ಲೆಯ ಪ್ರವಾಸಿ ತಾಣಗಳಲ್ಲಿನ ಸ್ಮಾರಕಗಳು, ವನ್ಯಜೀವಿ, ಭೌಗೋಳಿಕ ಸೂಚ್ಯಾಂಕ ಟ್ಯಾಗ ಪಡೆದ ಕರಕುಶಲ ಮತ್ತು ಕೈಮಗ್ಗ ವಸ್ತುಗಳು, ನೈಸರ್ಗಿಕ ದೃಶ್ಯಗಳು ಹಾಗೂ ಸಾಹಸ ಚಟುವಟಿಕೆಗಳ ವಿಭಾಗಗಳಲ್ಲಿ ಅತ್ಯುತ್ತಮ ಛಾಯಾಚಿತ್ರಗಳನ್ನು ಸೆರೆಹಿಡಿದು Dekhoapnadeshphotos@gmail.com ಇ-ಮೇಲ್‌ಗೆ ನೇರವಾಗಿ ಕಳುಹಿಸಲು ಸಾರ್ವಜನಿಕರಿಗೆ ಪ್ರವಾಸಿಗರಿಗೆ ಎಪ್ರೀಲ್ 7ವರೆಗೆ ಅವಕಾಶ ಕಲ್ಪಿಸಲಾಗಿರುತ್ತದೆ. ಸ್ಥಳೀಯ ಛಾಯಾಗ್ರಾಹಕರು, ಪ್ರವಾಸಿ ಮಾರ್ಗದರ್ಶಕರು, ಸಾರ್ವಜನಿಕರು, ಪ್ರವಾಸಿಗರು ನೇರವಾಗಿ ಛಾಯಾಚಿತ್ರ ಕಳುಹಿಸಬಹುದಾಗಿದೆ.

ಛಾಯಾಚಿತ್ರವನ್ನು ಕ್ಯಾಮೆರಾ ಅಥವಾ ಮೊಬೈಲ್ ಫೋನ್ ಮೂಲಕ ತೆಗೆಯಬಹುದು. ಕಥೆಯನ್ನು ಹೇಳುವ ಮತ್ತು ವೀಕ್ಷಕರು ಆ ಸ್ಥಳಗಳನ್ನು ತಿಳಿದುಕೊಳ್ಳಲು ಪ್ರೇರೇಪಿಸುವ ಛಾಯಾಚಿತ್ರಗಳನ್ನು ಸಾಧ್ಯವಾದಷ್ಟು ಕಳುಹಿಸಬೇಕು. ಒಬ್ಬ ಸ್ಪರ್ಧಿ ಪ್ರತಿ ವಿಭಾಗದಲ್ಲೂ ಗರಿಷ್ಟ ಮೂರು ಛಾಯಾಚಿತ್ರಗಳನ್ನು ಸಲ್ಲಿಸಬಹುದು. ಛಾಯಾಚಿತ್ರಗಳು ವರ್ಣಮಯ ಅಥವಾ ಕಪ್ಪು-ಬಿಳುಪಿನದ್ದಾಗಿರಬಹುದು.

# ಬಿಟಿಡಿಎ ಬುಡವನ್ನೇ ಕತ್ತರಿಸಿದ ಪೂಜಾರ-ಚರಂತಿಮಠ ಆರೋಪ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.4-ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಸದಸ್ಯತ್ವ ಪಡೆಯುವ ಸ್ವಾರ್ಥತನಕ್ಕೆ ಆ ಸಂಸ್ಥೆಯನ್ನೇ ರದ್ದು ಮಾಡಿಸಿ, ಬಾಗಲಕೋಟೆ ಸಂತ್ರಸ್ಥರಿಗೆ ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಅನ್ಯಾಯವೆಸಗಿದ್ದಾರೆ ಎಂದು ಮಾಜಿ ಶಾಸಕ ವೀರಣ್ಣ ಚರಂತಿಮಠ ಆರೋಪಿಸಿದ್ದಾರೆ.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಳುಗಡೆ ಸಂತ್ರಸ್ಥರ ಸ್ಥಳಾಂತರ, ಭೂಸ್ವಾಧೀನ, ನಿವೇಶನ ಹಂಚಿಕೆ, ಪುನರ್ವಸತಿ ಹೀಗೆ ಎಲ್ಲ ವ್ಯವಸ್ಥೆಗಾಗಿ ಕಳೆದ 40 ವರ್ಷಗಳ ಹಿಂದೆ ಅಸ್ತಿತ್ವಕ್ಕೆ ಬಂದಿದ್ದ ಬಿಟಿಡಿಎಯನ್ನು ತನಗೆ ಸದಸ್ಯತ್ವ ಸಿಗಲಿಲ್ಲ ಎಂಬ ಕಾರಣಕ್ಕೆ ಅದರ ರದ್ದತಿಗೆ ಮುಂದಾಗಿ ಅದರ ಬುಡವನ್ನೇ ಕತ್ತರಿಸಿದ್ದಾರೆ ಎಂದು ಪೂಜಾರ ವಿರುದ್ಧ ಹರಿಹಾಯ್ದರು.

ನಗರದ ಜನತೆಗೆ ಅನ್ಯಾಯ ಮಾಡಿರುವ ಪಿ.ಎಚ್.ಪೂಜಾರ ಮರ್ಯಾದೆಯಿದ್ದರೆ ಈ ಕೂಡಲೇ ವಿಧಾನ ಪರಿಷತ್ ಸದಸ್ಯತ್ವ ಹಾಗೂ ಬಿಜೆಪಿಗೆ ರಾಜೀನಾಮೆ ಕೊಡಬೇಕು ಎಂದು ಆಗ್ರಹಿಸಿದ ಚರಂತಿಮಠ, ಬಿಟಿಡಿಎ ರದ್ದತಿಯಿಂದ ನಗರದ ಜನತೆಗೆ ಆಗುವ ತೊಂದರೆಯ ಬಗ್ಗೆ ಇವರಿಗೆ ತಿಳುವಳಿಕೆ ಇರಲಿಲ್ಲವೇ? ಇದ್ದಿದ್ದರೆ ಈ ಮಟ್ಟಕ್ಕೆ ಅವರು ಹೋಗುತ್ತಿರಲಿಲ್ಲ ಎಂದರು.

ಮಾತೆತ್ತಿದರೆ ನಾನು ಸಂಘ ಪರಿವಾರದಿಂದ ಬಂದವನು ಎಂದು ಹೇಳುವ ಪಿ.ಎಚ್.ಪೂಜಾರ, ಈಚೆಗೆ ನಗರದಲ್ಲಿ ನಿರ್ಮಾಣಗೊಂಡಿರುವ ಸಂಘದ ಕಟ್ಟಡಕ್ಕೆ 2 ಲಕ್ಷ ರೂ. ಘೋಷಣೆ ಮಾಡಿ ಚೆಕ್ ಕೊಟ್ಟಿದ್ದು ಬ್ಯಾಲನ್ಸ್ ಇಲ್ಲದ ಕಾರಣಕ್ಕೆ ಎರಡು ಸಲ ಬ್ಯಾಂಕಿನಿಂದ ತಿರುಗಿ ಬಂದಿದೆ. ಆದರೆ ಸ್ವಂತಕ್ಕಾಗಿ ಬಾರ್ ಆಂಡ್ ರೆಸ್ಟೋರೆಂಟ್ ಖರೀದಿಸಲು ಕೋಟಿಗಟ್ಟಲೆ ಹಣ ನೀಡಿದ್ದಾರೆ ಎಂದು ಆರೋಪಿಸಿದರು.

ಬಿಟಿಡಿಎ ರದ್ದತಿಗೆ ಕಾರಣ-ರಾಗಿದ್ದು, ಸಂಘ ಪರಿವಾರದ ಕಟ್ಟಡಕ್ಕೆ ದೇಣಿಗೆ ನೀಡಿದ ಚೆಕ್ ವಾಪಸ್ಸು ಬಂದಿರುವುದು ಸೇರಿ ಹಲವು ವಿಚಾರಗಳಲ್ಲಿ ಪೂಜಾರ ನಡೆದುಕೊಂಡಿರುವ ಎಲ್ಲ ದಾಖಲೆಗಳನ್ನು ಕೇಂದ್ರ ನಾಯಕರಿಗೆ ಕಳುಹಿಸಿ ಕ್ರಮಕ್ಕೆ ಒತ್ತಾಯಿಸಲಾಗುವುದು ಎಂದು ಚರಂತಿಮಠ ಹೇಳಿದರು.

# ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಶರಣಬಸಪ್ಪ ದರ್ಶನಾಪೂರ ಅವರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 04-ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಏಪ್ರಿಲ್ 4 ಹಾಗೂ ಏಪ್ರಿಲ್ 7 ಮತ್ತು 8 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಪ್ರವಾಸವು ಕೆಳಗಿನಂತಿದೆ ಎಂದು ಸಚಿವರ ಆಪ್ತ ಕಾರ್ಯದರ್ಶಿ ಡಾ.ಶ್ರೀಶೈಲ ಜಿ.ಬಿದರಕುಂದಿ ಅವರು ತಿಳಿಸಿದ್ದಾರೆ.

2025ರ ಏಪ್ರಿಲ್ 4ರ ಶುಕ್ರವಾರ ರಂದು ಬೆಳಿಗ್ಗೆ 9 ಗಂಟೆ ಕಲಬುರಗಿದಿಂದ ನಿರ್ಗಮಿಸಿ ಬೆಳಿಗ್ಗೆ 10.30 ಗಂಟೆಗೆ ಶಹಾಪೂರ ಆಗಮಿಸಿ, ಗೋಗಿ (ಕೆ) ಗ್ರಾಮದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆ ಸ್ಥಾಪನೆಗಾಗಿ ಭೂಮಿ ಪೂಜೆಯ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ನಂತರ ಅಂದು ಮಧ್ಯಾಹ್ನ 12 ಗಂಟೆಗೆ ಶಹಾಪೂರ ನಗರದಲ್ಲಿ ಸಾರ್ವಜನಿಕ ಕುಂದುಕೊರತೆಗಳ ವಿಚಾರಣೆ ಆಲಿಸುವರು ಹಾಗೂ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ತದನಂತರ ಸಂಜೆ 5 ಗಂಟೆಗೆ ಕಲಬುರಗಿ ಪ್ರಯಾಣ ಬೆಳೆಸುವರು.

2025ರ ಏಪ್ರಿಲ್ 7ರ ಸೋಮವಾರ ರಂದು ಬೆಳಿಗ್ಗೆ 9 ಗಂಟೆ ಕಲಬುರಗಿ ದಿಂದ ನಿರ್ಗಮಿಸಿ ಬೆಳಿಗ್ಗೆ 10.30 ಗಂಟೆ ಯಾದಗಿರಿ ಆಗಮಿಸಿ, ಯಾದಗಿರಿ ಜಿಲ್ಲಾ ಪಂಚಾಯತ ಆವರಣದಲ್ಲಿ ಜಿಲ್ಲಾ ಪಂಚಾಯತ ವತಿಯಿಂದ ಸ್ಥಾಪಿಸಿರುವ ಅಕ್ಕಾ ಕೇಫೆ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ನಂತರ ಬೆಳಿಗ್ಗೆ 11 ಗಂಟೆಗೆ ಯಾದಗಿರಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಯಾದಗಿರಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಹೊಸದಾಗಿ ನೇಮಕಗೊಂಡಿರುವ ಅಂಗನವಾಡಿ ಶಿಕ್ಷಕಿಯರಿಗೆ ಆದೇಶ ಪತ್ರ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ತದನಂತರ ಮಧ್ಯಾಹ್ನ 12 ಗಂಟೆಗೆ ಸಾರ್ವಜನಿಕ ಕುಂದುಕೊರತೆಗಳ ವಿಚಾರಣೆ ಆಲಿಸುವರು. ಅಂದು ಸಂಜೆ ಸಂಜೆ 5 ಗಂಟೆಗೆ ಕಲಬುರಗಿ ಪ್ರಯಾಣ ಬೆಳೆಸುವರು.

2025ರ ಏಪ್ರಿಲ್ 8ರ ಮಂಗಳವಾರ ರಂದು ಬೆಳಿಗ್ಗೆ ಬೆಳಿಗ್ಗೆ 9.30 ಗಂಟೆ ಕಲಬುರಗಿ ದಿಂದ ನಿರ್ಗಮಿಸಿ ಬೆಳಿಗ್ಗೆ 11 ಗಂಟೆ ಯಾದಗಿರಿ ಆಗಮಿಸಿ, ಯಾದಗಿರಿ ವಾಲ್ಮೀಕಿ ಭವನ ಯಾದಗಿರಿ ಜಿಲ್ಲಾ ಸರ್ಕಾರಿ ನೌಕರರ ಪದಗ್ರಹಣ ಹಾಗೂ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸುವರು. ನಂತರ ಅಂ-ದು ಮಧ್ಯಾಹ್ನ 12.30 ಗಂಟೆಗೆ ಗಂಗನಾಳ ಗ್ರಾಮದಲ್ಲಿ 24*7 ನೀರು ಸರಬರಾಜು ಯೋಜನೆಗೆ ಚಾಲನೆ ಕಾರ್ಯಕ್ರಮದಲ್ಲಿ ಭಾಗವಹಿಸುವರು. ತದನಂತರ ಮಧ್ಯಾಹ್ನ 2.30 ಗಂಟೆಗೆ ಶಹಾಪೂರ ನಗರದಲ್ಲಿ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು ಹಾಗೂ ಸಾರ್ವಜನಿಕ ಕುಂದುಕೊರತೆಗಳ ವಿಚಾರಣೆ ಆಲಿಸುವರು. ಸಂಜೆ 5 ಗಂಟೆಗೆ ಕಲಬುರಗಿ ಪ್ರಯಾಣ ಬೆಳೆಸುವರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನಧಿಕೃತ ರಸ್ತೆ ಅಗೆತ ಮಹಿಳೆ ವಿರುದ್ಧ ಎಫ್ಐಆರ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಏ.4- ಪದೇ ಪದೇ ರಸ್ತೆ ಅಗೆದು ನಿರ್ಲಕ್ಷ್ಯ ತೋರುವವರಿಗೆ ಬಿಬಿಎಂಪಿ ಅಧಿಕಾರಿಗಳು ಈ ಬಾರಿ ಬಿಸಿ ಮುಟ್ಟಿಸಿದ್ದು, ಅನಧಿಕೃತವಾಗಿ ರಸ್ತೆ ಅಗೆದ ಮಹಿಳೆ ಮೇಲೆ ಎಫ್.ಐ.ಆರ್ ದಾಖಲಿಸಲಾಗಿದೆ.



ದಾಸರಹಳ್ಳಿ ವಲಯದ ಆರ್.ಕೆ ಲೇಔಟ್ 3ನೇ ಕ್ರಾಸ್ ರಸ್ತೆಯಲ್ಲಿ ಜ್ಯೋತಿ ಆರ್. ಎಂಬಾಕೆ ನಾಲ್ಕು ದಿನಗಳ ಹಿಂದೆ ಅನಧಿಕೃತವಾಗಿ ರಸ್ತೆ ಅಗೆದಿರುವ ಕುರಿತು ವಲಯ ಆಯುಕ್ತ ಸತೀಶ್ ವ್ಯಾಟ್ಸಪ್ ಗ್ರೂಪ್ ಮುಖಾಂತರ ಕಾನೂನ ಕ್ರಮ ಕೈಗೊಳ್ಳಲು ಸೂಚಿಸಿದ್ದರು.

ಇದಕ್ಕೆ ಸಂಬಂಧಿಸಿದಂತೆ ದಾಸರಹಳ್ಳಿ ವಲಯದ ಮುಖ್ಯ ಅಭಿಯಂತರ ಬಸವರಾಜ್ ಕಬಾಡೆ ನೇತೃತ್ವದಲ್ಲಿ ಪಾಲಿಕೆ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದಾಗ ಆರ್.ಕೆ ಲೇಔಟ್ 3ನೇ ಕ್ರಾಸ್ ರಸ್ತೆಯಲ್ಲಿ ಬರುವ ಮನೆ ಮಾಲೀಕೆ ಜ್ಯೋತಿ ಪಾಲಿಕೆಯಿಂದ ಯಾವುದೇ ಅನುಮತಿ ಪಡೆ-ಯದೆ ನಿಯಮಬಾಹೀರವಾಗಿ ರಸ್ತೆಯನ್ನು ಅಗೆದು ಸಾರ್ವಜನಿಕ ಸ್ವತ್ತನ್ನ ಹಾಳು ಮಾಡಿರುವುದು ಗೊತ್ತಾಗಿದೆ.

ಆದ್ದರಿಂದ, ರಸ್ತೆ ಅಗೆದವರ ಮೇಲೆ ಕಾನೂನು ರೀತಿಯ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು ಬಾಗಲಗುಂಟೆ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು, ಈ ಸಂಬಂಧಿಸಿದಂತೆ ಎಫ್.ಐ.ಆರ್ ದಾಖಲಿಸಿದ್ದಾರೆ.

# ಜನಸಾಮಾನ್ಯರಿಗೆ ಹೊರೆಯಾಗದಂತೆ ದರ ಇಳಿಸುವಂತೆ ಮುದ್ನಾಳ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ,ಏ.4-ರಾಜ್ಯದಲ್ಲಿ ಗ್ಯಾರಂಟಿ ಹೆಸರಿನಲ್ಲಿ ಅಧಿಕಾರಕ್ಕೆ ಬಂದ ಸರಕಾರ ಈಗ ಪದೇ ಪದೇ ದರ ಏರಿಕೆ ಮಾಡಿ ಜನಸಾಮಾನ್ಯರಿಗೆ ಹೊರೆ ಮಾಡುತ್ತಿದ್ದು ಇದರಿಂದ ಬಡಜನರು ಬದುಕು ಸಾಗಿಸುವದು ಕಷ್ಟವಾಗಲಿದೆ ಸರಕಾರ ಡಿಸೇಲ್, ಹಾಲು, ವಿದ್ಯುತ್ ದರ ಪರಿಶೀಲನೆ ಮಾಡಿ ದರ ಇಳಿಸಬೇಕೆಂದು ಒತ್ತಾಯಿಸಿ ಸಮಾಜಿಕ ಹೋರಾಟಗಾರ ಉಮೇಶ್ ಅವರ ನೇತೃತ್ವದಲ್ಲಿ ಗಿರಿನಾಡು ಟ್ಯಾಕ್ಸಿ ಚಾಲಕರ ಸಂಘವು ನಗರದ ಸುಭಾಷ್ ವೃತ್ತದ ಸಮೀಪದ ಪೆಟ್ರೋಲ್ ಬಂಕ್ ಮುಂದೆ ಪ್ರತಿಭಟನೆ ನಡೆಸಲಾಯಿತು.

ರಾಜ್ಯ ಸರಕಾರ ಕೂಡಲೇ ಎಲ್ಲಾ ಅಗತ್ಯ ವಸ್ತುಗಳ ದರ ಇಳಿಸುವಂತೆ ಪ್ರತಿಭಟನಾಕಾರರು ಆಗ್ರಹಿಸಿದರು. ರಾಜ್ಯ ಸರಕಾರ ಹಾಲಿನ ದರ, ವಿದ್ಯುತ್ ದರ, ಪೆಟ್ರೋಲ್ ದರ ಏರಿಕೆ ಮಾಡಿ ಜನ ಸಾಮಾನ್ಯರಿಗೆ ಹೊರೆ ಮಾಡಿತ್ತು. ಈಗ ಏಕಾಏಕಿ ಡಿಸೇಲ್ ದರ ಹೆಚ್ಚಿಸಿ ದರ ಏರಿಕೆ ಶಾಕ್ ನೀಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಸಮಾಜಿಕ ಹೋರಾಟಗಾರ ಉಮೇಶ್ ಮುದ್ನಾಳ ಅವರು ಮಾತನಾಡಿ, ಸರಕಾರ ರಾತೆ-ರೋ ರಾತ್ರಿ ಎರಡು ರೂಪಾಯಿ ಡಿಸೇಲ್ ಏರಿಕೆ ಮಾಡಿದೆ. ಬೆಲೆ ಏರಿಕೆಯಿಂದ ಜನ ಸಾಮನ್ಯರಿಗೆ ಹೊರೆಯಾಗಿದೆ. ಎಲ್ಲಾ ದರ ಏರಿಕೆ ಮಾಡಲಾಗಿದೆ. ಆದರೆ, ರೈತರು ಬೆಳೆದ ಬೆಳೆಗೆ ಹೆಚ್ಚಿನ ವೈಜ್ಞಾನಿಕ ದರ ಸರಕಾರ ನಿಗದಿ ಮಾಡಿಲ್ಲ. ಇದು ರೈತರು ಆರ್ಥಿಕವಾಗಿ ಕಷ್ಟ ಎದುರಿಸುವಂತಾಗಿದೆ. ಡಿಸೇಲ್ ದರ ಏರಿಕೆಯಿಂದ ರೈತರು ಕೃಷಿ ಚಟುವಟಿಕೆಗಳಿಗೆ ಬಳಸುವ ಟ್ರಾಕ್ಟರ್ ಬಳಕೆ ಮಾಡಲು ಕಷ್ಟವಾಗಲಿದೆ. ಆಟೋ ಹಾಗೂ ಟ್ಯಾಕ್ಸಿ ಚಾಲಕರು, ಆಟೋ ಚಾಲಕರಿಗೂ ಕಷ್ಟವಾಗಲಿದೆ. ಸರಕಾರ ಡಿಸೇಲ್ ದರ ಏರಿಕೆ ಬಗ್ಗೆ ಪರಿಶೀಲನೆ ಮಾಡಿ ದರ ಇಳಿಸಬೇಕು ಇಲ್ಲದಿದ್ದರೆ ಹೋರಾಟ ಮಾಡಲಾಗುತ್ತದೆ. ಮುಂದಿನ ದಿನಗಳಲ್ಲಿ ದರ ಏರಿಕೆ ಬರೆ ಎಳೆಯುತ್ತಿರುವ ಸರಕಾರಕ್ಕೆ ಮತದಾರರು ಪಾಠ ಕಲಿಸಲಿದ್ದಾರೆ ಎಂದರು.

ಈ ವೇಳೆ ಟ್ಯಾಕ್ಸಿ ಚಾಲಕರ ಸಂಘದ ಉಪಾಧ್ಯಕ್ಷರ ಶರಣು ನಾರಾಯಣಪೇಟೆ , ಸಾಬಯ್ಯ ಗುತ್ತೇದಾರ್ ಗಣೇಶ್ ಯಾದಗಿರಿ, ಜಮಾಲ್ ಬಿಳರ್, ವೀರೇಶ್ ನೈಕಲ್, ವಹಬ್ ಪಾಶ, ಹಸನ್ ಉಲ್ಕಲ್, ವೆಂಕಟರೆಡ್ಡಿ ನೈಕಲ್, ಅಜಿಜ್, ರಿಯಾಜ್ ನೈಕಲ್, ಸಲೀಂ, ರಶೀದ್ ಪಾಷಾ ಕನಪುರ್, ನಾರಾಯಣ, ಮಲ್ಲಪ್ಪ, ರವಿ, ಜಗ್ಗು, ಚಂದ್ರು, ರವಿ ಕಾನಪುರ್, ಕೃಷ್ಣ ಕಾನಪುರ್, ಸುಭಾಷ್ ಕಾನಪುರ್ ಇತರರು ಇದ್ದರು.

# ನಗರದ ನಿಟ್ಟೆ ಮೀನಾಕ್ಷಿಯಲ್ಲಿ ಅನಾದ್ಯಂತ ಸಾಂಸ್ಕೃತಿಕ ಉತ್ಸವ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಏ.4-'ಸಾಂಸ್ಕೃತಿಕ ಉತ್ಸವಗಳು ತಂತ್ರಜ್ಞಾನದ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸದ ಸಂವರ್ಧನೆಗೆ ಹಾಗೂ ಸಬಲೀಕರಣಕ್ಕೆ ನೆರವಾಗುತ್ತವೆ ಎಂದು ನೋಕಿಯ ಮೊಬೈಲ್ ನೆಟ್ವರ್ಕ್ ನಿರ್ದೇಶಕಿ ಪೊನ್ನಿ ಕೃಷ್ಣಮೂರ್ತಿ ಹೇಳಿದರು.

ನಗರದ ಯಲಹಂಕದ ನಿಟ್ಟೆ ಮೀನಾಕ್ಷಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಪ್ರತಿಷ್ಠಿತ ರಾಷ್ಟ್ರಮಟ್ಟದ ತಂತ್ರಜ್ಞಾನ ಹಾಗೂ ಸಾಂಸ್ಕೃತಿಕ ಉತ್ಸವ 'ಅನಾದ್ಯಂತ-2025' ಅನ್ನು ಉದ್ಘಾಟಿಸಿ ಮಾತನಾಡಿ, ಅನ್ವೇಷಣೆಗಳು ಜಗತ್ತಿನ ಸಮಾಜದ ಸಮಸ್ಯೆಗಳಿಗೆ ಪರಿಹಾರ ಸೂಚಿಸುತ್ತವೆ. ಈ ನಿಟ್ಟಿನಲ್ಲಿ ತಂತ್ರಜ್ಞರು ನೀಡುವ ಕೊಡುಗೆ ಅಪಾರ. ಒಳಗೊಳ್ಳುವಿಕೆಯ ಮನೋಧರ್ಮ ಉತ್ತಮ ಭವಿಷ್ಯ ರೂಪಿಸಿಕೊಳ್ಳಲೂ ನೆರವಾಗುತ್ತದೆ ಎಂದರು.

ರಾಷ್ಟ್ರದ ವಿವಿಧ ತಾಂತ್ರಿಕ ಮಹಾವಿದ್ಯಾಲಯಗಳನ್ನು ಪ್ರತಿನಿಧಿಸಿದ್ದ ಸಹಸ್ರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಈ ಸಲದ 'ಅನಾದ್ಯಂತ'ದ ಚರ್ಚೆಯ ವಿಷಯ ? 'ರಿಧಮ್ ಆಫ್ ಭಾರತ' ಅಂದರೆ 'ಭಾರತದ ಪ್ರಗತಿಯ ಲಯ' ಎಂಬ ಅಡಿಬರಹದೊಂದಿಗೆ 'ಅನಾದ್ಯಂತ-2025' ತಂತ್ರಜ್ಞಾನದ ಸದ್ಬಳಕೆಗೆ ಹಾಗೂ ವಿಕಸಿತ ಭಾರತ ಕುರಿತಂತೆ ಅನ್ವೇಷಣಾಧಾರಿತ ಸಂವಾದಗಳಿಗೆ ವೇದಿಕೆ ಕಲ್ಪಿಸಿತು. ಉತ್ಸವದಲ್ಲಿ 'ಕೋಡ್ ವಾರ್ಸ್', 'ಸೋಲೋ ಡ್ಯಾನ್ಸ್', 'ಮೋನೋ ಆ?ಯಕ್ಟಿಂಗ್', 'ಸ್ಟ್ರೀಟ್ ಪ್ಲೇ', 'ಕ್ವಿಜ್', 'ರೀಲ್ ಮೇಕಿಂಗ್', 'ಮೊಬೈಲ್ ಫೋಟೋಗ್ರಫಿ', 'ಬ್ಯಾಟಲ್ ಆಫ್ ಬ್ಯಾಂಡ್ಸ್', ಚಿತ್ರಕಲೆ ಸ್ಪರ್ಧೆ, 'ಟ್ಯಾಟೂ ಮೇಕಿಂಗ್', ನೃತ್ಯ, ಚರ್ಚಾ ಸ್ಪರ್ಧೆ, ಕ್ರೀಡೆ, 'ಕೊರಿಯೋ ನೈಟ್', ಫ್ಯಾಶನ್ ಶೋ ಮೊದಲಾದ ಚಟುವಟಿಕೆಗಳೂ ನಡೆದವು. ದಕ್ಷಿಣ ಭಾರತೀಯ ಚಿತ್ರರಂಗದ ಪ್ರಸಿದ್ಧ ನಟಿ ಹಾಗೂ ಶಾಸ್ತ್ರೀಯ ನೃತ್ಯ ಕಲಾವಿದೆ ಲಕ್ಷ್ಮೀ ಗೋಪಾಲಸ್ವಾಮಿ ಅವರು ಮಾತನಾಡಿ, ಈ ನೈಜ ಜಗತ್ತಿನಲ್ಲಿ ಯಶಸ್ವಿಯಾಗಲು ಮಾನವೀಯ ಮೌಲ್ಯಗಳೊಂದಿಗೆ ಸಾಂಸ್ಕೃತಿಕ ಉತ್ಸವಗಳು ಅಗತ್ಯ. ಇವು ವಿದ್ಯಾರ್ಥಿಗಳು ತಮ್ಮ ಸ್ವಭಾವಗಳನ್ನು ಸಕಾರಾತ್ಮಕವಾಗಿ ಬೆಳೆಸಿಕೊಳ್ಳುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ' ಎಂದರು.

ನಿಟ್ಟೆ ವಿವಿ ಪ್ರಾಂಶುಪಾಲ ಡಾ.ಎಚ್.ಸಿ. ನಾಗರಾಜ್ ಸ್ವಾಗತಿಸಿದರು. ನಿಟ್ಟೆ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ರೋಹಿತ್ ಪೂಂಜ ಅಧ್ಯಕ್ಷತೆ ವಹಿಸಿದ್ದರು. ನಿಟ್ಟೆ ಪರಿಗಣಿತ ವಿಶ್ವವಿದ್ಯಾಲಯದ ಬೆಂಗಳೂರು ಆವರಣದ ಉಪಾಧ್ಯಕ್ಷ ಡಾ.ಸಂದೀಪ್ ಶಾಸ್ತ್ರಿ, ಶೈಕ್ಷಣಿಕ ಮುಖ್ಯಸ್ಥ ಡಾ.ಜೆ.ಸುಧೀರ್ ರೆಡ್ಡಿ, ಅನಾದ್ಯಂತ ಉತ್ಸವದ ಶಿಕ್ಷಕ ಸಂಯೋಜಕರಾದ ವಿದ್ಯಾರ್ಥಿ ಕಲ್ಯಾಣ ವಿಭಾಗದ ಮುಖ್ಯಸ್ಥೆ ಡಾ.ಹಿತಾ.ಡಿ.ಶೆಟ್ಟಿ, ಮತ್ತು ಡಾ.ಎ.ಸಿ.ರಾಮಚಂದ್ರ, ಉತ್ಸವದ ತಾಂತ್ರಿಕ ವಿಭಾಗವಾದ 'ಗೀಕ್‌ಮೇಹೆಮ್'ನ ಶಿಕ್ಷಕ ಸಂಯೋಜಕ ಡಾ. ಪರಮೇಶಾಚಾರಿ ಬಿ.ಡಿ, ವಿಭಾಗಗಳ ಮುಖ್ಯಸ್ಥರು, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಸಮಾರಂಭದಲ್ಲಿ ಪಾಲ್ಗೊಂಡಿದ್ದರು..

ಏ.6 ರಂದು ಪಟ್ಟಣದಲ್ಲಿ ಶ್ರೀ ರಾಮಚಂದ್ರಜೀ ಮೂರ್ತಿಯ ಭವ್ಯ ಶೋಭಾಯಾತ್ರೆ

# ಯಶಸ್ವಿಗೆ ಸರ್ವ ಸಮಾಜದ ಸಹಕಾರ ಇರಲಿ: ಹಜೇರಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದಲ್ಲಿ ಪ್ರಥಮ ಬಾರಿಗೆ ಶ್ರೀ ರಾಮನವಮಿ ಉತ್ಸವ ಸಮಿತಿ ವತಿಯಿಂದ ಏಪ್ರೀಲ್ 6 ರಂದು ಮರ್ಯಾದಾಪುರುಷೋತ್ತಮ ಶ್ರೀ ರಾಮಚಂದ್ರ ಜೀ ಅವರ ಭವ್ಯ ಮೂರ್ತಿಯ ಮೆರವಣಿಗೆ ನಡೆಯಲಿದ್ದು ಇದರ ಯಶಸ್ವಿಗೆ ಪಟ್ಟಣದ ಸರ್ವ ಸಮಾಜದ ಬಾಂಧವರು ಸಹಕರಿಸಬೇಕು ಎಂದು ಶ್ರೀ ರಾಮನವಮಿ ಉತ್ಸವ ಸಮಿತಿ ಮಾರ್ಗದರ್ಶಕ ಸುರೇಶ ಹಜೇರಿ ಮನವಿ ಮಾಡಿಕೊಂಡರು. ಶುಕ್ರವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಉತ್ಸವ ಸಮಿತಿ ವತಿಯಿಂದ ಕರೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಏ.6 ರಂದು ಸಾಯಂಕಾಲ 4:00 ಘಂಟೆಗೆ ಶ್ರೀ ಮಹಾರಾಣಾ ಪ್ರತಾಪ ಸಿಂಹ ಸರ್ಕಲ್ ದಿಂದ ಆರಂಭವಾಗುವ ಶೋಭಾ ಯಾತ್ರೆಗೆ ಖಾಸ್ಗತೇಶ್ವರ ಮಠದ ಪೂಜ್ಯಶ್ರೀ ಸಿದ್ದಲಿಂಗ ದೇವರು ಹಾಗೂ ಗುಂಡಕನಾಳದ ಪೂಜ್ಯ ಶ್ರೀ ಗುರುಲಿಂಗಶಿವಾಚಾರ್ಯರು ಚಾಲನೆ ನೀಡುವರು. ಈ ಶೋಭಾ ಯಾತ್ರೆ ಸಕಲ ವಾದ್ಯ ಮೇಳಗಳೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಮತ್ತೆ ಮಹಾರಾಣಾ ಪ್ರತಾಪ್ ಸಿಂಹ ಸರ್ಕಲ್ ಗೆ ಆಗಮಿಸುವುದು, ಈ ಶೋಭಾ ಯಾತ್ರೆಯಲ್ಲಿ ಕನಿಷ್ಠ 2ರಿಂದ 3 ಸಾವಿರ ರಾಮ ಭಕ್ತರು ಸೇರಲಿದ್ದಾರೆ. ಕಾರ್ಯಕ್ರಮದ ಕೊನೆಯಲ್ಲಿ ಎಲ್ಲರಿಗೂ ಪ್ರಸಾದ ವ್ಯವಸ್ಥೆ ಇರುವುದು. ಈ ಕಾರ್ಯಕ್ರಮದ ಆಮಂತ್ರಣವನ್ನು ಪಟ್ಟಣದ ಎಲ್ಲ ಸಮಾಜದ ಗಣ್ಯರಿಗೆ ನೀಡಲಾಗಿದೆ ಎಂದರು. ಶ್ರೀ ರಾಮನವಮಿ ಉತ್ಸವ ಸಮಿತಿಯ ಸದಸ್ಯರಾದ ಅಮಿತ್ ಸಿಂಗ್ ಮನಗೂಳಿ ಹಾಗೂ ಗೋವಿಂದ್ ಸಿಂಗ್ ( ಪಿಂಟು) ಹಜೇರಿ ಮಾತನಾಡಿ ಪಟ್ಟಣದಲ್ಲಿ ಪ್ರಥಮ ಬಾರಿಗೆ ನಡೆಯುತ್ತಿರುವ ಈ ಶೋಭಾ ಯಾತ್ರೆಯ ಎಲ್ಲ ಸಿದ್ಧತೆಗಳು ನಡೆದಿದ್ದು ಇದೊಂದು ಐತಿಹಾಸಿಕ ಕಾರ್ಯಕ್ರಮವನ್ನಾಗಿಸಲು ಪ್ರಯತ್ನಿಸುತ್ತಿದ್ದೇವೆ, ಇದಕ್ಕೆ ಸರ್ವ ಸಮಾಜದ ಬಾಂಧವರ ಸಹಕಾರ ಬೇಕು ಎಂದರು. ಪತ್ರಿಕಾಗೋಷ್ಠಿಯಲ್ಲಿ ಶ್ರೀ ರಾಮನವಮಿ ಉತ್ಸವ ಸಮಿತಿಯ ಸದಸ್ಯರಾದ ವಿಠಲ್ ಬೆಕಿನಾಳ, ನಿತಿನ್ ಹಜೇರಿ, ಗಂಗಾರಾಮ್ ಕೊಕಟನೂರ, ರಾಜು ಹಜೇರಿ, ಸಂದೀಪ ತಿವಾರಿ, ಸೂರಜ್ ಹಜೇರಿ, ಪಿಂಟು ಹಜೇರಿ, ರಾಮು ದೇವಿ ಇದ್ದರು.

# ಮಹಾಬೋಧಿ ಮಹಾವಿಹಾರ ಮುಕ್ತಿ ಆಂದೋಲನ ಹೋರಾಟಕ್ಕೆ ಆರ್.ಪಿ.ಐ (ಅಂಬೇಡ್ಕರ್) ಪಕ್ಷದ ಸಂಪೂರ್ಣ ಬೆಂಬಲ - ಮಹೇಶ ಗೋರನಾಳಕರ್

ಮಲ್ಲಮ್ಮ ನುಡಿ ವಾರ್ತೆ

ಬೀದರ: ಏ. 5 ರಂದು ಬೀದರ ಜಿಲ್ಲಾ ಬೌದ್ಧ ಭಿಕ್ಕು ಭಿಕ್ಕುಣಿಯರ ಮತ್ತು ಉಪಾಸಕ ಉಪಾಸಕಿಯರ ಸಂಘದಿಂದ

ಬಿ.ಟಿ ಕಾಯ್ದೆ 1949 ರದ್ದುಗೊಳಿಸಿ ಮಹಾ ಬೋಧಿ ಮಹಾವಿಹಾರ ಆಡಳಿತ ಸಂಪೂರ್ಣ ಬೌದ್ಧರಿಗೆ ನೀಡಲು ಒತ್ತಾಯಿಸಿ ಬುದ್ಧಗಯಾದ ಮಹಾಬೋಧಿ ಮಹಾವಿಹಾರ ಮುಕ್ತಿ ಆಂದೋಲನಕ್ಕೆ ಬೆಂಬಲಿಸಿ ನಡೆಯುತ್ತಿರುವ ಬೃಹತ್ ಪ್ರತಿಭಟನೆ ಹೋರಾಟಕ್ಕೆ ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ (ಅಂಬೇಡ್ಕರ್) ಸಂಪೂರ್ಣ ಬೆಂಬಲ ನೀಡಲಿದೆ.



ಸಂವಿಧಾನಬದ್ಧ ಐತಿಹಾಸಿಕವಾಗಿ ವಿಶ್ವ ಮಟ್ಟದಲ್ಲಿ ಗಮನ ಸೆಳೆದ ಈ ಹೋರಾಟಕ್ಕೆ ಡಾ.ಬಾಬಾಸಾಹೇಬ್ ಅಂಬೇಡ್ಕರ್ ರವರು ಸ್ಥಾಪಿಸಿರುವ ರಾಜಕೀಯ ಪಕ್ಷ ಆರ್.ಪಿ.ಐ ಧಾರ್ಮಿಕವಾಗಿ ಸ್ಥಾಪಿಸಿರುವ ಭಾರತೀಯ ಬೌದ್ಧ ಮಹಾಸಭೆ ಹಾಗೂ ಸಾಮಾಜಿಕವಾಗಿ ಸ್ಥಾಪಿಸಿರುವ ಸಮತಾ ಸೈನಿಕ ದಳದ ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು, ಸೈನೀಕರು, ಬುದ್ಧ ಬಸವ ಅಂಬೇಡ್ಕರ್ ರವರ ಅನುಯಾಯಿಗಳು, ಬೌದ್ಧ ಉಪಾಸಕರು ಉಪಾಸಕಿಯರು ಹೋರಾಟಗಾರರು, ಸಂವಿಧಾನ ಪ್ರೇಮಿಗಳು, ಬುದ್ಧಿಜೀವಿಗಳು, ಚಿಂತಕರು, ಮಹಿಳೆಯರು, ಯುವಕರು, ವಿಧ್ಯಾರ್ಥಿಗಳು ಬೆಂಬಲಿಸಿ ದಿನಾಂಕ 5-4-2025 ರಂದು ಮುಂಜಾನೆ 11 ಗಂಟೆಗೆ ಬೀದರನ ಡಾ.ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿಗಳ ಕಛೇರಿ ವರೆಗೆ ನಡೆಯುವ ಬೃಹತ್ ಪ್ರತಿಭಟನಾ ಹೋರಾಟದಲ್ಲಿ ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಆರ್.ಪಿ.ಐ (ಅಂಬೇಡ್ಕರ್) ಪಕ್ಷದ ರಾಜ್ಯಾಧ್ಯಕ್ಷ ಮಹೇಶ ಗೋರನಾಳಕರ್ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಪೊಲೀಸ್ ಇಲಾಖೆಯಿಂದ ಹದ್ದಿನ ಕಣ್ಣು





ಬೀದರ್‌ನ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಅಳವಡಿಸಿರುವ ಅತ್ಯಾಧುನಿಕ ಕ್ಯಾಮೆರಾಗಳು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 04 :ಅಪರಾಧ ಕೃತ್ಯಗಳು ನಡೆಯದಂತೆ ತಡೆಯಲು ಬೀದರ್ ಜಿಲ್ಲಾ ಪೊಲೀಸರು ಜಿಲ್ಲೆಯಾದ್ಯಂತ ಅತ್ಯಾಧುನಿಕ ಕ್ಯಾಮೆರಾಗಳನ್ನು ಅಳವಡಿಸಿದ್ದಾರೆ.

ಈ ಕ್ಯಾಮೆರಾಗಳ ಸಹಾಯದಿಂದ ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ನೂತನವಾಗಿ ಸ್ಥಾಪಿಸಿರುವ 'ಸಿಸಿಟಿವಿ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್' ಮೂಲಕ ನಿಗಾ ಇಡಲಾಗುತ್ತದೆ. 20 'ಆಟೋಮ್ಯಾಟಿಕ್ ನಂಬರ್ ಪ್ಲೇಟ್ ರಿಕ್ಗನಿಶನ್' (ಎಎನ್‌ಪಿಆರ್) ಮಾದರಿಯ 20 ಮತ್ತು 16 'ಫೇಸ್ ರಿಕ್ಗನಿಶನ್' (ಎಫ್‌ಆರ್) ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಬೀದರ್ ಜಿಲ್ಲೆಯೊಂದಿಗೆ ಗಡಿ ಹಂಚಿಕೊಂಡಿರುವ ಔರಾದ್, ಕಮಲನಗರ, ಮನ್ನಳ್ಳಿ–ಭಂಗೂರ, ಶಹಾಪುರ ಸೇರಿದಂತೆ ಇತರೆ ಭಾಗಗಳಲ್ಲಿ ಕಾಣಬಹುದು. ಇನ್ನು, ಬೀದರ್ ನಗರದ ಪ್ರಮುಖ ಜನನಿಬಿಡ ಸ್ಥಳಗಳಲ್ಲೂ ಅತ್ಯಾಧುನಿಕ ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಎಲ್ಲ ಕ್ಯಾಮೆರಾಗಳು 'ಎಐ ಪವರ್ಡ್' ಮೂಲಕ ಕೆಲಸ ನಿರ್ವಹಿಸುವುದು ವಿಶೇಷ. ಬೀದರ್ ಜಿಲ್ಲೆಯ ಮೂಲಕ ಸಂಚರಿಸುವ ಪ್ರತಿಯೊಂದು ವಾಹನಗಳ ವಿವರ ಈ ಕ್ಯಾಮೆರಾಗಳಲ್ಲಿ ದಾಖಲಾಗಿ, ಅವುಗಳಿಂದ ಕಮಾಂಡ್ ಸೆಂಟರ್‌ಗೆ ಮಾಹಿತಿ ತಲುಪುತ್ತದೆ. ಎಲ್ಲ ವಾಹನಗಳ ನಂಬರ್ ಪ್ಲೇಟ್ ಗುರುತಿಸಿ, ಅದರ ಸಂಪೂರ್ಣ ವಿವರ ಸಂಗ್ರಹವಾಗುತ್ತದೆ. ಬೀದರ್ ಜಿಲ್ಲೆಯಲ್ಲಿ ನಡೆದ ಅಪರಾಧ ಕೃತ್ಯಗಳಲ್ಲಿ ಭಾಗವಹಿಸಿದವರ ವಿವರ ಕಮಾಂಡ್ ಸೆಂಟರ್‌ನಲ್ಲಿ ಅವರ ಭಾವಚಿತ್ರದೊಂದಿಗೆ ಅಪ್‌ಲೋಡ್ ಮಾಡಲಾಗಿದ್ದು, ಈ ವ್ಯಕ್ತಿಗಳು ಜಿಲ್ಲೆಯ ಯಾವುದೇ ಭಾಗದಲ್ಲಿ ಸಂಚರಿಸಿದರೆ ತಕ್ಷಣವೇ ಕಮಾಂಡ್ ಸೆಂಟರ್‌ಗೆ ಅಲರ್ಟ್ ಮೆಸೇಜ್ ರವಾನೆಯಾಗುತ್ತದೆ. ಇದರ ಸಹಾಯದೊಂದಿಗೆ ಪೊಲೀಸರು ಆಗಬಹುದಾದ ಅಪರಾಧ ಕೃತ್ಯವನ್ನು ತಡೆಯಲು ಸಹಾಯವಾಗುತ್ತದೆ.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ?2 ಕೋಟಿ ಅನುದಾನದಲ್ಲಿ ಕಮಾಂಡ್ ಸೆಂಟರ್ ಹಾಗೂ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಜಿಲ್ಲೆಯಾದ್ಯಂತ ಈ ಹಿಂದೆ ಅಳವಡಿಸಿದ್ದ ಕ್ಯಾಮೆರಾಗಳು ಹಳತಾಗಿದ್ದವು. ಅವುಗಳಲ್ಲಿ ಅನೇಕವು ಕೆಟ್ಟು ಹೋಗಿದ್ದವು. ಕೆಲವದರಲ್ಲಿ ಸರಿಯಾಗಿ ದೃಶ್ಯಾವಳಿಗಳು ಸೆರೆಯಾಗುತ್ತಿರಲಿಲ್ಲ. ಇದನ್ನು ಮನಗಂಡು ಪೊಲೀಸ್ ಇಲಾಖೆಯು ಅತ್ಯಾಧುನಿಕ ಎಐ ಕ್ಯಾಮೆರಾಗಳನ್ನು ಅಳವಡಿಸಿದೆ. ತಂತ್ರಜ್ಞಾನದ ಸಹಾಯದೊಂದಿಗೆ ಅಪರಾಧ ಚಟುವಟಿಕೆಗಳನ್ನು ತಡೆಯಲು ಮುಂದಾಗಿದೆ. 'ಅಪರಾಧ ತಡೆಗೆ ಸಹಾಯ' ಅತ್ಯಾಧುನಿಕ ಕ್ಯಾಮೆರಾಗಳ ಅಳವಡಿಕೆ ಕಮಾಂಡ್ ಸೆಂಟರ್ ಸ್ಥಾಪಿಸುವ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರಿಗೆ ಅನುದಾನ ಕೋರಲಾಗಿತ್ತು. ಅವರು ಕೆಕೆಆರ್‌ಡಿಬಿಯಿಂದ ?2 ಕೋಟಿ ಅನುದಾನ ಕೊಟ್ಟಿದ್ದರಿಂದ ಇದು ಸಾಧ್ಯವಾಗಿದೆ. ಬೀದರ್ ಗಡಿ ಜಿಲ್ಲೆ ಆಗಿರುವುದರಿಂದ ನೆರೆಯ ಮಹಾರಾಷ್ಟ್ರ ಹಾಗೂ ತೆಲಂಗಾಣದಿಂದ ಬಂದು ಜಿಲ್ಲೆಯಲ್ಲಿ ಅಪರಾಧ ಕೃತ್ಯಗಳನ್ನು ಎಸಗಿ ಹೋಗುತ್ತಿರುವುದು ಗಮನಕ್ಕೆ ಬಂದಿದೆ. ಆದಕಾರಣ ಈ ಅತ್ಯಾಧುನಿಕ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಇದರಿಂದ ಅಪರಾಧ ತಡೆಗಟ್ಟಲು ಸಾಕಷ್ಟು ಸಹಾಯವಾಗಲಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ತಿಳಿಸಿದ್ದಾರೆ.

# ಲೈಸನ್ಸ್ ನವೀಕರಣದಲ್ಲಿ ಸೇವಾ ನ್ಯೂನ್ಯತೆ

## ಲೋಕೋಪಯೋಗಿ ಇಲಾಖೆಗೆ ದಂಡ-ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.4–ಗುತ್ತಿಗೆದಾರರಿಗೆ ಲೈಸನ್ಸ್ ನವೀಕರಣ ಮಾಡಿಕೊಡುವಲ್ಲಿ ಸೇವಾ ನ್ಯೂನ್ಯತೆ ಎಸಗಿದ ಲೋಕೋಪಯೋಗಿ ಇಲಾಖೆಗೆ 25 ಸಾವಿರ ರೂ.ಗಳ ದಂಡ ವಿಧಿಸಿರುವ ಜಿಲ್ಲಾ ಗ್ರಾಹಕರ ಆಯೋಗ ದೂರಿನ ಖರ್ಚು ನೀಡುವಂತೆ ತೀರ್ಪು ನೀಡಿ ಆದೇಶ ಹೊರಡಿಸಿದೆ.

ಕ್ಲಾಸ್–1 ಗುತ್ತಿಗೆದಾರ ವಿದ್ಯಾಗಿರಿ ನಿವಾಸಿ ಚಂದ್ರಶೇಖರ ಚಿನಗುಂಡಿ ಅವರ ಗುತ್ತಿಗೆ ಲೈಸನ್ಸ್ ಅವಧಿ ಜೂನ್ 29, 2020ಕ್ಕೆ ಮುಕ್ತಾಯಗೊಂಡಿತ್ತು. ಈ ಅವಧಿಯಲ್ಲಿ ಕೋವಿಡ್–19 ಸಾಂಕ್ರಾಮಿಕ ರೋಗ ದೇಶಾದ್ಯಂತ ಹಬ್ಬಿದ ಹಿನ್ನಲೆಯಲ್ಲಿ ನಿಗದಿತ ಅವಧಿಯಲ್ಲಿ ಲೈಸನ್ಸ್ ನವೀಕರಣ ಮಾಡಿಕೊಳ್ಳಲು ಆಗಿರುವದಿಲ್ಲ.

ಪರಿಸ್ಥಿತಿ ಸಾಮಾನ್ಯಗೊಂಡ ಬಳಿಕ ಮೇ 23, 2022 ರಂದು ಲೈಸನ್ಸ್ ನವೀಕರಣಕ್ಕೆ ಚಂದ್ರಶೇಖರ ನಿಗದಿತ ಶುಲ್ಕ ಮತ್ತು ದಂಡದೊಂದಿಗೆ ಅರ್ಜಿ ಸಲ್ಲಿಸಿದ್ದರು. ಪಿಡಬ್ಲ್ಯೂಡಿ ಇಲಾಖೆಯ ಅಧಿಕಾರಿಗಳು ಲೈಸನ್ಸ್ ನವೀಕರಣ ಅವಧಿಯನ್ನು ನೊಂದಣಿಯಾದ ಆಗಸ್ಟ 6, 2022 ರಿಂದ ಆಗಸ್ಟ 5, 2027 ವರೆಗೆ ನವೀಕರಿಸದೇ ಜೂನ್ 30, 2020 ರಿಂದ ಜೂನ್ 29, 2025 ವರೆಗೆ ಒಟ್ಟು 5 ವರ್ಷದ ಅವಧಿಗೆ ನವೀಕರಿಸಿ ಸೇವಾ ನ್ಯೂನ್ಯತೆ ಎಸಗಿರುತ್ತಾರೆ ಎಂದು ಅವರು ದೂರು ನೀಡಿದ್ದರು.

ಇದಕ್ಕೆ ಪಿಡಬ್ಲೂಡಿ ಇಲಾಖೆಯ ಅಧಿಕಾರಿಗಳು ಲೈಸನ್ಸ್ ನವೀಕರಣಕ್ಕಾಗಿ 1 ವರ್ಷ 11 ತಿಂಗಳ ತಡವಾಗಿ ಅರ್ಜಿ ಸಲ್ಲಿಸಿದ್ದಾರೆ ಎಂದು ಹೇಳಿ ದೂರು ವಜಾಗೊಳಿಸಲು ಆಕ್ಷೇಪಣೆ ಸಲ್ಲಿಸಿದ್ದರು. ಈ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಿದ ಜಿಲ್ಲಾ ಗ್ರಾಹಕರ ಆಯೋಗವು ನವೀಕರಣ ಮಾಡುವಲ್ಲಿ ಸೇವಾ ನ್ಯೂನ್ಯತೆ ಕಂಡು ಬಂದಿದೆ. ಅಲ್ಲದೇ ಅನುಚಿತ ವ್ಯಾಪಾರ ಪದ್ದತಿ ಅನುಸರಿಸಿದ್ದಾರೆಂದು ಆಯೋಗ ಅಭಿಪ್ರಾಯಪಟ್ಟು 25 ಸಾವಿರ ರೂ.ಗಳ ಪರಿಹಾರ, 5 ಸಾವಿರ ರೂ. ದೂರಿನ ಖರ್ಚು ಹಾಗೂ ತೀರ್ಪು ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ದೂರುದಾರರಿಗೆ ನೀಡುವಂತೆ ಆದೇಶಿಸಿದೆ. ಆದೇಶ ಪಾಲನೆ ಮಾಡುವಲ್ಲಿ ವಿಫಲವಾದಲ್ಲಿ ಪರಿಹಾರ ಮತ್ತು ದೂರಿನ ಖರ್ಚು ಸೇರಿ ಒಟ್ಟು 30 ಸಾವಿರ ರೂ.ಗಳಿಗೆ ಶೇ.8ರ ಬಡ್ಡಿಯನ್ನು ಹಾಕಿ ತೀರ್ಪು ಹೊರಡಿಸಿದ ದಿನದಿಂದ ಪೂರ್ತಿ ಹಣ ಸಂದಾಯ ಮಾಡುವಂತೆ ತೀರ್ಪು ನೀಡಿದೆ.

# ಪೋಕ್ಸೊ ಪ್ರಕರಣ; ಆರೋಪಿಗೆ 28 ವರ್ಷ ಜೈಲು ಶಿಕ್ಷೆ



ಮಲ್ಲಮ್ಮ ನುಡಿ ವಾರ್ತೆ


ಬೀದರ. ಏ. 04 : ಅಪ್ರಾಪ್ತ ಬಾಲಕಿಯನ್ನು ಅಪಹರಿಸಿ ಅತ್ಯಾಚಾರ ಎಸಗಿದ ಪೋಕ್ಸೋ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಆರೋಪ ಸಾಬೀತಾಗಿದ್ದರಿಂದ ಬುಧವಾರ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಲಯವು 28 ವರ್ಷ ಜೈಲು ಹಾಗೂ 70 ಸಾವಿರ ರೂ. ದಂಡ ವಿಧಿಸಿ ಆದೇಶ ಹೊರಡಿಸಿದೆ.

ಬೆನಕನಹಳ್ಳಿ ಗ್ರಾಮದ ನಿವಾಸಿ ಇಮ್ಯಾನುವೆಲ್ ಶಿಕ್ಷೆಗೊಳಗಾದ ಆರೋಪಿ ಎಂದು ಗುರುತಿಸಲಾಗಿದೆ.

2018ರಲ್ಲಿ ಬೆನಕನಳ್ಳಿ ಗ್ರಾಮದ ಅಪ್ರಾಪ್ತ ಬಾಲಕಿಯೊಬ್ಬಳನ್ನು ಅಪಹರಿಸಿ ಅತ್ಯಾಚಾರ ಎಸೆಯಲಾಗಿತ್ತು. ಈ ಘಟನೆಗೆ ಸಂಬಂಧಿಸಿದಂತೆ ಜನವಾಡಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿ, ಆರೋಪಿಯನ್ನು ಬಂಧಿಸಲಾಗಿತ್ತು. ಇದೀಗ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಲಯವು ಈ ಪೊಕ್ಸೋ ಪ್ರಕರಣ ಆರೋಪಿಗೆ ಶಿಕ್ಷೆ ವಿಧಿಸಿ ಆದೇಶ ಹೊರಡಿಸಿದೆ.

# ಬೆಳಗಾವಿ ಹಾಗೂ ಕಲಬುರಗಿ ವಿಭಾಗದಲ್ಲಿ ತಾಪಮಾನ ಹೆಚ್ಚಳ,

## ನರೇಗಾ ಕಾರ್ಮಿಕರಿಗೆ ಶೇ.30 ಕೆಲಸದ ಪ್ರಮಾಣ ಕಡಿತ: ಸಚಿವ ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ಪ್ರಸಕ್ತ ಸಾಲಿನ ಬೇಸಿಗೆಯಲ್ಲಿ ವಾಡಿಕೆಗಿಂತ ಹೆಚ್ಚು ತಾಪಮಾನ ಏರಿಕೆಯಾಗಿದ್ದು, ಹೆಚ್ಚಿನ ಬಿಸಿಲು ಇರುವ ಕಾರಣ, ಗ್ರಾಮೀಣ ಭಾಗದ ಜೀವನೋಪಾಯದ ಪ್ರಮುಖ ಭಾಗವಾದ ನರೇಗಾ ಯೋಜನೆಯಡಿ ಕೂಲಿ ಕೆಲಸ ಮಾಡುವ ಬೆಳಗಾವಿ ಮತ್ತು ಕಲಬುರಗಿ ಕಂದಾಯ ವಿಭಾಗದ ಕಾರ್ಮಿಕರಿಗೆ ಎಪ್ರಿಲ್ ಮತ್ತು ಮೇ ಮಾಹೆಗಳಲ್ಲಿ ಶೇ.30 ರಷ್ಟು ಕೆಲಸದ ಪ್ರಮಾಣದಲ್ಲಿ ರಿಯಾಯಿತಿ ಘೋಷಿಸಿರುವುದಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು ಬೇಸಿಗೆ ದಿನಗಳಲ್ಲಿ ಕೂಲಿ ಕಾರ್ಮಿಕರು ಶಾಖಾಘಾತದಿಂದ, ತಮ್ಮ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳನ್ನು ತಪ್ಪಿಸಲು ಬಿಳಿಯ ಬಣ್ಣದ ಸಡಿಲವಾದ ಖಾದಿ ಬಟ್ಟೆಗಳನ್ನು ಹಾಗೂ ತಲೆಯ ಮೇಲೆ ಬಿಳಿ ಬಣ್ಣದ ರುಮಾಲು ಧರಿಸಿ ಕೆಲಸ ಮಾಡಬೇಕು, ಚಹಾ, ಕಾಫಿ , ತಂಪಾದ ಪಾನೀಯಗಳು, ಮಸಾಲೆ ಮತ್ತು ಎಣ್ಣೆಭರಿತ ಆಹಾರದ ಬದಲಾಗಿ ಹೆಚ್ಚು ತೇವಾಂಶವುಳ್ಳ ತರಕಾರಿ, ಅಂಬಲಿ, ಮಜ್ಜಿಗೆ, ಎಳೆನೀರು ಸೇವನೆ ಮಾಡಬೇಕು ಹಾಗೂ ನೀರನ್ನು ಯಥೇಚ್ಛವಾಗಿ ಕುಡಿಯಬೇಕು ಎಂದು ಸಚಿವರು ಸಲಹೆ ಮಾಡಿದ್ದಾರೆ. ಸಂಬಂಧಿಸಿದ ಅಧಿಕಾರಿಗಳು ಕಾಮಗಾರಿ ಸ್ಥಳಗಳಲ್ಲಿ ಯೋಜನೆಯ ಮಾರ್ಗಸೂಚಿಯಂತೆ ಕಡ್ಡಾಯವಾಗಿ ನೆರಳು, ಶುದ್ಧ ಕುಡಿಯುವ ನೀರು, ಪ್ರಥಮ ಚಿಕಿತ್ಸಾ ಪೆಟ್ಟಿಗೆ ಮುಂತಾದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮವಹಿಸಲು ಸಚಿವರು ನಿರ್ದೇಶನ ನೀಡಿದ್ದಾರೆ.

# ಮದ್ಯ ಮಾರಾಟಗಾರರಿಂದ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.4–ವಿವಿಧ ಬೇಡಿಕೆಗಳಿಗೆ ಸರಕಾರವನ್ನು ಆಗ್ರಹಿಸಿ ನಗರದಲ್ಲಿ ಶುಕ್ರವಾರ ಬಾಗಲಕೋಟೆ ಜಿಲ್ಲಾ ಮದ್ಯ ಮಾರಾಟಗಾರರ ಸಂಘ ಪ್ರತಿಭಟನೆ ನಡೆಸಿತು.

ಜಿಲ್ಲಾಡಳಿತ ಭವನದ ಎದುರು ಜಿಲ್ಲೆಯ ವಿವಿಧ ಭಾಗಗಳಿಂದ ಬಂದಿದ್ದ ಮದ್ಯ ಮಾರಾಟಗಾರರು ಪ್ರತಿಭಟನೆ ನಡೆಸಿ ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು.

ಚಿಲ್ಲರೆ ಮದ್ಯ ಮಾರಾಟದ ಮೇಲೆ ಕನಿಷ್ಠ ಶೇ.20 ರಷ್ಟು ಲಾಭಾಂಶ ನೀಡಬೇಕು. ಹೆಚ್ಚುವರಿ ಅಬಕಾರಿ ಶುಲ್ಕವನ್ನು ಕಡಿಮೆಗೊಳಿಸಬೇಕು. ಸಿಎಲ್–9ಗಳಲ್ಲಿ ಹೆಚ್ಚುವರಿ ಕೌಂಟರಗಳಿಗೆ ಅವಕಾಶ ಕೊಡಬೇಕು ಎಂಬ ಬೇಡಿಕೆ ಸೇರಿ ಹಲವಾರು ಬೇಡಿಕೆಗಳನ್ನು ಈಡೇರಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಬರೆದ ಮನವಿ ಪತ್ರವನ್ನು ಜಿಲ್ಲಾಧಿಕಾರಿಗಳಿಗೆ ನೀಡಿದರು.

ಮುಧೋಳ, ಜಮಖಂಡಿ, ಬಾದಾಮಿ, ಇಳಕಲ್ಲ, ಬೀಳಗಿ ಸೇರಿ ವಿವಿಧ ತಾಲೂಕುಗಳಿಂದ ಮದ್ಯ ಮಾರಾಟಗಾರರ ಸಂಘಟನೆಯ ಪದಾಧಿಕಾರಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಸಂಘಟನೆಯ ಪ್ರಮುಖರಾದ ಪರುಶುರಾಮ ಮುಳಗುಂದ, ಮಾರುತಿರಾವ್ ಕಾಂಬಳೆ, ಗಿರೀಶ ಬಟಕುರ್ಕಿ, ಕೃಷ್ಣಪವಾರ ಮತ್ತಿತರರು ಭಾಗವಹಿಸಿದ್ದರು.

# ಗೃಹಲಕ್ಷ್ಮಿ ಹಣದಿಂದ ಸ್ವಾವಲಂಬನೆ ಬದುಕು ರೂಪಿಸಿಕೊಂಡ ಮಹಿಳೆಯರು :ಪರೋಪಕಾರಕ್ಕೂ ಸದ್ಬಳಕೆಯಾದ ಗೃಹಲಕ್ಷ್ಮಿ ಹಣ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಏ.04 :ಗೃಹಲಕ್ಷ್ಮಿ ಯೋಜನೆಯಡಿ ನೋಂದಣಿಯಾದ ಅರ್ಹ ಮಹಿಳಾ ಫಲಾನುಭವಿಯ ಖಾತೆಗೆ ರೂ.2000 ಗಳನ್ನು ಡಿ.ಬಿ.ಟಿ ಮೂಲಕ ಪ್ರತಿ ತಿಂಗಳು ಸರ್ಕಾರ ವರ್ಗಾವಣೆ ಮಾಡುತ್ತಿದೆ. ಈ ಹಣವನ್ನು ಸದ್ಬಳಕೆ ಮಾಡಿಕೊಂಡ ನಾರಿಯರು ತಮ್ಮ ಜೀವನದಲ್ಲಿ ಖುಷಿ, ನೆಮ್ಮದಿ ಹಾಗೂ ಸ್ವಾವಲಂಬನೆಯನ್ನು ಕಂಡು–ಕೊಂಡಿದ್ದು, ಪರೋಪಕಾರಕ್ಕೂ ಗೃಹಲಕ್ಷ್ಮಿ ಹಣ ಸದ್ಬಳಕೆ ಮಾಡುತ್ತಿದ್ದಾರೆ.

**ಗೃಹಲಕ್ಷ್ಮಿ ಹಣದಿಂದ ಮಾಂಗಲ್ಯ ಖರೀದಿಸಿದ ಮಹಿಳೆ:**

ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿ ಮಹಿಳೆಯೊಬ್ಬರು ಗೃಹಲಕ್ಷ್ಮಿ ಯೋಜನೆಯ ಧನಸಹಾಯದಿಂದ ಮಾಂಗಲ್ಯ ಖರೀದಿ ಮಾಡಿದ್ದಾರೆ. ಒಂದು ಹೊತ್ತು ಊಟಕ್ಕಾಗಿ ಬೆವರು ಸುರಿಸುವ ಮಹಿಳೆಯರಿಗೆ ಚಿನ್ನದ ಖರೀದಿ ದೂರದ ಮಾತು. ಗೃಹಲಕ್ಷ್ಮಿ ಹಣದಿಂದ ಮಕ್ಕಳ ವಿದ್ಯಾಭ್ಯಾಸದಿಂದ ಹಿಡಿದು ಬದುಕು ಕಟ್ಟಿಕೊಳ್ಳಲು ಈ ಹಣ ಅದೆಷ್ಟೋ ಕುಟುಂಬಗಳ ಖುಷಿಗೆ ಕಾರಣವಾಗಿದೆ.

**ಗೃಹಲಕ್ಷ್ಮಿ ಯೋಜನೆಯ ಹಣದಿಂದ ಗ್ರಾಮಸ್ಥರಿಗೆ ಹೋಳಿಗೆ ಊಟ:**

ಬೆಳಗಾವಿ ಜಿಲ್ಲೆಯ ರಾಯಬಾಗ ತಾಲ್ಲೂಕಿನ ಸುಟ್ಟಟ್ಟಿ ಗ್ರಾಮದ ಅಜ್ಜಿ ಶ್ರೀಮತಿ ಅಕ್ಕಾತಾಯಿ ಲಂಗೋಟಿ ಎಂಬ ಮಹಿಳೆಯು ಗೃಹಲಕ್ಷ್ಮಿ ಯೋಜನೆಯ ಧನಸಹಾಯದಿಂದ ಊರಿನ ಜನರಿಗೆ ಹೋಳಿಗೆ ಊಟ ಹಾಕಿಸಿ ತಮ್ಮ ಖುಷಿ ಹಂಚಿಕೊಂಡಿದ್ದಾರೆ.

**ಗೃಹಲಕ್ಷ್ಮಿ ಯೋಜನೆ ಹಣದಲ್ಲಿ ದೇವಿಗೆ ಬೆಳ್ಳಿ ಕಿರೀಟ:**

ವಿಜಯಪುರ ಜಿಲ್ಲೆಯ ಆಲಮೇಲ ತಾಲೂಕಿನ ಹೂವಿನಹಳ್ಳಿ ಗ್ರಾಮದ ಮಹಿಳೆ ಶ್ರೀಮತಿ ಭಾಗಮ್ಮ ಗುರುಶಾಂತಗೌಡ ಬಿರಾದಾರ ತಾವು ಗೃಹಲಕ್ಷ್ಮಿ ಹಣವನ್ನು ಕೂಡಿಟ್ಟು ಬೆಳ್ಳಿ ಕಿರೀಟ ಮಾಡಿಸಿ ನವರಾತ್ರಿ ನಿಮಿತ್ತ ಗ್ರಾಮದಲ್ಲಿ ಪ್ರತಿಷ್ಠಾಪನೆ ಮಾಡಲಾಗಿರುವ ದೇವಿಯ ಮೂರ್ತಿಗೆ 25 ತೊಲೆ ಬೆಳ್ಳಿ ಕರೀಟವನ್ನು ಮಾಡಿಸಿರುವುದು ವಿಶೇಷವಾಗಿದೆ.

–ಸ್ಮಿತ ಆರ್
ವಾರ್ತಾ ಸಹಾಯಕರು

# ತುಂಗಭದ್ರಾ ಎಡದಂಡೆ ಕಾಲುವೆ ಮೇಲೆ 24 ತಾಸು ನಿಗಾವಹಿಸಿ: ಪ್ರಾದೇಶಿಕ ಆಯುಕ್ತ ಎಂ.ಸುಂದರೇಶ ಬಾಬು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಏ.4:ತುಂಗಭದ್ರಾ ಎಡದಂಡೆ ಕಾಲುವೆಯ ವಿವಿಧ ಡಿಸ್ಟ್ರಿಬ್ಯೂಟರಗಳಿಗೆ ಹಂಚಿಕೆಯಾದ ನೀರನ್ನು ಸಮ ಪ್ರಮಾಣದಲ್ಲಿ ಹಂಚಿಕೆಯಾಗುವಂತೆ ನೋಡಿಕೊಳ್ಳಲು ದಿನದ 24 ತಾಸು ಟಾಸ್ಕಫೋರ್ಸ್ ಸಮಿತಿಯವರು ನಿಗಾವಹಿಸಬೇಕೆಂದು ಕಲಬುರಗಿ ವಿಭಾಗದ ಪ್ರಭಾರಿ ಪ್ರಾದೇಶಿಕ ಆಯುಕ್ತರಾದ ಎಂ.ಸುಂದರೇಶ ಬಾಬು ಹೇಳಿದರು. ಅವರು ಗುರುವಾರ ಸಂಜೆ ಡಿಸ್ಟ್ರಿಬ್ಯೂಟರ ನಂಬರ್–17 ದಾಸನಾಳ ಬ್ರಿಜ್ ಗಂಗಾವತಿ ಇಲ್ಲಿಗೆ ಅಧಿಕಾರಿಗಳೊಂದಿಗೆ ಆಗಮಿಸಿ ತುಂಗಭದ್ರಾ ಎಡದಂಡೆ ಕಾಲುವೆಗಳಿಗೆ ಹರಿಸಲಾದ ನೀರಿನ ಸಮರ್ಪಕ ಹಂಚಿಕೆಗೆ ಸಂಬಂದಪಟ್ಟಂತೆ ಖುದ್ದಾಗಿ ಕಾಲುವೆಗಳಿಗೆ ಭೇಟಿ ನೀಡಿ ಪರಿಶೀಲಿಸಿ, ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸರ್ಕಾರದ ಮುಖ್ಯಕಾರ್ಯದರ್ಶಿಗಳ ಆದೇಶದಂತೆ ತುಂಗಭದ್ರಾ ಎಡದಂಡೆ ಕಾಲುವೆಗೆ ಭೇಟಿ ನೀಡಿ ಸರಿಯಾದ ಪ್ರಮಾಣದಲ್ಲಿ ನೀರಿನ ಹರಿವನ್ನು ಖಾತ್ರಿ ಪಡಿಸಿಕೊಂಡು 3 ಸಾವಿರ ಕ್ಯೂಸೆಕ್ಸನಂತೆ ತುಂಗಭದ್ರಾ ಎಡದಂಡೆ ಕಾಲುವೆಗಳಿಗೆ ಹರಿಸಲಾಗುತ್ತಿರುವ ನೀರು ಈಗಾಗಲೇ ವಿವಿಧ ಡಿಸ್ಟ್ರಿಬ್ಯೂಟಗಳಿಗೆ ಹಂಚಿಕೆಯಂತೆ ಹರಿಸುವದರ ಜೊತೆಗೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ನಿಗಾವಹಿಸಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ವಡ್ಡರಹಟ್ಟಿ ವಿಭಾಗದ ಕಾರ್ಯಪಾಲಕ ಅಭಿಯಂತರಾದ ಎಮ್.ಎಸ್ ಗೋಡೆಕರ್ ಹಾಗೂ ಗಂಗಾವತಿ ತಹಶಿಲ್ದಾರ, ಟಾಸ್ಕಫೋರ್ಸ್ ಸಮಿತಿ ಸದಸ್ಯರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹಾಲು ದರ ಏರಿಕೆ ಹಿನ್ನೆಲೆ: 4 ರೂ. ಹಾಲು ಉತ್ಪಾದಕರ ಸಂಘಕ್ಕೆ ನೀಡಲು ಕಲಬುರಗಿ ಒಕ್ಕೂಟ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.4: ಇತ್ತೀಚೆಗೆ ರಾಜ್ಯ ಸರ್ಕಾರವು ಹಾಲಿನ ದರ ಪ್ರತಿ ಲೀಟರ್ ಗೆ 4 ರೂ. ಹೆಚ್ಚಳ ಮಾಡಿರುವುದನ್ನು ಸ್ವಾಗತಿಸಿರುವ ಕಲಬುರಗಿ–ಬೀದರ ಹಾಗೂ ಯಾದಗಿರು ಹಾಲು ಒಕ್ಕೂಟವು, ಹೆಚ್ಚಿನ ದರ 4 ರೂ. ಸಂಪೂರ್ಣವಾಗಿ ಹಾಲು ಉತ್ಪಾದಕರಿಗೆ ನೀಡಲು ನಿರ್ಧರಿಸಿದೆ. ಬುಧವಾರ ಒಕ್ಕೂಟದ ಕಚೇರಿಯಲ್ಲಿ ಒಕ್ಕೂಟದ ಅಧ್ಯಕ್ಷ ಆರ್. ಕೆ.ಪಾಟೀಲ ಅಧ್ಯಕ್ಷತೆಯಲ್ಲಿ ನಡೆದ ಆಡಳಿತ ಮಂಡಳಿ ಪ್ರಸ್ತುತ ಆಕಳು ಮತ್ತು ಎಮ್ಮೆ ಹಾಲು ಪ್ರತಿ ಲೀ. ಶೇಖರಣೆಗೆ 4 ರೂ. ಗಳಂತೆ ಹೆಚ್ಚಿಸಲು ಸಭೆಯಲ್ಲಿ ತೀರ್ಮಾನಿಸಿದ್ದು, ಈ ದರವು ಏಪ್ರಿಲ್ 1 ರಿಂದಲೆ ಅನ್ವಯವಾಗಲಿದೆ ಎಂದು ಸಭೆಯಲ್ಲಿ ನಿರ್ಣಯ ತೆಗೆದುಕೊಳ್ಳಲಾಗಿದೆ.

3.5–8.5 ಜಿಡ್ಡು ಮತ್ತು ಘನವಸ್ತು (ಈಂಖಿ–ಖಓಈ) ಹೊಂದಿದ ಆಕಳ ಹಾಲು ಪ್ರತಿ ಲೀ.ಗೆ ಪ್ರಸ್ತುತ ಒಕ್ಕೂಟವು ಸಂಘಗಳಿಗೆ 30.80 ರೂ. ನೀಡುತ್ತಿದ್ದು, ಪರಿಷ್ಕೃತ ದರದಂತೆ 34.80 ರೂ. ನೀಡಲಾಗುತ್ತದೆ. ಅದೇ ರೀತಿ ಎಮ್ಮೆ ಹಾಲಿಗೆ ಪ್ರತಿ ಲೀ.ಗೆ ಪ್ರಸ್ತುತ ಒಕ್ಕೂಟವು ಸಂಘಗಳಿಗೆ 42.00 ರೂ. ನೀಡುತ್ತಿದ್ದು, ಪರಿಷ್ಕೃತ ದರದಂತೆ 46.00 ರೂ. ನೀಡಲಾಗುವುದು. ಇನ್ನು ಸಂಘಗಳು ಪ್ರತಿ ಲೀ. ಆಕಳ ಹಾಲಿಗೆ 29.76 ರೂ. ಗಳು ಮತ್ತು ಎಮ್ಮೆ ಹಾಲಿಗೆ 40.96 ರೂ. ಉತ್ಪಾದಕರಿಗೆ ನೀಡುತ್ತಿದ್ದು, ಇನ್ನು ಮುಂದೆ ಪರಿಷ್ಕೃತ ದರದಂತೆ ಕ್ರಮವಾಗಿ ಆಕಳ ಹಾಲಿಗೆ 33.76 ರೂ. ಮತ್ತು ಎಮ್ಮೆ ಹಾಲಿಗೆ 44.96 ರೂ. ಉತ್ಪಾದಕರಿಗೆ ಸಂಘಗಳು ನೀಡಲಿವೆ ಎಂದು ಆರ್. ಕೆ.ಪಾಟೀಲ ಅವರು ತಿಳಿಸಿದ್ದಾರೆ.

**ದಾಖಲೆಯ 1.82 ಲಕ್ಷ ಲೀ. ಹಾಲು ಮಾರಾಟ:**

ಕಲಬುರಗಿಯ ಶ್ರೀ ಶರಣಬಸವೇಶ್ವರ ಜಾತ್ರೆಯ ದಿನ ಒಕ್ಕೂಟದ ವತಿಯಿಂದ 18,800 ಲೀಟರ್ ಮಜ್ಜಿಗೆ ಮಾರಾಟ ಮಾಡಲಾಗಿದೆ. ಆದೇ ರೀತಿ ಮಾರ್ಚ್ 31 ರಂದು ರಂಜಾನ ಹಬ್ಬದ ಪ್ರಯುಕ್ತ ಕಲಬುರಗಿ, ಬೀದರ ಮತ್ತು ಯಾದಗಿರಿ ಜಿಲ್ಲೆಯ ಗ್ರಾಹಕರ ಬೇಡಿಯ ಅನುಸಾರ ಒಕ್ಕೂಟದ ವತಿಯಿಂದ ಅತ್ಯಧಿಕ ದಾಖಲೆ ಪ್ರಮಾಣದ 1,82,210 ಲೀ. ಹಾಲು, 16,779 ಲೀ. ಮೊಸರು ಹಾಗೂ 245 ಕೆ.ಜಿ. ಖೋವಾ ಮಾರಾಟ ಮಾಡಲಾಗಿದೆ. ಇದಲ್ಲದೆ ಪ್ರಸ್ತುತ ಬೇಸಿಗೆ ಇರುವ ಕಾರಣ ಸರಾಸರಿ ಪ್ರತಿ ದಿನ 7,000 ಲೀ. ಮಸಾಲಾ ಮಜ್ಜಿಗೆ ಮತ್ತು 1,000 ಲೀ. ಲಸ್ಸಿ ಮಾರಾಟ ಮಾಡಲಾಗುತ್ತಿದೆ ಎಂದು ಅಧ್ಯಕ್ಷ ಆರ್.ಕೆ.ಪಾಟೀಲ ತಿಳಿಸಿದ್ದಾರೆ.

**ಮೇಗಾ ಡೈರಿ ನಿರ್ಮಾಣ ಘೋಷಣೆ,ಮಂಡಳಿ ಹರ್ಷ:**

ರಾಜ್ಯ ಸರ್ಕಾರವು ಇತ್ತೀಚೆಗೆ ಮಂಡಿಸಿದ 2025–26ನೇ ಸಾಲಿನ ಆಯವ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಲಬರುಗಿಯಲ್ಲಿ ಮೇಗಾ ಡೇರಿ ನಿರ್ಮಾಣಕ್ಕೆ ಸಂಬಂಧಿಸಿದಂತೆ 50 ಕೋಟಿ ರೂ. ಅನುದಾನ ಘೋಷಿಸಿದ್ದಕ್ಕೆ ಆಡಳಿತ ಮಂಡಳಿಯು ಹರ್ಷ ವ್ಯಕ್ತಪಡಿಸಿದೆ. ಈ ನಿರ್ಧಾರವು ಡೇರಿ ವಲಯದ ಅಭಿವೃದ್ಧಿಗೆ ಮತ್ತು ಒಕ್ಕೂಟದ ಮೂರು ಜಿಲ್ಲೆಯ ರೈತರು, ಹಾಲು ಉತ್ಪಾದಕರ ಏಳಿಗೆಗೆ ಮಹತ್ವದ ಕೊಡುಗೆಯಾಗಿರುತ್ತದೆ. ಇದಕ್ಕೆ ಕಾರಣಿಭೂತರಾದ ಮುಖ್ಯಮಂತ್ರಿಗಳು, ಸಚಿವ ಸಂಪುಟದ ಸಚಿವರು ಹಾಗೂ ಎಲ್ಲಾ ಚುನಾಯಿತ ಜನಪ್ರತಿನಿಧಿಗಳಿಗೆ ಒಕ್ಕೂಟವು ಕೃತಜ್ಞತೆ ಸಲ್ಲಿಸಿದೆ.

# ಇಂದು ಡಾ.ಬಾಬು ಜಗಜೀವನ ರಾಮ್ ಭವನದ ಭೂಮಿ ಪೂಜೆ ಹಾಗೂ ಶಂಕುಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ ಬೀದರ : ಏ.4: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ನಗರಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಏಪ್ರಿಲ್. 5 ರಂದು ಬೆಳಿಗ್ಗೆ 11 ಗಂಟೆಗೆ ಸರ್ವೆ ನಂ. 61, ಚಿಕ್ಕಪೇಟ್ ಬೀದರದಲ್ಲಿ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಭವನದ ಭೂಮಿ ಪೂಜೆ ಮತ್ತು ಶಂಕುಸ್ಥಾಪನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಭವನದ ಭೂಮಿ ಪೂಜೆ ಮತ್ತು ಶಂಕುಸ್ಥಾಪನೆಯನ್ನು ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ವಹಿಸಲಿದ್ದಾರೆ. ಹಾಗೂ ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ಔರಾದ (ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ್, ಬಸವಕಲ್ಯಾಣ ಶಾಸಕರಾದ ಶರಣು ಸಲಗರ, ಬೀದರ ದಕ್ಷಿಣ ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕರಾದ ಡಾ.ಸಿದ್ಧಲಿಂಗಪ್ಪ ಎನ್.ಪಾಟೀಲ್ ಹಾಗೂ ವಿಧಾನ ಪರಿಷತ್ ಶಾಸಕರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ್, ಡಾ.ಎಂ.ಜಿ.ಮೂಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಬೀದರ ನಗರಸಭೆ ಅಧ್ಯಕ್ಷರಾದ ಮಹ್ಮದ ಗೌಸ್, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ಅವರುಗಳು ಭಾಗವಹಿಸಲಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.